ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 111 ಸಂಚಿಕೆ- 111 | PAGE-8 ಪುಟ-8 | ಭಾನುವಾರ 08.06.2025 | RS.2/- ಬೆಲೆ 2/-

## ಕಾಲ್ತುಳಿತ: ಸಿಎಂ ವಿರುದ್ಧ ರಾಜ್ಯಪಾಲರಿಗೆ ದೂರು



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.7: ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದಲ್ಲಿ 11 ಮಂದಿ ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಲಾಗಿದೆ. ಬೆಂಗಳೂರು ಕೊಟ್ಟಿಗೆಪಾಳ್ಯದ ನಿವಾಸಿ ಗಿರೀಶ್ ಕುಮಾರ್ ಎಂಬುವವರು ಸುದೀರ್ಘ ಪತ್ರದೊಂದಿಗೆ ರಾಜ್ಯಪಾಲರಿಗೆ ದೂರು ನೀಡಿದ್ದಾರೆ.

ಐಪಿಎಲ್-ಆರ್‌ಸಿಬಿ ವಿಜಯೋತ್ಸವಕ್ಕೆ ಸಾರ್ವಜನಿಕರನ್ನು ಸ್ವತಃ ಮುಖ್ಯಮಂತ್ರಿಗಳೇ ಆಹ್ವಾನಿಸಿದ್ದಾರೆ. ಸರಿಯಾದ ವ್ಯವಸ್ಥೆ ಮಾಡದೇ, ನಿರ್ಲಕ್ಷ್ಯ ವಹಿಸಿದ ಕಾರಣ ಅಮಾಯಕರ ಸಾವು-ನೋವಾಗಿದೆ. ಈ ಹಿನ್ನೆಲೆ ಸೂಕ್ತ ಕ್ರಮ ಜರುಗಿಸುವಂತೆ ಕೋರಿದ್ದಾರೆ.

18 ವರ್ಷಗಳ ಬಳಿಕ ಆರ್‌ಸಿಬಿ ಕ್ರಿಕೆಟ್ ತಂಡ ಐಪಿಎಲ್‌ನಲ್ಲಿ ಟ್ರೋಫಿ ಗೆದ್ದಿದೆ. ಐಪಿಎಲ್ ಮೂಲ ಸಿದ್ಧಾಂತವೇ, ಆದಾಯ ಗಳಿಸುವಿಕೆ, ಇದು ರಾಜ್ಯ, ರಾಷ್ಟ್ರಮಟ್ಟದಲ್ಲಿ ದೇಶ ಪ್ರೇಮ ಜಾಗೃತಗೊಳಿಸುವ ಕೆಲಸವನ್ನೇನು ಮಾಡುವುದಿಲ್ಲ. ಐಪಿಎಲ್‌ನಿಂದ ಜೂಜಾಡಿಕೊಂಡು ಮನೆ - ಮಠ ಕಳೆದುಕೊಂಡಿರುವ ಪ್ರಕರಣಗಳಿವೆ. ಮ್ಯಾಚ್ ಫಿಕ್ಸಿಂಗ್‌ನಲ್ಲೂ ಭಾಗಿಯಾದ ಪ್ರಕರಣಗಗಳಿವೆ. ಖಾಸಗಿಯವರು ಆಟಗಾರರನ್ನ ಕೊಂಡುಕೊಂಡು ತಂಡಗಳನ್ನು ಮಾಡಿಕೊಂಡು ಆಟ ಆಡಿಸುತ್ತಾ ಅದರಲ್ಲಿ ಲಾಭದ ಉದ್ದೇಶವನ್ನೇ ಹೊಂದಿದ್ದಾರೆ. ಆಟಗಾರರಲ್ಲೂ ಸಹ ಉನ್ನತ ಸಿದ್ಧಾಂತ ಇರೋದಿಲ್ಲ. ಹೆಚ್ಚು ಹಣ ಕೊಟ್ಟವರ ತಂಡಕ್ಕಾಗಿ ಆಡುತ್ತಾರೆ.

ಈ ರೀತಿ ಗೆದ್ದವರಿಗೆ ಸರ್ಕಾರದ ಮಟ್ಟದಲ್ಲಿ ವೈಭದಿಂದ ಗೌರವಿಸಬಹುದೇ? ಇವರನ್ನ ಸ್ವತಃ ಡಿಸಿಎಂ ಹೋಗಿ ಏರ್‌ಪೋರ್ಟ್‌ನಲ್ಲಿ ಸ್ವಾಗತಿಸಿದ್ದಾರೆ.

ಹಾಗೇ ನೋಡಿದ್ರೆ ರಾಷ್ಟ್ರ, ರಾಜ್ಯಕ್ಕಾಗಿ ಆಡಿ ಪದಕ ಪಡೆದ ಅನೇಕ ಜನ ಆಟಗಾರರಿದ್ದಾರೆ. ಈ ಮಟ್ಟದಲ್ಲಿ ಸರ್ಕಾರಗಳಲ್ಲಿ ಆದ್ಯತೆ ಕೊಟ್ಟಿರುವುದಿಲ್ಲ. ಯುದ್ಧದಲ್ಲಿ ಹೋರಾಡಿ ವೀರ ಮರಣ ಹೊಂದಿದ ಯೋಧರ ಮನೆಗೂ ಭೇಟಿ ಕೊಡಲು ಆಸಕ್ತಿ ತೋರಲ್ಲ. ಆದ್ರೆ ಈ ತಂಡಕ್ಕೆ ಸ್ವಾಗತ ಕೋರಿರುವುದು ಎಷ್ಟು ಸರಿ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಅಮಾಯಕರ ಸಾವಿಗೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ದೂರಿನಲ್ಲಿ ಮನವಿ ಮಾಡಿದ್ದಾರೆ.

## ಕೈಗೆ ರಕ್ತ ಅಂಟಿಸಿಕೊಂಡಿರುವ ಸಿಎಂ,ಡಿಸಿಎಂ ರಾಜೀನಾಮೆಗೆ ಶೋಭಾ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.7: ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ವಿರುದ್ಧ ತೀವ್ರವಾಗ್ದಾಳಿ ನಡೆಸಿದ ಬಿಜೆಪಿ ನಾಯಕಿ ಮತ್ತು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ "ಕೈಗೆ

(2ನೇ ಪುಟ ನೋಡಿ)

## 'ಬಿಜೆಪಿ ಮಹಾರಾಷ್ಟ್ರ ಎಲೆಕ್ಷನ್ ನಲ್ಲಿ ಮ್ಯಾಚ್ ಫಿಕ್ಸಿಂಗ್ ಮಾಡಿದೆ': ರಾಹುಲ್ ಗಾಂಧಿ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.7: ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಗೆ ಅನುಕೂಲವಾಗುವಂತೆ ಸಜ್ಜುಗೊಳಿಸಲಾಗಿತ್ತು ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಶನಿವಾರ ಆರೋಪಿಸಿದ್ದಾರೆ. ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಅದೇ ತಂತ್ರಗಳನ್ನು ಬಿಜೆಪಿ ಪುನರಾವರ್ತಿಸಬಹುದು ಎಂದು ಎಚ್ಚರಿಸಿದ್ದಾರೆ.

2024ರ ಮಹಾರಾಷ್ಟ್ರ ಚುನಾವಣೆಯ ಸಂದರ್ಭದಲ್ಲಿ ನಡವಳಿಕೆಗಳನ್ನು ರಾಹುಲ್ ಗಾಂಧಿ ಪ್ರಶ್ನಿಸಿದ್ದಾರೆ. ಇದು ಮೋದಿ ಸರ್ಕಾರದ ಅಡಿಯಲ್ಲಿ ಚುನಾವಣಾ ಪ್ರಕ್ರಿಯೆಯ ಮೇಲೆ ಅವರ ಅತ್ಯಂತ ನೇರ ದಾಳಿಯಾಗಿದೆ ಎಂದು ಆರೋಪಿಸಿದ್ದಾರೆ.

ಎಕ್ಸ್ ಪೋಸ್ಟ್‌ನಲ್ಲಿ ಈ ಕುರಿತು ಬರೆದುಕೊಂಡಿರುವ ರಾಹುಲ್ ಗಾಂಧಿ, ಪತ್ರಿಕೆಯೊಂದರಲ್ಲಿ ಪ್ರಕಟವಾದ ತಮ್ಮ ಅಭಿಪ್ರಾಯದ ಲೇಖನವನ್ನು ಹಂಚಿಕೊಂಡಿದ್ದಾರೆ, "ಚುನಾವಣೆಯನ್ನು ಹೇಗೆ ಕದಿಯುವುದು?" ಎಂಬ ಶೀರ್ಷಿಕೆಯನ್ನು ಲೇಖನಕ್ಕೆ ನೀಡಿದ್ದಾರೆ. ಮಹಾರಾಷ್ಟ್ರ ವಿಧಾನಸಭೆ ಚುನಾವಣೆ ಪ್ರಜಾಪ್ರಭುತ್ವವನ್ನು ದುರುಪಯೋಗಪಡಿಸಿಕೊಂಡ ನೀಲನಕ್ಷೆ" ಎಂದು ವಿವರಿಸಿದ್ದಾರೆ, ಅದನ್ನು ಹೇಗೆ ಮಾಡಲಾಗಿದೆ ಎಂದು ಅವರು ಹಂತ ಹಂತವಾಗಿ ವಿವರಿಸಿದ್ದಾರೆ.

ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯನ್ನು ಬಿಜೆಪಿ ಹೇಗೆ ದುರುಪಯೋಗಪಡಿಸಿಕೊಂಡಿತು ಎಂಬುದನ್ನು ನನ್ನ ಲೇಖನವು ಹಂತ ಹಂತವಾಗಿ ತೋರಿಸುತ್ತದೆ, "ಹಂತ 1: ಚುನಾವಣಾ ಆಯೋಗದ ನೇಮಕಕ್ಕಾಗಿ ಸಮಿತಿಯನ್ನು ಪರಿಶೀಲಿಸುವುದು; ಹಂತ 2: ಪಟ್ಟಿಗೆ ನಕಲಿ ಮತದಾರರನ್ನು ಸೇರಿಸುವುದು; ಹಂತ 3: ಮತದಾರರ ಮತದಾನವನ್ನು ಹೆಚ್ಚಿಸುವುದು; ಹಂತ 4: ಬಿಜೆಪಿ ಗೆಲ್ಲಲು ಅಗತ್ಯವಿರುವ ಸ್ಥಳದಲ್ಲಿ ನಕಲಿ ಮತದಾನವಾಗುವಂತೆ ಮಾಡಿದ್ದು; ಹಂತ 5: ಪುರಾವೆಗಳನ್ನು ಮರೆಮಾಚಿದ್ದು."

ಮೋಸದಿಂದ ಪಕ್ಷವು ಚುನಾವಣೆ ಗೆಲ್ಲಬಹುದು" ಆದರೆ, ಅಂತಹ ಕ್ರಮಗಳು "ಚುನಾವಣಾ ಸಂಸ್ಥೆಗಳಿಗೆ ಹಾನಿ ಮಾಡುತ್ತವೆ ಮತ್ತು ಫಲಿತಾಂಶದ ಮೇಲಿನ ಸಾರ್ವಜನಿಕ ನಂಬಿಕೆಯನ್ನು ನಾಶಮಾಡುತ್ತವೆ" ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ಮಹಾರಾಷ್ಟ್ರದ "ಮ್ಯಾಚ್ ಫಿಕ್ಸಿಂಗ್" ಮುಂದೆ ಬಿಹಾರಕ್ಕೆ ಬರುತ್ತದೆ, ಅಲ್ಲಿ ಈ ವರ್ಷದ ಕೊನೆಯಲ್ಲಿ ಚುನಾವಣೆ ನಡೆಯಲಿದೆ, ಬಿಜೆಪಿ ಸೋಲುತ್ತದೆ ಎಂದು ಗೊತ್ತಾದರೆ ಮ್ಯಾಚ್ ಫಿಕ್ಸಿಂಗ್ ಮಾಡಬಹುದು ಎಂದಿದ್ದಾರೆ. "ಮ್ಯಾಚ್ ಫಿಕ್ಸಿಂಗ್ ಚುನಾವಣೆಗಳು ಯಾವುದೇ ಪ್ರಜಾಪ್ರಭುತ್ವಕ್ಕೆ ವಿಷವಾಗಿದೆ" ಎಂದು ವಿಷಾದ ವ್ಯಕ್ತಪಡಿಸಿದರು.

2024ರ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿಕೂಟವು 235

(2ನೇ ಪುಟ ನೋಡಿ)

## ಸಂಭ್ರಮದಿಂದ ಬಕ್ರಿದ್ ಆಚರಣೆ



ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್ : ಜೂ.7: ಪಟ್ಟಣದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ಶನಿವಾರ ತ್ಯಾಗ, ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಸಡಗರ, ಸಂಭ್ರಮದ ಆಚರಿಸಲಾಯಿತು. ಬಳಿಕ ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ್, ಭೀಮರಾವ ಪಾಟೀಲ್ ಅವರು ಮುಸ್ಲಿಂ ಬಾಂಧವರಿಗೆ

(2ನೇ ಪುಟ ನೋಡಿ)

## ಅಮರನಾಥ ಯಾತ್ರಿಕರಿಗಾಗಿ 'ಆಪರೇಷನ್ ಶಿವ'



ಮಲ್ಲಮ್ಮ ನುಡಿ ವಾರ್ತೆ ಶ್ರೀನಗರ:ಜೂ.7: ಪಹಲ್ಗಾಮ್ ದಾಳಿ ಬೆನ್ನಲ್ಲೇ ಅಮರನಾಥ ಯಾತ್ರಿಕರಿಗೆ ಬಹುಪದರದ ಗರಿಷ್ಠ ಭದ್ರತೆ ಕಲ್ಪಿಸುವ ಉದ್ದೇಶದಿಂದ ಭಾರತೀಯ ಸೇನೆ, ಸಿಆರ್‌ಪಿಎಫ್ ಹಾಗೂ ಕಾಶ್ಮೀರ ಪೊಲೀಸ್ ಇಲಾಖೆ ಜಂಟಿಯಾಗಿ 'ಆಪರೇಷನ್ ಶಿವ' ಯೋಜನೆಯನ್ನು ಜಾರಿಗೆ ತಂದಿದೆ.

'ಆಪರೇಷನ್ ಶಿವ' ಅಮರನಾಥ ಯಾತ್ರಿಕರಿಗೆ ಹೆಜ್ಜೆ ಹೆಜ್ಜೆಗೂ ಸುರಕ್ಷಿತ ಹಾಗೂ ಸುಗಮ ಪ್ರಯಾಣವನ್ನು ಮಾಡಲು ಅನುಕೂಲ ಮಾಡಿಕೊಡಲಿದೆ. ಇನ್ನೂ ಜುಲೈ 3ರಿಂದ ಅಮರನಾಥ ಯಾತ್ರೆ ಆರಂಭಗೊಳ್ಳಲಿದ್ದು ಆಗಸ್ಟ್ 9ಕ್ಕೆ ಮುಗಿಯಲಿದೆ. ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ 14 ದಿನಗಳು ಯಾತ್ರೆ ಅವಧಿ ತಗ್ಗಲಿದೆ. ಭದ್ರತಾ ದೃಷ್ಟಿಯಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸುಧಾರಿತ ಭದ್ರತಾ ತಂತ್ರಜ್ಞಾನ, ಸಿಸಿಟಿವಿ, ಜಾಮರ್‌ಗಳ ಅಳವಡಿಕೆ, ಡ್ರೋನ್ ಕ್ಯಾಮೆರಾ, ಸಶಸ್ತ್ರ ಪಡೆ ಕಣ್ಗಾವಲು ಸೇರಿದಂತೆ ಗರಿಷ್ಠಮಟ್ಟದ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಭದ್ರತೆಯ ದೃಷ್ಟಿಯಿಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ವರದಿಗಳು ತಿಳಿಸಿವೆ.

ಸುಮಾರು 50,000 ಅರೆಸೇನಾಪಡೆ ಸಿಬ್ಬಂದಿ ಮತ್ತು ಕಾಶ್ಮೀರ ಪೊಲೀಸರು ನಿತ್ಯ ಸ್ಫೋಟಕಗಳ ಪತ್ತೆ ಕಾರ್ಯಾಚರಣೆ ನಡೆಸಲಿದ್ದಾರೆ. ನೋಂದಾಯಿತ ಯಾತ್ರಿಕರಿಗೆ 'ಆರ್‌ಎಫ್‌ಐಡಿ' ಟ್ಯಾಗ್ ನೀಡಲಾಗಿದ್ದು, ಅಮರನಾಥ ಯಾತ್ರೆಯ ಪ್ರತಿಯೊಂದು ಕ್ಷಣದ ಮೇಲೂ ಇದರ ಮೂಲಕ ನಿಗಾವಹಿಸಬಹುದಾಗಿದೆ.

## ಚಿನ್ನಸ್ವಾಮಿ ಸ್ಟೇಡಿಯಂಗೆ ಸಿಐಡಿ ತಂಡ ಭೇಟಿ : ಕಾಲ್ತುಳಿತ ಸ್ಥಳದ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.7: ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಕಾಲ್ತುಳಿತದಿಂದ 11 ಮಂದಿ ಅಭಿಮಾನಿಗಳು ಸಾವನ್ನಪ್ಪಿದ್ದ ಪ್ರಕರಣ ಈಗಾಗಲೇ ದೇಶಾದ್ಯಂತ ಸುದ್ದಿಯಾಗಿದೆ. ಪ್ರಕರಣದಿಂದ ಸರ್ಕಾರ ಆಘಾತಕ್ಕೆ ಒಳಗಾಗಿದ್ದು, ಈಗಾಗಲೇ ನಾಲ್ವರನ್ನು ಬಂಧಿಸಲಾಗಿದೆ. ಸರ್ಕಾರ ಸಿಐಡಿ , ಮ್ಯಾಜಿಸ್ಟ್ರೇಟ್ ಹಾಗೂ ನ್ಯಾಯಾಂಗ ತನಿಖೆಗೆ ಆದೇಶ ಕೂಡ ಕೊಟ್ಟಿದೆ. ಪ್ರಕರಣವನ್ನು ಸಿಐಡಿ ಪೊಲೀಸರಿಗೆ ಕಬ್ಬನ್ ಪಾರ್ಕ್ ಪೊಲೀಸರು ಹಸ್ತಾಂತರ ಮಾಡಿದ್ದು, ಇಂದಿನಿಂದ ತನಿಖೆ ಆರಂಭಿಸಿದೆ.

ಸಿಐಡಿ ಎಸ್‌ಪಿ ಶುಭನ್ವಿತಾ ನೇತೃತ್ವದಲ್ಲಿ ಕಾಲ್ತುಳಿತ ಪ್ರಕರಣದ ತನಿಖೆ ನಡೆಯಲಿದ್ದು, ಡಿವೈಎಸ್‌ಪಿ ಗೌತಮ್ ಹಾಗೂ ಪುರುಷೋತ್ತಮ್‌ರನ್ನು ತನಿಖಾಧಿಕಾರಿಗಳಾಗಿ ನೇಮಕ ಮಾಡಲಾಗಿದೆ. ಕಾಲ್ತುಳಿತ ಉಂಟಾದ ಸ್ಥಳಕ್ಕೆ ಭೇಟಿ ನೀಡಿದ ಸಿಐಡಿ ತಂಡ, ನೂಕು ನುಗ್ಗಲು ಉಂಟಾಗಿದ್ದ ಗೇಟ್ ನಂಬರ್ 7, 19, 18, 16, 21ರ

(2ನೇ ಪುಟ ನೋಡಿ)

## ಬೆನ್ನೂರು ತಾಂಡಾ ಸಂಪರ್ಕ ರಸ್ತೆಗೆ ಸಿಗಬೇಕಿದೆ ಶಾಶ್ವತ ಪರಿಹಾರ





ವಿಶೇಷ ವರದಿ : ವೀರಯ್ಯ ವಿ ಹಿರೇಮಠ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜೂ.7: ಜಿಲ್ಲಾ ಉಸ್ತುವಾರಿ ಸಚಿವರ ತವರು ಕ್ಷೇತ್ರದಲ್ಲೇ ಗ್ರಾಮೀಣ ರಸ್ತೆಗಳು ಸಂಪೂರ್ಣ ಹದಗೆಟ್ಟಿದ್ದು, ದೈನಂದಿನ ಪ್ರಯಾಣಕ್ಕೂ ಸುತ್ತಲಿನ ಗ್ರಾಮಸ್ಥರು ಪರದಾಡುವ ಸ್ಥಿತಿ ಉಂಟಾಗಿದೆ.

ಸಚಿವರ ತವರು ಕಾರಟಗಿಗೆ ಅಂಟಿಕೊಂಡೆ ಇರುವ ಬೆನ್ನೂರು ಗ್ರಾಮದಿಂದ 2 ಕಿ.ಮೀ ಅಂತರದಲ್ಲಿರುವ ಬೆನ್ನೂರು ತಾಂಡಾಕ್ಕೆ ಸರ್ಕಾರಿ ಸವಲತ್ತುಗಳೇ ಇಲ್ಲ. ಸರ್ಕಾರಿ ಬಸ್ಸುಗಳಿಲ್ಲ. ತಾಂಡಾ ನಿವಾಸಿಗಳು ತಮ್ಮ ವೈಯಕ್ತಿಕ ವಾಹನಗಳನ್ನು ಬಳಸಿಕೊಂಡೇ ತಮ್ಮ ದಿನನಿತ್ಯದ ವ್ಯವಹಾರ, ಶಿಕ್ಷಣ, ಮುಂತಾದ ವಿಷಯಗಳಿಗೆ ತಾಂಡಾದಿಂದ ಇತರೆ ಗ್ರಾಮ, ಪಟ್ಟಣಗಳಿಗೆ ಪ್ರಯಾಣಿಸಬೇಕು. ಇತರೆ ಗ್ರಾಮ ಪಟ್ಟಣಗಳ ಸಂಪರ್ಕಕ್ಕೆ ಕನಿಷ್ಠ ರಸ್ತೆಯಾದರೂ ಸರಿ ಇದೆ-ಯಾ ಎಂದರೆ ಅದೂ ಇಲ್ಲ. ಸಂಪೂರ್ಣ ಹದಗೆಟ್ಟ ರಸ್ತೆಯಿಂದ ವಾಹನ ಸಂಚಾರವಲ್ಲ ಕಾಲ್ನಡಿಗೆ ಪ್ರಯಾಣಕ್ಕೂ ರಸ್ತೆ ಯೋಗ್ಯವಾಗಿಲ್ಲ.

ದಿನನಿತ್ಯ ಓಡಾಡುವ, ವಿವಿಧ ಉದ್ದೇಶಗಳಿಗೆ ಬೇರೆ ಗ್ರಾಮ, ಪಟ್ಟಣಗಳಿಗೆ ತೆರಳಲು ತಾಂಡದಿಂದ ಇರುವುದು ಕೇವಲ ಒಂದೇ ರಸ್ತೆ. ಅದೂ ಕೂಡ ಕಾಲ್ನಡಿಗೆಗೂ ಯೋಗ್ಯವಾಗಿಲ್ಲ.

ಇಂತಹ ಯಾವುದೇ ಕನಿಷ್ಠ ರಸ್ತೆ ಸೌಕರ್ಯವಿಲ್ಲದ ತಾಂಡಾಕ್ಕೆ ಸಚಿವರೂ ಕೂಡ ಭೇಟಿ ನೀಡುತ್ತಾರೆ ಆದರೆ ಚುನಾವಣಾ ಸಂದರ್ಭಗಳಲ್ಲಿ ಮಾತ್ರ. ಈ ಸಮಯದಲ್ಲಿ ತಾಂಡಾ ನಿವಾಸಿಗಳು ಅನೇಕ ಬಾರಿ ರಸ್ತೆ ರಿಪೇರಿಗಾಗಿ ಮನವಿ ಮಾಡಿದ್ದಾರೆ. ಆದರೆ ಸಚಿವರನ್ನು ಒಳಗೊಂಡು ಸಂಬಂಧಿಸಿದ ಯಾವುದೇ ಅಧಿಕಾರಿಗಳು ತಾಂಡಾ ನಿವಾಸಿಗಳ ಮನವಿಗೆ ಸ್ಪಂದಿಸಿಲ್ಲ. ಪ್ರಸ್ತುತ ಮಳೆಗಾಲ ಆರಂಭದಲ್ಲಿಯೇ ವಾಹನ ಸವಾರರು, ಪ್ರಯಾಣಿಕರು ಹದಗೆಟ್ಟ ರಸ್ತೆ ಕಾರಣದಿಂದ ಸಮಸ್ಯೆಗಳೊಂದಿಗೆ ಅಪಘಾತಗಳಿಂದ ಗಾಯಗೊಂಡಿದ್ದಾರೆ.

ಪ್ರತಿ ಮಳೆಗಾಲದಲ್ಲಿಯೂ ತಾಂಡಾ ನಿವಾಸಿಗಳಿಗೆ ರಸ್ತೆಯೇ ಬಹುದೊಡ್ಡ ಸಮಸ್ಯೆಯಾಗಿ ಕಾಡುತ್ತದೆ. ಪ್ರತಿನಿತ್ಯದ ಸಂಚಾರಕ್ಕೆ ವಾಹನ ಸವಾರರು ಪ್ರಯಾಸದಿಂದಲೇ ಪ್ರಯಾಣಿಸಬೇಕು. ಸಚಿವರು ಹಾಗೂ ಸಂಬಂಧಿಸಿದ ಅಧಿಕಾರಿಗಳು ದಯವಿಟ್ಟು ಬೆನ್ನೂರು ತಾಂಡಾದ ಬಗ್ಗೆ ಗಮನ ವಹಿಸಿ ರಸ್ತೆ ದುರಸ್ಥಿ ಮಾಡಿ ಶಾಶ್ವತ ಪರಿಹಾರ ಕಲ್ಪಿಸಬೇಕೆಂಬುದು ತಾಂಡಾ ನಿವಾಸಿಗಳ ಪ್ರಮುಖ ಬೇಡಿಕೆಯಾಗಿದೆ.

## ಕಾಲ್ತುಳಿತ: ಸಿಎಂ, ಡಿಸಿಎಂ, ಗೃಹ ಸಚಿವರ ರಾಜೀನಾಮೆಗೆ ಎಚ್‌ಡಿಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.7: ಜೂನ್ 4 ರಂದು ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತದಲ್ಲಿ 11 ಜನರು ಸಾವಿಗೀಡಾಗಿದ್ದು, ದುರಂತದ ಹೊಣೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಗೃಹ ಸಚಿವ ಜಿ ಪರಮೇಶ್ವರ ಹೊತ್ತುಕೊಳ್ಳಬೇಕು. ಅವರಿಗೆ ನೈತಿಕತೆ ಇದ್ದರೆ ರಾಜೀನಾಮೆ ನೀಡಬೇಕು ಎಂದು ಜೆಡಿಎಸ್ ನಾಯಕ ಮತ್ತು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಶನಿವಾರ ಹೇಳಿದ್ದಾರೆ.

ನಗರ ಪೊಲೀಸ್ ಆಯುಕ್ತರು ಸೇರಿದಂತೆ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದ್ದಕ್ಕಾಗಿ ಅವರು ಸರ್ಕಾರವನ್ನು ತರಾಟೆಗೆ ತೆಗೆದು-ಕೊಂಡರು.

'ಈ ಅಹಿತಕರ ಘಟನೆಗೆ ಸಂಬಂಧಿಸಿದಂತೆ ಐವರು ಪೊಲೀಸ್ ಅಧಿಕಾರಿಗಳನ್ನು ತರಾತುರಿಯಲ್ಲಿ ಅಮಾನತುಗೊಳಿಸಿರುವುದು ಅನಗತ್ಯ. ಸರ್ಕಾರದ ತಪ್ಪುಗಳಿಗೆ ಅಧಿಕಾರಿಗಳನ್ನು ಬಲಿಪಶುಗಳನ್ನಾಗಿ ಮಾಡಿದರೆ,

(2ನೇ ಪುಟ ನೋಡಿ)

## ಆರೋಗ್ಯಕರ ಭಾರತಕ್ಕಾಗಿ ಉಪ್ಪು, ಸಂಸ್ಕರಿಸಿದ ಆಹಾರ,ಕಡಿಮೆ ತೈಲ ಸೇವನೆ ಪ್ರತಿಜ್ಞೆಗೆ ನಡ್ಡಾ ಕರೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.7: ಈ ವಿಶ್ವ ಆಹಾರ ಸುರಕ್ಷತಾ ದಿನದಂದು, ಪ್ರತಿಯೊಬ್ಬ ಭಾರತೀಯನು ಉಪ್ಪು ಸೇವನೆ, ಸಂಸ್ಕರಿಸಿದ ಆಹಾರ ಮತ್ತು ತೈಲ ಸೇವನೆಯನ್ನು ಶೇಕಡಾ 10 ರಷ್ಟು ಕಡಿಮೆ ಮಾಡುವ ಪ್ರತಿಜ್ಞೆ ಮಾಡಬೇಕು ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ಹೇಳಿದರು.

ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆಯಲ್ಲಿ (ನಿಮ್ಹಾನ್ಸ್) ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಆಯೋಜಿಸಿದ್ದ ವಿಶ್ವ ಆಹಾರ ಸುರಕ್ಷತಾ ದಿನ ಕಾರ್ಯಕ್ರಮದಲ್ಲಿ ನಡ್ಡಾ ಮಾತನಾಡಿದ ಅವರು, ಸರಿಯಾದ ಆಹಾರವನ್ನು ಸೇವಿಸುವ ಬಗ್ಗೆ ಜಾಗೃತಿ ಮೂಡಿಸುವುದು ನಮ್ಮ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದರು.

ಪ್ರತಿ ವರ್ಷ ಜೂನ್ 7 ರಂದು ವಿಶ್ವ ಆಹಾರ ಸುರಕ್ಷತಾ ದಿನವನ್ನು ಆಚರಿಸಲಾಗುತ್ತದೆ. ನಮ್ಮ ಪ್ರಧಾನಿ ನರೇಂದ್ರ ಮೋದಿಯವರು ನೀಡಿದ ಸ್ಪಷ್ಟ ಕರೆಯನ್ನು ನಾವು ಸ್ವೀಕರಿಸಬೇಕು. ಕನಿಷ್ಠ ನಮ್ಮ ಸ್ವಂತ ಮನೆಗಳಲ್ಲಿ, ಎಣ್ಣೆ ಮತ್ತು ಉಪ್ಪಿನ ಸೇವನೆಯನ್ನು ಶೇಕಡಾ 10 ರಷ್ಟು ಕಡಿಮೆ ಮಾಡಲು ಸಾಧ್ಯವಾಗುವಂತೆ ನೋಡಿಕೊಳ್ಳಬೇಕು. ಇದು ಅಗತ್ಯವಾಗಿದೆ. ಸಂಸ್ಕರಿಸಿದ

ಒಂದನೇ ಪುಟದಿಂದ

## ಆಹಾರ,ಕಡಿಮೆ ತೈಲ ಸೇವನೆ ಪ್ರತಿಜ್ಞೆಗೆ ನಡ್ಡಾ ಕರೆ

ಆಹಾರಗಳನ್ನು ಗರಿಷ್ಠವಾಗಿ ಕಡಿಮೆ ಮಾಡುವಂತೆ ನಾವು ನೋಡಿಕೊಳ್ಳಬೇಕು ಎಂದು ನಡ್ಡಾ ಸಲಹೆ ನೀಡಿದ್ದಾರೆ.

ಆರೋಗ್ಯವಾಗಿರಲು ಮತ್ತು ಸರಿಯಾಗಿ ತಿನ್ನಲು, ಭಾರತವು ತನ್ನ ಸಾಂಪ್ರದಾಯಿಕ ಆಹಾರ ಪದ್ಧತಿಗಳನ್ನು ಮರುಪರಿಶೀಲಿಸಬೇಕು ಎಂದು ಅವರು ಹೇಳಿದರು. ನಮ್ಮ ಸಾಂಪ್ರದಾಯಿಕ ಆಹಾರವು ರಾಗಿಗಳಿಂದ ಅನೇಕ ರೀತಿಯ ಸಿದ್ಧತೆಗಳನ್ನು ಒಳಗೊಂಡಿದೆ. ನಾವು ಈ ಸಂಪ್ರದಾಯವನ್ನು ಪುನರುಜ್ಜೀವನಗೊಳಿಸಬೇಕು ಎಂದು ಅವರು ಹೇಳಿದರು.

ವಿಶ್ವ ಆಹಾರ ಸುರಕ್ಷತಾ ದಿನದಂದು ಮಾತ್ರ ಆಹಾರ ಸುರಕ್ಷತಾ ಅಭ್ಯಾಸಗಳ ಬಗ್ಗೆ ಮಾತನಾಡುವುದರಿಂದ ಕೆಲಸ ಮಾಡುವುದಿಲ್ಲ. ನಾವು ಅದನ್ನು ನಮ್ಮ ಜೀವನದ ಭಾಗವಾಗಿಸಿದರೆ ಮತ್ತು ಅದನ್ನು ಅಭ್ಯಾಸ ಮಾಡಿಕೊಂಡರೆ ಮಾತ್ರ ಅದು ಕೆಲಸ ಮಾಡುತ್ತದೆ ಎಂದು ಅವರು ಹೇಳಿದರು. ಭಾರತದಲ್ಲಿ ಬೊಜ್ಜು ವೇಗವಾಗಿ ಹರಡುತ್ತಿರುವುದರಿಂದ ಆರೋಗ್ಯ ಪ್ರಜ್ಞೆ ಮತ್ತು ಉತ್ತಮವಾದದ್ದನ್ನು ತಿನ್ನಿರಿ ಚಳುವಳಿ ಅತ್ಯಗತ್ಯ ಎಂದು ನಡ್ಡಾ ಹೇಳಿದರು.ಭಾರತದ ಮಧುಮೇಹ ಅಧ್ಯಯನದ ಪ್ರಕಾರ, 2008 ರಿಂದ 2020 ರವರೆಗೆ, ನಗರ ಭಾರತದಲ್ಲಿ ಬೊಜ್ಜು ಶೇಕಡಾ 39.6 ರಷ್ಟು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಇದು ಶೇಕಡಾ 23.1 ರಷ್ಟು ಹೆಚ್ಚಾಗಿದೆ. 2050 ರ ವೇಳೆಗೆ, ಜನಸಂಖ್ಯೆಯ 1/3 ರಷ್ಟು ಜನರು ಬೊಜ್ಜು ಹೊಂದಿರುತ್ತಾರೆ ಎಂದು ಅಂದಾಜಿಸಲಾಗಿದೆ," ಎಂದು ನಡ್ಡಾ ತಿಳಿಸಿದ್ದಾರೆ. ಈ ಕಾರ್ಯಕ್ರಮದ ಸಂದರ್ಭದಲ್ಲಿ, ನಡ್ಡಾ 'ಈಟ್ ರೈಟ್ ಇಂಡಿಯಾ' ಎಂಬ ಕಿರುಪುಸ್ತಕವನ್ನು ಸಹ ಬಿಡುಗಡೆ ಮಾಡಿದರು.

ವೀಡಿಯೊ ಕಾನ್ಫರೆನ್ಸಿಂಗ್ ಮೂಲಕ ಸಭೆಯನ್ನುದ್ದೇಶಿಸಿ ಮಾತನಾಡಿದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕಾರ್ಯದರ್ಶಿ ಸಂಜಯ್ ಕುಮಾರ್, ಸರಿಯಾಗಿ ತಿನ್ನುವ ವಿಜ್ಞಾನವು ರಾಷ್ಟ್ರೀಯ ಶಿಕ್ಷಣ, ಸಂಶೋಧನೆ ಮತ್ತು ತರಬೇತಿ ಮಂಡಳಿಯ ಪಠ್ಯಕ್ರಮದ ಭಾಗವಾಗಿದೆ ಎಂಬುದನ್ನು ವಿವರಿಸಿದರು.

## ಸಚಿವರ ರಾಜೀನಾಮೆಗೆ ಎಚ್‌ಡಿಕೆ ಆಗ್ರಹ

ಅಧಿಕಾರಿಗಳು ಪರಿಣಾಮಕಾರಿಯಾಗಿ ಕೆಲಸ ಮಾಡಲು ಸಾಧ್ಯವೇ? ಸರ್ಕಾರ ಇದರ ಬಗ್ಗೆ ಯೋಚಿಸಬೇಕಿತ್ತು' ಎಂದು ಕುಮಾರಸ್ವಾಮಿ ಹೇಳಿದರು.

ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ನೇತೃತ್ವ ವಹಿಸುವವರು ಪಾರದರ್ಶಕ, ಸತ್ಯ ಮತ್ತು ನಿಷ್ಠಾವಂತ ಆಡಳಿತವನ್ನು ನೀಡುವುದಾಗಿ ಹೇಳಿಕೊಳ್ಳುತ್ತಾರೆ ಮತ್ತು ಅವರು ತೆಗೆದುಕೊಂಡ ನಿರ್ಧಾರಗಳ ಬಗ್ಗೆ ಸಾರ್ವಜನಿಕ ಅಭಿಪ್ರಾಯವನ್ನು ಅರ್ಥಮಾಡಿಕೊಳ್ಳಬೇಕು ಎಂದರು.

'ಜೂನ್ 3ರಂದು ಪಂದ್ಯ ಪ್ರಾರಂಭವಾಗುವ ಮೊದಲೇ, ಜೂನ್ 4ರಂದು ಕ್ರೀಡಾಂಗಣದಲ್ಲಿ ವಿಜಯೋತ್ಸವ ಆಚರಿಸಲು ಅನುಮತಿ ಕೋರಲಾಗಿತ್ತು ಎಂದು ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ಎಫ್‌ಐಆರ್ ಹೇಳುತ್ತದೆ. ಫೈನಲ್ ಪಂದ್ಯ ಸಂಜೆ 7.30ಕ್ಕೆ (ಜೂನ್ 3 ರಂದು) ಪ್ರಾರಂಭವಾಯಿತು. ಆದರೆ, ಮರುದಿನದ ಆಚರಣೆಗಾಗಿ ಸಂಜೆ 6 ಗಂಟೆಗೆ ಅರ್ಜಿಯನ್ನು ಸಲ್ಲಿಸಲಾಯಿತು. ಹಾಗಿದ್ದರೆ, ಪಂದ್ಯವನ್ನು ಗೆಲ್ಲುವ ಕನಸು ಕಂಡಿದ್ದರೇ? ವಿಧಾನಸೌಧದ ಮುಂದೆ ಆಚರಣೆಗಾಗಿ ಡಿಎಪಿಆರ್‌ಗೆ ಮತ್ತೊಂದು ಅರ್ಜಿ ಸಲ್ಲಿಸಲಾಯಿತು. ಆ ನಿರ್ಧಾರದ ಹಿಂದೆ ಇದ್ದದ್ದು ಯಾರು? ಆ ದಿನ (ಜೂನ್ 4) ಬೆಳಿಗ್ಗೆ 7.30ಕ್ಕೆ ಪೊಲೀಸ್ ಆಯುಕ್ತರ ಮೇಲೆ ಅನುಮತಿಗಾಗಿ ಒತ್ತಡ ಹೇರಿದವರು ಯಾರು?' ಎಂದು ಕುಮಾರಸ್ವಾಮಿ ಪ್ರಶ್ನಿಸಿದರು.

ಬರೋಬ್ಬರಿ 18 ವರ್ಷಗಳ ಐಪಿಎಲ್ ಟ್ರೋಫಿ ಎತ್ತಿ ಹಿಡಿದ ಹಿನ್ನೆಲೆಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಖಅಃ) ತಂಡದ ವಿಜಯೋತ್ಸವದಲ್ಲಿ ಭಾಗವಹಿಸಲು ಜೂನ್ 4ರಂದು ಇಲ್ಲಿನ ಚಿನ್ನಸ್ವಾಮಿ ಕ್ರೀಡಾಂಗಣದ ಮುಂದೆ ಹೆಚ್ಚಿನ ಸಂಖ್ಯೆಯ ಜನರು ಸೇರಿದ್ದರು. ಈ ವೇಳೆ ಉಂಟಾದ ಕಾಲ್ತುಳಿತದಲ್ಲಿ 11 ಜನರು ಪ್ರಾಣ ಕಳೆದುಕೊಂಡಿದ್ದರು ಮತ್ತು 56 ಜನರು ಗಾಯಗೊಂಡರು.

ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಮತ್ತು ಗೃಹ ಸಚಿವರು ಈ ಕಾಲ್ತುಳಿತದ ಜವಾಬ್ದಾರಿಯನ್ನು ಹೊರಬೇಕಾಗುತ್ತದೆ ಮತ್ತು ಈ ಮೂವರೂ ತಪ್ಪಿತಸ್ಥರು ಎಂದು ಮಾಜಿ ಮುಖ್ಯಮಂತ್ರಿ ಹೇಳಿದರು.

'ಐಪಿಎಲ್ ಕಪ್ ಗೆದ್ದ 24 ಗಂಟೆಗಳ ಒಳಗೆ ತಂಡವನ್ನು ಅಭಿನಂದಿಸುವ ಅಗತ್ಯ ಏನಿತ್ತು? ಸರಿ, ಯಾವ ರೀತಿಯ ಸನ್ಮಾನ ಮಾಡಲಾಯಿತು? ಅಂತಹ ಅಜಾಗರೂಕ ಸನ್ಮಾನದ ಅಗತ್ಯವಿದೆಯೇ? ನೈತಿಕತೆ ಇದ್ದರೆ ಅವರು ರಾಜೀನಾಮೆ ನೀಡಬೇಕು. ಆದರೆ, ಇತ್ತೀಚಿನ ದಿನಗಳಲ್ಲಿ ಅವರಿಂದ ಅದನ್ನು ನಿರೀಕ್ಷಿಸಲು ಸಾಧ್ಯವಿಲ್ಲ. ಆದರೆ, ವಿರೋಧ ಪಕ್ಷವಾಗಿ ನಾವು ಒತ್ತಾಯಿಸಿದ್ದೇವೆ. ಮೃತ ದೇಹಗಳ ಮೇಲೆ ರಾಜಕೀಯ ಮಾಡುವ ಶೋಚನೀಯ ಸ್ಥಿತಿಯಲ್ಲಿ ನಾವಿಲ್ಲ, ಅಂತಹ ಪರಿಸ್ಥಿತಿ ಎಂದಿಗೂ ಬರುವುದಿಲ್ಲ' ಎಂದು ಅವರು ಹೇಳಿದರು.

ಶುಕ್ರವಾರ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಮೃತದೇಹಗಳ ಮೇಲೆ ರಾಜಕೀಯ ಮಾಡುತ್ತಿವೆ ಎಂದು ಆರೋಪಿಸಿದ್ದರು.

2006ರಲ್ಲಿ ಎಚ್‌ಡಿ ಕುಮಾರಸ್ವಾಮಿ ಅವರು ಜೆಡಿಎಸ್-ಬಿಜೆಪಿ ಸಮ್ಮಿಶ್ರ ಸರ್ಕಾರದ ಮುಖ್ಯಮಂತ್ರಿಯಾಗಿದ್ದಾಗ ವರನಟ ಡಾ. ರಾಜ್‌ಕುಮಾರ್ ಅವರ ನಿಧನದ ನಂತರ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದನ್ನು ಕರ್ನಾಟಕ ಕಾಂಗ್ರೆಸ್ ಶುಕ್ರವಾರ ನೆನಪಿಸಿಕೊಂಡಿದ್ದು, ಆಗ ಕುಮಾರಸ್ವಾಮಿ ರಾಜೀನಾಮೆ ನೀಡಿದ್ದರೇ ಎಂದು ಪ್ರಶ್ನಿಸಿದೆ. ಅದು ಗುಂಡಿನ ದಾಳಿ ಮತ್ತು ಎರಡು ಸಾವುಗಳಿಗೆ ಕಾರಣವಾಯಿತು.

ಇದಕ್ಕೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, 'ರಾಜ್‌ಕುಮಾರ್ ಅವರ ಸಾವಿನ ಸಮಯದಲ್ಲಿ ಕೆಲವು ಶಕ್ತಿಗಳು ತೊಂದರೆ ಮತ್ತು ಅಶಾಂತಿಯನ್ನು ಸೃಷ್ಟಿಸಲು ಪ್ರಯತ್ನಿಸಿವೆ.ನಾನು ಅದನ್ನು ಬಹಿರಂಗವಾಗಿ ಒಪ್ಪಿಕೊಂಡಿದ್ದೇನೆ. ಆ ಘಟನೆಯನ್ನು ಈ ಕಾಲ್ತುಳಿತದೊಂದಿಗೆ ಏಕೆ ಜೋಡಿಸಬೇಕು? ಎಂದರು.

ಶಿವಕುಮಾರ್ ಅವರನ್ನು ಟೀಕಿಸಿದ ಕುಮಾರಸ್ವಾಮಿ, 'ಅವರ ಸಾಧನೆ ಏನು? ಅವರು ಏನು ಸಾಧಿಸಿದ್ದಾರೆ ಅಥವಾ ಮಾಡಿದ್ದಾರೆ? ಕಳೆದ ಎರಡು ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ರಾಜ್ಯಕ್ಕೆ ಅವರ ಕೊಡುಗೆ ಏನು?' ಎಂದು ಕೇಳಿದರು.

## ಕಾಲ್ತುಳಿತ ಸ್ಥಳದ ಪರಿಶೀಲನೆ

ಬಳಿ ಪರಿಶೀಲನೆ ನಡೆಸಿದೆ. ಬಂಧನಕ್ಕೊಳಗಾಗಿರುವ ಡಿಎನ್‌ಎ ಮ್ಯಾನೇಜ್‌ಮೆಂಟ್‌ನ ಮೂವರು ಹಾಗೂ ಆರ್‌ಸಿಬಿಯ ಒಬ್ಬರು ನ್ಯಾಯಾಂಗ ಬಂಧನದಲ್ಲಿದ್ದು, ಬಾಡಿ ವಾರೆಂಟ್ ಮೇಲೆ ವಶಕ್ಕೆ ಪಡೆಯಲು ಪೊಲೀಸರು ಸಿದ್ಧತೆ ನಡೆಸಿದ್ದಾರೆ. ಶನಿವಾರ ಹಾಗೂ ಭಾನುವಾರ ಕೋರ್ಟ್‌ಗೆ ರಜೆ ಇದ್ದು, ಸೋಮವಾರ ಕಸ್ಟಡಿಗೆ ಪಡೆಯಲು ಸಿದ್ಧತೆ ನಡೆದಿದೆ.

ಸಿಐಡಿ ಜೊತೆ ಬೆಂಗಳೂರು ಜಿಲ್ಲಾಧಿಕಾರಿ ಕೂಡ ತನಿಖೆ ಆರಂಭಿಸಿದ್ದಾರೆ. ಚಿನ್ನಸ್ವಾಮಿ ಸ್ಟೇಡಿಯಂಗೆ ಭೇಟಿ ನೀಡಿ ಪರಿಶೀಲನೆ ನಡೆಸಿರೋ ಜಿಲ್ಲಾಧಿಕಾರಿ ಜಗದೀಶ್, ಗಾಯಗೊಂಡವರ ಬಗ್ಗೆ ತನಿಖೆ ವರದಿ ಪಡೆದು-ಕೊಂಡಿದ್ದಾರೆ. ಇನ್ನೂ ಗಾಯಾಳುಗಳ ಸಂಖ್ಯೆಯನ್ನು ಸರ್ಕಾರ ತಪ್ಪಾಗಿ ಹೇಳಿರೋದು ಬಹಿರಂಗವಾಗಿದೆ. ಸುದ್ದಿಗೋಷ್ಠಿಯಲ್ಲಿ ಸಿಎಂ ಸಿದ್ದರಾಮಯ್ಯ ಅವರು 11 ಜನರು ಮೃತಪಟ್ಟಿದ್ದಾರೆ, 45 ಜನರು ಗಾಯಗೊಂಡಿದ್ದಾರೆ ಎಂದು ಹೇಳಿದ್ದರು. ಆದರೆ ಅಸಲಿಗೆ ಗಾಯಗೊಂಡವರು ಕೇವಲ 45 ಜನರು ಮಾತ್ರವಲ್ಲ, ಬರೋಬ್ಬರಿ 65 ಮಂದಿ ಕಾಲ್ತುಳಿತದಲ್ಲಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಗಾಯಾಳುಗಳಿಗೂ ನೋಟಿಸ್ ಜಾರಿ:

ಇನ್ನು ಬೆಂಗಳೂರಿನ 4 ಆಸ್ಪತ್ರೆಗಳಿಂದ ಜಿಲ್ಲಾಧಿಕಾರಿ ಜಗದೀಶ್ ವಿವರಣೆ ಪಡೆದುಕೊಂಡಿದ್ದಾರೆ. ಬೌರಿಂಗ್, ಪೋರ್ಟಿಸ್, ಮಣಿಪಾಲ್ ಮತ್ತು ವೈದೇಹಿ ಆಸ್ಪತ್ರೆಗಳಲ್ಲಿ ಎಷ್ಟು ಗಾಯಾಳುಗಳು ಅಡ್ಮಿಟ್ ಆಗಿದ್ರು? ಎಷ್ಟು ಮಂದಿ ಡಿಸ್ಚಾರ್ಜ್ ಆದರು ಮತ್ತು ಎಷ್ಟು ಡೆತ್ ಆಗಿದೆ? ಘಟನೆಗೆ ಕಾರಣ ಏನು ಅಂತಾ ಮಾಹಿತಿ ಪಡೆದುಕೊಂಡಿದ್ದಾರೆ. ಕಾಲ್ತುಳಿತ ಹೇಗಾಯ್ತು? ಏನೇನಾಯ್ತು ಅನ್ನೋ ಮಾಹಿತಿ ಸಂಗ್ರಹಕ್ಕೆ 25ಕ್ಕೂ ಹೆಚ್ಚು ಗಾಯಾಳುಗಳಿಗೆ ನೋಟಿಸ್ ಕೊಟ್ಟಿದ್ದಾರೆ.

ಬೌರಿಂಗ್ ಆಸ್ಪತ್ರೆಯಲ್ಲಿ ಇಬ್ಬರು ಮಾತ್ರ ಚಿಕಿತ್ಸೆ ಪಡೆಯುತ್ತಿದ್ದು, ಉಳಿದೆಲ್ಲಾ ಗಾಯಾಳುಗಳು ಡಿಸ್ಚಾರ್ಜ್ ಆಗಿದ್ದಾರೆ. ಇಬ್ಬರೂ ಅಭಿಮಾನಿಗಳು ಪದವಿ ವಿದ್ಯಾರ್ಥಿಗಳಾಗಿದ್ದು, ಕೆಆರ್ ಪುರಂ ಹಾಗೂ ಚಿಕ್ಕಮಗಳೂರು ಮೂಲದ ನಿವಾಸಿಗಳಾಗಿದ್ದಾರೆ. ಕಾಲ್ತುಳಿತದಲ್ಲಿ ಇಬ್ಬರು ಅಭಿಮಾನಿಗಳ ಕಾಲು ಮುರಿದಿತ್ತು.

## ಮ್ಯಾಚ್ ಫಿಕ್ಸಿಂಗ್ ಮಾಡಿದೆ': ರಾಹುಲ್ ಗಾಂಧಿ

ಸ್ಥಾನಗಳನ್ನು ಗಳಿಸಿ ಭರ್ಜರಿ ಜಯ ಸಾಧಿಸಿತು. ಕೇಸರಿ ಪಕ್ಷವು 132 ಸ್ಥಾನಗಳೊಂದಿಗೆ ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿತು, ಮೈತ್ರಿಕೂಟದ ಪಾಲುದಾರರಾದ ಶಿವಸೇನೆ ಮತ್ತು ಎನ್‌ಸಿಪಿ ಕ್ರಮವಾಗಿ 57 ಮತ್ತು 41 ಸ್ಥಾನಗಳನ್ನು ಗೆದ್ದು, ರಾಜ್ಯದಲ್ಲಿ ಮಹಾಯುತಿಯ ಪ್ರಾಬಲ್ಯವನ್ನು ಬಲಪಡಿಸಿತು.

ವಿರೋಧ ಪಕ್ಷವಾದ ಮಹಾ ವಿಕಾಸ್ ಅಘಾಡಿ (ಎಂವಿಎ) ದೊಡ್ಡ ಹೊಡೆತವನ್ನು ಅನುಭವಿಸಿತು, ಕಾಂಗ್ರೆಸ್ ಕೇವಲ 16 ಸ್ಥಾನಗಳನ್ನು ಗಳಿಸಿತು, ಅದರ ಮಿತ್ರಪಕ್ಷಗಳಾದ ಶಿವಸೇನೆ (ಯುಬಿಟಿ) ಮತ್ತು ಎನ್‌ಸಿಪಿ (ಎಸ್‌ಪಿ) ಕ್ರಮವಾಗಿ 20 ಮತ್ತು 10 ಸ್ಥಾನಗಳನ್ನು ಗೆದ್ದವು.

## ಸಂಭ್ರಮದಿಂದ ಬಕ್ರಿದ್ ಆಚರಣೆ

ಪರಸ್ಪರ ಆಲಿಂಗಿಸಿ ಹಬ್ಬದ ಶುಭ ಕೋರಿದರು. ನಂತರ ಒಬ್ಬರಿಗೊಬ್ಬರು ಸಿಹಿ ವಿನಿಮಯ ಮಾಡಿಕೊಂಡು ಸಂಭ್ರಮಿಸಿದರು.ಈ ಸಂದರ್ಭದಲ್ಲಿ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಫ್ಸರಮಿಯ, ಪುರಸಭೆ ಉಪಾಧ್ಯಕ್ಷ ಮುಕ್ರಂಜಾ, ಪುರಸಭೆ ಸದಸ್ಯ ಸೈಯದ್ ಬಾಷಿದ್, ಫಯಾಜ್ ಅಲಿ ಗುತ್ತೆದಾರ್ ಸೇರಿ ಅನೇಕರಿದ್ದರು.

## ರಾಜೀನಾಮೆಗೆ ಶೋಭಾ ಆಗ್ರಹ

ರಕ್ತ ಅಂಟಿದೆ" ಎಂದು ಶನಿವಾರ ಟೀಕಿಸಿದ್ದಾರೆ.

ಇಂದು ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಕೇಂದ್ರ ಸಚಿವೆ, ಜೂನ್ 4 ರಂದು ನಡೆದ ಕಾಲ್ತುಳಿತದಲ್ಲಿ 11 ಜನರು ಸಾವನ್ನಪ್ಪಿದ್ದು, ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೇ ನೇರ ಹೊಣೆಗಾರರಾಗಿದ್ದು, ಅವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು ಪೊಲೀಸ್ ಆಯುಕ್ತ ಬಿ. ದಯಾನಂದ ಮತ್ತು ಇತರ ನಾಲ್ವರು ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದ್ದಕ್ಕಾಗಿ ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದು-ಕೊಂಡ ಶೋಭಾ ಕರಂದ್ಲಾಜೆ, ಸತ್ಯ ಹೊರಬರಲು ಹಾಲಿ ಹೈಕೋರ್ಟ್ ನ್ಯಾಯಾಧೀಶರಿಂದ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಘಟನೆಯ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ಮತ್ತು ಪಕ್ಷದ ನಾಯಕ ರಾಹುಲ್ ಗಾಂಧಿಯವರ ಮೌನವನ್ನು ಪ್ರಶ್ನಿಸಿದ ಶೋಭಾ ಕರಂದ್ಲಾಜೆ, "ಧಮ್ ಇದ್ದರೆ" ಸಿಎಂ ಮತ್ತು ಉಪಮುಖ್ಯಮಂತ್ರಿ ರಾಜೀನಾಮೆ ಪಡೆ-ಯಲಿ ಎಂದು ಸವಾಲು ಹಾಕಿದರು.

ಕಾಲ್ತುಳಿತದಲ್ಲಿ ಮಕ್ಕಳನ್ನು ಕಳೆದುಕೊಂಡ ಪೋಷಕರು ಕಣ್ಣೀರು ಹಾಕ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಕೈಯಲ್ಲಿ ರಕ್ತ ಅಂಟಿದೆ. ತಮ್ಮ ಕೈಯಲ್ಲಿರುವ ರಕ್ತವನ್ನು ಪೊಲೀಸರ ಮೂತಿಗೆ ಒರೆಸ್ತಿದ್ದಾರೆ. ಒಬ್ಬ ಪ್ರಾಮಾಣಿಕ ಕಮಿಷನರ್ ಅನ್ನು ಸಸ್ಪೆಂಡ್ ಮಾಡಿದ್ದಾರೆ. ಬೆಂಗಳೂರಿನ ಇತಿಹಾಸದಲ್ಲೇ ಇದೊಂದು ಕಪ್ಪು ಚುಕ್ಕೆ ಎಂದು ಶೋಭಾ ಕರಂದ್ಲಾಜೆ ಕಿಡಿಕಾರಿದರು.

ಕಾಂಗ್ರೆಸ್ ಸರ್ಕಾರದವರು ಆರ್‌ಸಿಬಿ ಸೆಲೆಬ್ರೇಷನ್ ಅನ್ನು ಹೆಣದ ಮೇಲೆ ಮಾಡಿದ್ದಾರೆ. ಒಬ್ಬ ಜವಾಬ್ದಾರಿಯುತ ಸರ್ಕಾರ ಈ ರೀತಿ ನಡೆದುಕೊಳ್ಳುತ್ತಾ ಎಂದು ಕೇಂದ್ರ ಸಚಿವೆ ಪ್ರಶ್ನೆ ಮಾಡಿದರು.

"ಕರ್ನಾಟಕ ಕಾಂಗ್ರೆಸ್ ಸಿದ್ದರಾಮಯ್ಯ ಮತ್ತು ಶಿವಕುಮಾರ್ ಹೊರತುಪಡಿಸಿ ಬೇರೆ ನಾಯಕರಿಂದ ದಿವಾಳಿಯಾಗಿದೆಯೇ? ಈ ಇಬ್ಬರೂ ತನಿಖೆ ಎದುರಿಸಲಿ. ಇತರರನ್ನು ಸಿಎಂ ಮತ್ತು ಉಪಮುಖ್ಯಮಂತ್ರಿಗಳನ್ನಾಗಿ ಮಾಡಲಿ. ಎಲ್ಲದಕ್ಕೂ ರಾಜ್ಯಕ್ಕೆ ಬರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೆವಾಲಾ ಅವರು ಈಗ ಎಲ್ಲಿ ಅಡಗಿಕೊಂಡಿದ್ದಾರೆ?" ಎಂದು ಪ್ರಶ್ನಿಸಿದರು.

ಕರ್ನಾಟಕ ಕಾಂಗ್ರೆಸ್ ಸರ್ಕಾರವು ಪಕ್ಷದ ದೆಹಲಿ ಹೈಕಮಾಂಡ್‌ಗೆ ಎಟಿಎಂ ಆಗಿರುವುದರಿಂದ ಅವರು ಈ ವಿಷಯದ ಬಗ್ಗೆ ಮೌನವಾಗಿದ್ದಾರೆ ಎಂದು ಶೋಭಾ ಕರಂದ್ಲಾಜೆ ಆರೋಪಿಸಿದರು.

## ಗಣಪತರಾವ್ ಪಂಚಾಳ ಸೇವಾ ವಯೋನಿವೃತ್ತಿ, ಬಿಳ್ಕೋಡುಗೆ




ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್:ಜೂ.7: ತಾಲ್ಲೂಕಿನ ಕಬಿರಾಬಾದ್ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಗಣಪತರಾವ್ ಪಂಚಾಳ ಅವರು ತಮ್ಮ ಸೇವೆಯಿಂದ ವಯೋನಿವೃತ್ತಿ ಹೊಂದಿರುವ ಪ್ರಯುಕ್ತ, ಅವಗ ಗೆಳೆಯರ ಬಳಗದಿಂದ ಹಳ್ಳಿಖೇಡ(ಬಿ)ನ ಭಾವಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ ಸಮಾರಂಭದಲ್ಲಿ ಅದ್ದೂರಿಯಾಗಿ ಸನ್ಮಾನಿಸಿ, ಬಿಳ್ಕೋಡಲಾಯಿತು.

ಚಳಕಾಪುರ ಸಿದ್ದಾರೋಢ ಮಠದ ಶಂಕರನಂದ ಮಹಾಸ್ವಾಮಿ ಅವರು ದಿವ್ಯಸಾನಿಧ್ಯ ವಹಿಸಿ ಮಾತನಾಡಿ, ಭಾಲ್ಕಿ ತಾಲ್ಲೂಕಿನ ಪ್ರಸಿದ್ಧ ಪುಣ್ಯ ಭೂಮಿಯಲ್ಲಿ ಸಂತರು ನೆಲೆಸಿದ ಚಾಳಕಾಪೂರ ಗ್ರಾಮದ ಪಂಚಾಳ (ವಿಶ್ವಕರ್ಮ) ಜನಾಂಗದ ಬಡ ಕುಟುಂಬದಲ್ಲಿ ಜನಿಸಿದ ಗಣಪತಿ ಪಂಚಾಳ ಇವರು ಬಡಿಗೆತನ ಕಾಯಕ ವೃತ್ತಿಯ ಕುಟುಂಬದ ಕಾಶೆಪ್ಪಾ ಮತ್ತು ಕಾಳಮ್ಮಾ ಅವರ 3ನೇ ಮಗನಾಗಿ 1965 ರಲ್ಲಿ ಜನ್ಮ ಪಡೆದ ಇವರು ಚಳಕಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1ನೇ ತರಗತಿಯಿಂದ 7ನೇ ತರಗತಿವರೆಗೆ ಅಭ್ಯಾಸ ಮುಗಿಸಿ, 8ನೇ ತರಗತಿಯಿಂದ 10ನೇ ತರಗತಿವರೆಗೆ ಶ್ರೀ ಸಿದ್ದಾರೂಢ ಪ್ರೌಢ ಶಾಲೆ ಚಾಳಕಾಪೂರದಲ್ಲಿ ಅಭ್ಯಾಸ ಮುಗಿಸಿದ್ದಾರೆ. ಎಂದರು.

ಗಣಪತರಾವ್ ಪಂಚಾಳ ಅವರು ಬಾಲ್ಯದಿಂದ ಚುರುಕಾದ ವ್ಯಕ್ತಿ ನಾಟಕಗಾರ, ಕಲೆಗಾರ, ಜಾನಪದ ಸಂಗೀತ ಕಲಾವಿದರು, ಪುರಾಣ ಪ್ರವಚನಕಾರರು, ನಾಟಿ ವೈದ್ಯರು, ಸಾಹಿತಿ ರಚನಕಾರರು, ಶಿಕ್ಷಣ ಚಿಂತಕ ವೃತ್ತಿಯವರು, ಬಿ.ಶ್ಯಾಮ ಸುಂದರ ಶಿಕ್ಷಣ ಸಂಸ್ಥೆಯಲ್ಲಿ ಸುಮಾರು 8 ವರ್ಷಗಳ ಕಾಲ ಸಂಬಳವಿಲ್ಲದೆ ಸೇವೆ ಮಾಡಿರುತ್ತಾರೆ. ಗ್ರಾಮೀಣ ಬಡ ಮಕ್ಕಳಿಗೆ ಪ್ರೋತ್ಸಾಹದಾಯಕ ಸೇವಾ ಕಾರ್ಯ ಮಾಡಿರುತ್ತಾರೆ. ಎಂದರು. ಶಿಕ್ಷಣ ಇಲಾಖೆಯಲ್ಲಿ ಉತ್ತಮ ಸೇವೆ ಮಾಡಿ ಎಲ್ಲರಿಗೂ ಮೆಚ್ಚಿಗೆಯುಳ್ಳವರಾಗಿದ್ದಾರೆ. ಇವರ ಸಮಯಪಾಲನೆ ಶಿಸ್ತು ಸಹಕಾರ ಮನೋಭಾವ, ಕರುಣಾಮಯಿ, ವಿಶಾಲ ಹೃದಯಯುಳ್ಳವರಾಗಿದ್ದು, ಉತ್ತಮ ಮಾರ್ಗದರ್ಶಕರಾಗಿದ್ದಾರೆ. ಎಂದು ಬಣ್ಣಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ ಗೂಡಾಳ ಅವರು ಮಾತನಾಡಿ, ಗಣಪತರಾವ್ ಪಂಚಾಳ ಅವರು ಕಬಿರಾಬಾದ್ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಸಹ ಶಿಕ್ಷಕರಾಗಿ ಉತ್ತಮ ಸೇವೆ ಸಲ್ಲಿಸಿದ ಇವರು ಸರಳ, ಸಜ್ಜನಿಕೆಯ ಮತ್ತು ಮಕ್ಕಳ ಅಚ್ಚು ಮೇಚ್ಚಿನ ಶಿಕ್ಷಕರಲ್ಲಿ ಒಬ್ಬರಾಗಿದ್ದಾರೆ, ಎಂದು ತಿಳಿಸಿದರು.

ಗಣಪತರಾವ್ ಪಂಚಾಳ ಅವರು ಈಗಾಗಲೇ ಅಲ್ಲೂರು ಸೇರಿದಂತೆ ಕಬಿರಾಬಾದ್ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಸುಮಾರು ವರ್ಷಗಳ ಕಾಲ ಪಾರದರ್ಶಕವಾಗಿ ಸೇವೆ ಸಲ್ಲಿಸಿದ್ದಾರೆ,ಎಂದರು.ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ತಾತ್ಯಾರಾವ ಕಾಂಬಳೆ ಅವರು ಮಾತನಾಡಿ, ಶಿಕ್ಷಕರ ವೃತ್ತಿಯನ್ನು ಈ ಜಗತ್ತಿನಲ್ಲಿ ಅತ್ಯತ್ತಮ ಮತ್ತು ಆದರ್ಶ ವೃತ್ತಿ ಎಂದು ಪರಿಗಣಿಸಲಾಗಿದೆ. ಏಕೆಂದರೆ ಶಿಕ್ಷಕರು ನಿಸ್ವಾರ್ಥವಾಗಿ ಒಬ್ಬರ ಜೀವನವನ್ನು ರೂಪಿಸುವಲ್ಲಿ ತಮ್ಮ ಸೇವೆಯನ್ನು ನೀಡುತ್ತಾರೆ ಅವರ ಸಮರ್ಪಿತ ಕೆಲಸವನ್ನು ಬೇರೆ ಯಾವುದೇ ಕೆಲಸದೊಂದಿಗೆ ಹೋಲಿಸಲಾಗುವುದಿಲ್ಲ ಅದೇತರಹ ಗಣಪತರಾವ್ ಪಂಚಾಳರವರು ಕಬಿರಾಬಾದ್ ಗ್ರಾಮದಲ್ಲಿ ಕಾರ್ಯನಿರ್ವಹಿಸಿದ್ದಾರೆ ಎನ್ನುವುದಕ್ಕೆ ಇವತ್ತಿನ ಅವರ ಬೀಳ್ಕೊಡುಗೆ ಸಮಾರಂಭಕ್ಕೆ ಆಗಮಿಸಿದ ಜನರೆ ಸಾಕ್ಷಿ ಎಂದು ಗೂಣಗಾನ ಮಾಡಿದರು.

## ಪದ್ಮಭೂಷಣ ಅನಂತ್‌ನಾಗ್ ಅವರಿಗೆ ಸನ್ಮಾನ ಮಾಲ್ಗುಡಿ ಡೇಸ್ ಮರೆಯಲಾಗದ ಧಾರವಾಹಿ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.7:ಹಿರಿಯ ನಟ ಅನಂತ್ ನಾಗ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ಬಂದ ಹಿನ್ನೆಲೆಯಲ್ಲಿ ನೆಲಮಂಗಲ ಸಮೀಪದ ಗುಬ್ಬಿಗೂಡು ರೆಸಾರ್ಟ್‌ನಲ್ಲಿ ಚಿತ್ರ ಸಮೂಹ ಮತ್ತು ಸರ್ಕಲ್ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಅನಂತ್ ನಾಗ್ ಮತ್ತು ಗಾಯತ್ರಿ ದಂಪತಿಗಳನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಅನಂತ್‌ನಾಗ್ ಅವರ ಸಿನಿಮಾದ ಹಾಡುಗಳನ್ನು ಹಾಡುವ ಮೂಲಕ ಇಡೀ ಕಾರ್ಯಕ್ರಮ ರಸಮಯವಾಗುವಂತೆ ಆಯೋಜಿಸಲಾಗಿತ್ತು.ಅವರೊಂದಿಗೆ ನಡೆದ ಸಂವಾದದಲ್ಲಿ 76 ವಸಂತಗಳ ಅನುಭವಗಳನ್ನು ಅವರು ಹಂಚಿಕೊಂಡರು. ಪದ್ಮಭೂಷಣ ಪ್ರಶಸ್ತಿ ಬಂದಿದ್ದು ಕನ್ನಡಿಗರಿಗೆ. ಕನ್ನಡಿಗರು ನನಗೆ ಕೊಟ್ಟಿರುವ ಪ್ರೀತಿಯನ್ನು ಎಂದೂ ಮರೆಯಲಾಗದು ಎಂದು ತಮ್ಮ ಹಲವು ಅನುಭವಗಳನ್ನು ಹೇಳಿಕೊಂಡರು.ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಅವರು, ಅನಂತ್ ನಾಗ್ ಅವರ ನಟನೆಗೆ ಯಾರೂ ಸಾಟಿ ಇಲ್ಲ. ಅಷ್ಟು ಮನೋಜ್ಞ ಅಭಿನಯ ಅವರದು. ಎಂಬತ್ತರ ಕಾಲಘಟ್ಟದಲ್ಲಿ ಹಿಂದಿ ಮತ್ತು ಇಂಗ್ಲೀಷ್‌ನಲ್ಲಿ ಮೂಡಿ ಬಂದ ಮಾಲ್ಗುಡಿ ಡೇಸ್ ಧಾರವಾಹಿಯನ್ನು ಮರೆಯಲು ಸಾಧ್ಯವೇ ಇಲ್ಲ. ಚಿತ್ರರಂಗದಲ್ಲಿ ಅನಂತ್‌ನಾಗ್ ಮತ್ತು ಶಂಕರ್ ನಾಗ್ ಜೋಡಿ ಹೊಸ ಮೋಡಿಯನ್ನು ಮಾಡಿತು. ಆ ಮೂಲಕ ಚಿತ್ರರಂಗಕ್ಕೆ ಹೊಸ ಸಂಚಲನ ತಂದಿತು ಎಂದರು.

ಈ ಸಂದರ್ಭದಲ್ಲಿ ಚಿತ್ರ ನಟಿ ಜಯಮಾಲ, ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್, ಲಿಂಗದೇವರು, ಶೇಷಾದ್ರಿ, ಕನ್ನಡ ಪ್ರಭ ಸಂಪಾದಕ ರವಿಹೆಗಡೆ, ಸಪ್ತಾಹಿಕ ಸಂಪಾದಕ ಜೋಗಿ, ಗುಬ್ಬಿಗೂಡು ರಮೇಶ್ ಅವರುಗಳು ಅಭಿನಂದಿಸಿ ಮಾತನಾಡಿದರು.

## ನ್ಯೂಸ್ 81 ಕನ್ನಡ ವಾಹಿನಿಯ 2ನೇ ವಾರ್ಷಿಕೋತ್ಸವ: ಬೆಂಗಳೂರಿನ ಅಂಬೇಡ್ಕರ್ ಭವನದಲ್ಲಿ ಸಂಭ್ರಮ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ನ್ಯೂಸ್81 ಕನ್ನಡ ವಾಹಿನಿಯ ಎರಡನೇ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಮಲ್ಲಸಂದ್ರದ ಅಂಬೇಡ್ಕರ್ ಭವನದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರಿಗೆ ಸನ್ಮಾನ ಜರುಗಲಿದೆ.ಕಾರ್ಯಕ್ರಮದಲ್ಲಿ ರಾಜಕೀಯ ಮುಖಂಡರು, ಮಠದ ಶ್ರೀ ಸ್ವಾಮಿಜಿಗಳು,ಸಮಾಜಸೇವಕರು ಮತ್ತು ಉದ್ಯಮಿಗಳು ಪಾಲ್ಗೊಳ್ಳಲಿದ್ದಾರೆ ಎಂದು ವೀರೇಶ್ ಟಕ್ಕಳಕಿ ಕೆಂಭಾವಿಯವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

## ಬೀದರ್ ಏಕತಾ ಫೌಂಡೇಶನ್ ಕಚೇರಿಯಲ್ಲಿ ಕು.ಆಕಾಂಕ್ಷಾಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 07: ಸಂಗೀತ, ನೃತ್ಯ, ಕರಾಟೆ, ಗಾಯನ, ಈಜು ಸೇರಿದಂತೆ 65 ವಿದ್ಯೆಗಳಲ್ಲಿ ಪರಿಣಿತಿ ಹೊಂದಿರುವ ಕು. ಆಕಾಂಕ್ಷಾ ಪುರಾಣಿಕ್ ಅವರು ನಮ್ಮ ರಾಜ್ಯ ಕಂಡ ಅತ್ಯುನ್ನತ ಪ್ರತಿಭಾವಂತಳಾಗಿದ್ದಾಳೆ. ಅವಳ ಪ್ರತಿಭೆಗೆ ಮೆಚ್ಚಿ ಇಂಡೋನೇಷ್ಯಾ ದೇಶದ ಹೈ ರೇಂಜ್ ಮಲ್ಟಿ ಟ್ಯಾಲೆಂಟೆಡ್‌ಗಾಗಿ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಈಕೆಯ ಹೆಸರು ಬಂದಿದೆ. ಜಂಗಮ ಸಮಾಜದ ಪ್ರತಿಭೆ ದೇಶ-ವಿದೇಶಗಳಲ್ಲಿ ಹೆಚ್ಚು ಬೆಳೆಯಲಿ ಎಂದು ಏಕತಾ ಫೌಂಡೇಶನ್ ಅಧ್ಯಕ್ಷ ರವೀಂದ್ರ ಸ್ವಾಮಿ ತಿಳಿಸಿದರು.

ಬೀದರನ ಶಿವನಗರದಲ್ಲಿರುವ ಏಕತಾ ಫೌಂಡೇಶನ್ ಕಚೇರಿಯಲ್ಲಿ ಕು. ಆಕಾಂಕ್ಷಾ ಪ್ರಮೋದ್ ಪುರಾಣಿಕ್ ಅವರಿಗೆ ಗೌರವ ಸನ್ಮಾನ ನೆರವೇರಿಸಿ ಮಾತನಾಡಿದರು.

ಮೂಲತಃ ಕಲಬುರಗಿ ಜಿಲ್ಲೆಯವಳಾದ ಆಕಾಂಕ್ಷಾ ಸಾಮಾನ್ಯ ಕುಟುಂಬದಲ್ಲಿ ಅರಳಿದ ಪ್ರತಿಭೆ. ಚಿಕ್ಕಂದಿನಿಂದಲೇ ಶಿಕ್ಷಣದ ಜೊತೆಗೆ ಒಂದೊಂದು ಕಲೆ ಕರಗತ ಮಾಡಿಕೊಳ್ಳುತ್ತಾ ಸಾಗಿದ ಈ ಯುವತಿ ಇಂದು 65 ವಿದ್ಯೆಗಳಲ್ಲಿ ಪರಿಣಿತಿ ಹೊಂದಿದ್ದು ನಿಜಕ್ಕೂ ಶ್ಲಾಘನೀಯವಾಗಿದೆ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಡಿ.ಕೆ.ಗಣಪತಿ ಮಾತನಾಡಿ, ಕು. ಆಕಾಂಕ್ಷಾ ಬೀದರನ ಲಿಂಗರಾಜಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಾಲ್ಕನೇ ಸೆಮಿಸ್ಟರ್‌ನಲ್ಲಿ ಅಧ್ಯಯನ ಮಾಡುತಿದ್ದು, ಅರವತ್ತೈದು ವಿದ್ಯೆಗಳನ್ನು ಕರಗತ ಮಾಡಿಕೊಂಡ ಈಕೆಗೆ ಯುಎಸ್.ಎನಿಂದಲೂ ಪ್ರಶಸ್ತಿಗಾಗಿ ಆಹ್ವಾನ ಬಂದಿದೆ. ವಿದ್ಯೆ ಕಲಿಯಲು ವಯಸ್ಸಿಗಿಂತಲೂ ಮನಸ್ಸು ಬಹಳ ಮುಖ್ಯ. ಸಾಧಿಸುವ ಛಲವೊಂದಿದ್ದರೆ ಏನು ಬೇಕಾದರೂ ಸಾಧನೆಗೈಯಬಹುದು ಎಂಬುದಕ್ಕೆ ಕು.ಆಕಾಂಕ್ಷಾ ಇಂದಿನ ಯುವಕ ಯುವತಿಯರಿಗೆ ನೈಜ ಸಾಕ್ಷಿಯಾಗಿದ್ದಾರೆ ಎಂದರು.

ಖ್ಯಾತ ವೈದ್ಯೆ ಡಾ. ಸಪ್ನಾ ಬ್ರಹ್ಮಾನಂದ ಸ್ವಾಮಿ ಮಾತನಾಡಿ, ಬಹುಮುಖ ಪ್ರತಿಭೆ ಹೊಂದಿರುವ ಕು. ಆಕಾಂಕ್ಷಾ ಈ ನಾಡು ಕಂಡ ಅಪರೂಪದ ಸಾಧಕಿ. ಸಾವಿರಕ್ಕೊಬ್ಬರು ಇಂತಹ ಸಾಧನೆ ಮಾಡುತ್ತಾರೆ. ಒಂದೇ ವಿದ್ಯೆಯಲ್ಲಿ ಜೀವನಪೂರ್ತಿ ಸಾಧನೆ ಮಾಡುವ ಇಂತಹ ಸಾಧಕರ ಮಧ್ಯೆ ಶಿಕ್ಷಣದ ಜೊತೆಗೆ 65 ವಿದ್ಯೆ ಕಲಿತಿರುವ ಈಕೆಯ ಸಾಧನೆ ಬಣ್ಣಿಸಲಸಾಧ್ಯವಾದುದು. ಮುಂದೆ ಇದೇ ರೀತಿ ವಿಶ್ವಖ್ಯಾತಿ ಪಡೆಯಲಿ ಎಂದು ಶುಭ ಹಾರೈಸಿದರು.

ಇದೇ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ಪ್ರಮುಖರಾದ ಶ್ರೀಕಾಂತ ಸ್ವಾಮಿ ಸೋಲಪುರ, ಮಹೇಶ್ವರ ಸ್ವಾಮಿ, ಕಾರ್ತಿಕ ಸ್ವಾಮಿ ಮಠಪತಿ, ರೇವಣಸಿದ್ದಯ್ಯ ಸ್ವಾಮಿ ಹೆಡಗಾಪುರ, ಪತ್ರಕರ್ತ ಮಹಾರುದ್ರ ಡಾಕುಳಗೆ, ಕು. ಆಕಾಂಕ್ಷಾ ಅವರ ತಾಯಿ ರೂಪಾಲಿ ಪುರಾಣಿಕ್, ರಾಖಿ, ಪ್ರಕಾಶ ಹಮ್ಮಾ ಸೇರಿದಂತೆ ಕಚೇರಿಯ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

## ನಾಡ ತಹಸಿಲ್ದಾರ್ ಅಶೋಕ ರಾಜಗೀರಾರನ್ನು ವರ್ಗಾವಣೆ ಮಾಡಿ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 07: ತಾಲೂಕಿನ ಜನವಾಡ ನಾಡತಹಸೀಲ್ದಾರ ಅಶೋಕ ರಾಜಗೀರ ಅವರನ್ನು ಬೀದರ ಜಿಲ್ಲೆಯಿಂದ ಬೇರೆ ಜಿಲ್ಲೆಗೆ ವರ್ಗಾವಣೆ ಮಾಡಲು ಒತ್ತಾಯಿಸಿ ಕರ್ನಾಟಕ ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ನಿಗ್ರಹ ಸಮಿತಿಯಿಂದ ಕಲಬುರಗಿ ಪ್ರಾದೇಶಿಕ ಆಯುಕ್ತರಿಗೆ ಮನವಿ ಸಲ್ಲಿಸಲಾಯಿತು.




ಬೀದರ ತಾಲೂಕಿನ ಜನವಾಡ ನಾಡ ತಹಸೀಲ್ದಾರರು ಅವರ ಕಛೇರಿಗೆ ಸಾರ್ವಜನಿಕರು ವಿವಿಧ ಅರ್ಜಿಗಳನ್ನು ಸಲ್ಲಿಸಿದರೆ, ಇಲ್ಲಸಲ್ಲದ ಕಾರಣಗಳನ್ನು ಹೇಳಿ ಅರ್ಜಿಯನ್ನು ತಿರಸ್ಕರಿಸಿರುತ್ತಾರೆ.

ಈ ವಿಷಯದ ಬಗ್ಗೆ ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಸುಮಾರು ಸಲ ಮನವಿ ಪತ್ರವನ್ನು ನೀಡಿರುತ್ತೇವೆ. ಆದರೆ ಯಾವುದೇ ಕ್ರಮ ವಹಿಸದೇ ಇರುವುದು ವಿಪರ್ಯಾಸ ಎಂದು ಮನವಿಯಲ್ಲಿ ದೂರಿದ್ದಾರೆ.

ಈ ಸಂದರ್ಭದಲ್ಲಿ ಸಂದೀಪ ಕಾಂಟೆ, ಮಹೇಂದ್ರಕುಮಾರ ಹೊಸಮನಿ, ವಿಶಾಲ ದೊಡ್ಡಿ, ಸಂಗಮೇಶ ಭಾವಿದೊಡ್ಡಿ ಸೇರಿದಂತೆ ಹಲವರಿದ್ದರು.

# ಬಕ್ರೀದ್ ಮುನ್ನಾದಿನ ಮುಸ್ಲಿಂ ಬಡಾವಣೆಯಿಂದ ಹಸುಗಳನ್ನು ವಶಕ್ಕೆ ಪಡೆದ ಪ್ರಕರಣ; ಶಾಸಕ ಶರಣು ಸಲಗರ ವಿರುದ್ಧ ಪ್ರತಿಭಟನೆ





ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 07 : ಬಕ್ರೀದ್ ಮುನ್ನಾದಿನ ಮುಸ್ಲಿಂ ಬಡಾವಣೆಯೊಂದಕ್ಕೆ ಭೇಟಿ ನೀಡಿ ಹಸುಗಳನ್ನು ವಶಕ್ಕೆ ಪಡೆದ ಪ್ರಕರಣಕ್ಕೆ ಸಂಬಂದಿಸಿದಂತೆ, ಬಸವಕಲ್ಯಾಣ ಶಾಸಕ ಶರಣು ಸಲಗರ ಅವರ ವಿರುದ್ಧ ಬಸವಕಲ್ಯಾಣ ನಗರ ಪೊಲೀಸ್ ಠಾಣೆ ಬಳಿ ಮುಸ್ಲಿಂ ಮುಖಂಡರು ಪ್ರತಿಭಟನೆ ನಡೆಸಿರುವ ಘಟನೆ ಶುಕ್ರವಾರ ಸಂಜೆ ನಡೆದಿದೆ.

ಬಸವಕಲ್ಯಾಣ ಶಾಸಕ ಶರಣು ಸಲಗರ ಅವರು ಶುಕ್ರವಾರ ಬಸವಕಲ್ಯಾಣ ನಗರದ ಮುಸ್ಲಿಂ ಬಡಾವಣೆಯೊಂದಕ್ಕೆ ಭೇಟಿ ನೀಡಿ ಅಕ್ರಮವಾಗಿ ಗೋ ಹತ್ಯೆ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದರು. ಬಳಿಕ ಪಶು ಇಲಾಖೆಯ ಅಧಿಕಾರಿಗಳನ್ನು ಸ್ಥಳಕ್ಕೆ ಕರೆಸಿ, ಕೊಟ್ಟಿಗೆಯಲ್ಲಿದ್ದ ಹಸುಗಳನ್ನು ವಶಕ್ಕೆ ಪಡೆದುಕೊಳ್ಳುವಂತೆ ಸೂಚಿಸಿದ್ದರು. ಅದರಂತೆ ಅಧಿಕಾರಿಗಳು ಎಲ್ಲ ಹಸುಗಳನ್ನು ವಶಕ್ಕೆ ಪಡೆದುಕೊಂಡರು ಎಂದು ತಿಳಿದು ಬಂದಿದೆ.

ಶಾಸಕ ಶರಣು ಸಲಗರ್ ಅವರು ಬಡಾವಣೆಯಿಂದ ವಾಪಸ್ಸು ಹೋದ ಬಳಿಕ, ಶಾಸಕರ ನಡೆಯನ್ನು ಖಂಡಿಸಿ ನಗರದ ಬಸವಕಲ್ಯಾಣ ನಗರ ಪೊಲೀಸ್ ಠಾಣೆ ಬಳಿ ಮುಸ್ಲಿಂ ಮುಖಂಡರು ಜಮಾವಣೆಗೊಂಡು ಶಾಸಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮುಸ್ಲಿಂ ಮುಖಂಡರೊಬ್ಬರು ಮಾತನಾಡಿ, ಪಶು ಇಲಾಖೆಯ ಅಧಿಕಾರಿಗಳು ದನಗಳನ್ನು ವಶಕ್ಕೆ ಪಡೆದುಕೊಂಡು ಹೋಗಿದ್ದಾರೆ. ಅದನ್ನು ವಾಪಸ್ಸು ತಂದು ಒಪ್ಪಿಸಬೇಕು. ಸಮುದಾಯದವರು ಯಾರು ಕೂಡ ಕಾನೂನನ್ನು ಕೈಗೆತ್ತಿಕೊಳ್ಳಬಾರದು ಎಂದು ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಡಿವೈಎಸ್ಪಿ ನ್ಯಾಮೇಗೌಡ ಅವರು, ನಾಳೆ ಬಕ್ರೀದ್ ಹಬ್ಬವಿದೆ. ಎಲ್ಲರೂ ಶಾಂತಿಯಿಂದ ಹಬ್ಬ ಆಚರಣೆ ಮಾಡಬೇಕು. ಯಾರಾದರೂ ತೊಂದರೆ ನೀಡಿದರೆ ನಮ್ಮನ್ನು ಸಂಪರ್ಕಿಸಿ, ನಾವು ನಿಮ್ಮ ರಕ್ಷಣೆಗೋಸ್ಕರ ಸದಾ ಸಿದ್ದರಿದ್ದೇವೆ ಎಂದು ಭರವಸೆ ನೀಡಿದರು.

# ಅಧಿಕಾರಿಗಳ ವರ್ಗಾವಣೆ: ಸಿ.ಎಂ., ಸಚಿವ ಖಂಡ್ರೆಯವರಿಗೆ ಜೂ. ೯ ರಂದು ಮನವಿಗೆ ನಿಯೋಗ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 07 : ಹಲವು ವರ್ಷಗಳಿಂದ ಜಿಲ್ಲೆಯಲ್ಲೇ ಬೀಡು ಬಿಟ್ಟಿರುವ ಅಧಿಕಾರಿಗಳ ವರ್ಗಾವಣೆಗಾಗಿ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಕಾಂಗ್ರೆಸ್ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ತಿಳಿಸಿದ್ದಾರೆ.

ಜೂನ್ 9 ರಂದು ನಿಯೋಗದಲ್ಲಿ ಬೆಂಗಳೂರಿಗೆ ತೆರಳಿ ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮತ್ತು ಬೀದರ್ ಸ್ಥಳೀಯ ಶಾಸಕರು ಪೌರಾಡಳಿತ ಇಲಾಖೆ ಸಚಿವರು ಅವರಿಗೆ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ. ಜಿಲ್ಲೆಯ ವಿವಿಧ



ಇಲಾಖೆಗಳಲ್ಲಿ ಅನೇಕ ಅಧಿಕಾರಿಗಳು ಸುದೀರ್ಘ ಅವಧಿಯಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ. ಕೆಲವರು ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕೆಲವರು ಸ್ಥಳೀಯರೊಂದಿಗೆ ಶಾಮೀಲಾಗಿದ್ದರಿಂದ ಸಾರ್ವಜನಿಕರ ಕೆಲಸಗಳು ಸುಗಮವಾಗಿ ಆಗುತ್ತಿಲ್ಲ ಎಂಬ ದೂರುಗಳಿವೆ. ಕಾರಣ, ಅಧಿಕಾರಿಗಳ ವರ್ಗಾವಣೆಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಮುಖಂಡರಾದ ರತ್ನದೀಪ ಕಸ್ತೂರೆ, ರೋಹಿತ್ ಕಾಂಬಳೆ ಹಾಗೂ ರಾಜರತನ್ ಸಿಂಧೆ ಗುರುದಾಸ್ ಹಾಗೂ ಇನ್ನಿತರು ನಿಯೋಗದಲ್ಲಿ ಇರಲಿದ್ದಾರೆ ಎಂದು ಹೇಳಿದ್ದಾರೆ.

# ಕಾಯಕ-ದಾಸೋಹ ಸಂಸ್ಕೃತಿ ಬೆಳೆಯಲಿ:ಡಾ.ಬಸವಲಿಂಗ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.7: ವಿಶ್ವಗುರು ಬಸವಣ್ಣನವರು ಬೋಧಿಸಿದ ಕಾಯಕ–ದಾಸೋಹ ಸಂಸ್ಕೃತಿ ಎಲ್ಲರೂ ಬೆಳೆಸಿಕೊಂಡು ನೆಮ್ಮದಿಯ ಬದುಕು ಸಾಗಿಸಬೇಕು ಎಂದು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದಲ್ಲಿ ವಿದ್ಯಾವತಿ ಸೋಮನಾಥಪ್ಪ ಅಷ್ಟೂರೆ ಅವರ ವಿವಾಹ ಸುವರ್ಣ ಮಹೋತ್ಸವ ಅಂಗವಾಗಿ ಶುಕ್ರವಾರ ಆಯೋಜಿಸಿದ್ದ ಗುರುಕೃಪೆ ಗ್ರಂಥ ಬಿಡುಗಡೆ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಬಸವಣ್ಣನವರ, ಡಾ.ಚನ್ನಬಸವ ಪಟ್ಟದ್ದೇವರ ವಿಚಾರಧಾರೆ, ಚಿಂತನೆಗಳನ್ನು ವಿದ್ಯಾವತಿ ಸೋಮನಾಥಪ್ಪ ಅಷ್ಟೂರೆ ದಂಪತಿಗಳು ನಿಜ ಜೀವನದಲ್ಲಿ ಆಚರಣೆಗೆ ತಂದು ಸಾರ್ಥಕ ಬದುಕು ಸಾಗಿಸುತ್ತಿದ್ದಾರೆ.

ಕಾಯಕ– ದಾಸೋಹ ತತ್ವ ಜೀವನದುದ್ದಕ್ಕೂ ಅನುಸರಿಸಿ ಎಲ್ಲರಿಗೂ ಪ್ರೇರಣೆಯಾಗಿದ್ದಾರೆ. ಇಂದಿನ ದಿನಮಾನಗಳಲ್ಲಿ ಹೊಸತರಲ್ಲೆ ದಾಂಪತ್ಯದಲ್ಲಿ ಬಿರುಕು ಬೀಡುತ್ತಿರುವ ಸಾಕಷ್ಟು ಉದಾಹರಣೆ ನಮ್ಮ ಮಧ್ಯೆಯಿವೆ.

ಆದರೆ ವಿದ್ಯಾವತಿ ಸೋಮನಾಥಪ್ಪ ಅಷ್ಟೂರೆ ದಂಪತಿಗಳು ಸುಖ, ದುಖಗಳನ್ನು ಸಮಾನವಾಗಿ ಸ್ವೀಕರಿಸಿ ಆದರ್ಶ ಜೀವನ ಸಾಗಿಸುತ್ತಿರುವುದು ಹೆಮ್ಮೆ ತರಿಸಿದೆ ಎಂದು ತಿಳಿಸಿದರು.

ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ವಿದ್ಯಾವತಿ ಸೋಮನಾಥಪ್ಪ ಅಷ್ಟೂರೆ ದಂಪತಿಗಳು ಶ್ರೀಮಠದ ಪರಮ ಭಕ್ತರಾಗಿದ್ದಾರೆ. ಅವರ ಗುರುಭಕ್ತಿ, ಗುರುನಿಷ್ಠೆ ಉಳಿದವರಿಗೆ ಮಾದರಿಯಾಗಿ ನಿಲ್ಲುತ್ತದೆ. ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ ಎಂದು ಬಣ್ಣಿಸಿದರು.

ಬಸವಲಿಂಗ ಸ್ವಾಮೀಜಿ, ಶಿವಾನಂದ ಸ್ವಾಮೀಜಿ, ಶಿವಬಸವದೇವರು, ಪ್ರಭುಲಿಂಗ ಸ್ವಾಮೀಜಿ ಸಮ್ಮುಖ ವಹಿಸಿದ್ದರು. ಈ ಸಂದರ್ಭದಲ್ಲಿ ಅಕ್ಷತಾ ಯೋಗೇಶ ಅಷ್ಟೂರೆ, ಯೋಗೇಶ ಅಷ್ಟೂರೆ, ಶರಣಬಸವ ಅಷ್ಟೂರೆ, ಶಂಭುಲಿಂಗ ಕಾಮಣ್ಣ, ವೀರಣ್ಣ ಕುಂಬಾರ, ಮಲ್ಲಮ್ಮ ನಾಗನಕೇರೆ ಸೇರಿದಂತೆ ಮುಂತಾದವರು ಇದ್ದರು.

ಲೋಕನಾಥ್, ಸಂಗಮೇಶ ವಚನ ಸಂಗೀತ ನಡೆಸಿಕೊಟ್ಟರು. ಅಶ್ವಿನಿ ಶರಣಬಸವ ಅಷ್ಟೂರೆ ಸ್ವಾಗತಿಸಿದರು. ರಂಜಿತಾ, ನವಲಿಂಗ ಪಾಟೀಲ್ ನಿರೂಪಿಸಿದರು.

**ಗುರುಕೃಪೆ ಗ್ರಂಥ ಬಿಡುಗಡೆ**

ಇದೇವೇಳೆ ಗುರುಕೃಪೆ ಗ್ರಂಥ ಬಿಡುಗಡೆಗೊಂಡಿತು. ಕನ್ನಡ, ಮರಾಠಿ ಭಾಷೆಯಲ್ಲಿ ಪ್ರಕಟಗೊಂಡ ಗ್ರಂಥವನ್ನು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಬಿಡುಗಡೆಗೊಳಿಸಿದರು. ಜತೆಗೆ ಹೇಮಲತಾ ರವಿಶಂಕರ ಶೆಟ್ಟಿ ವಿವಾಹ ಬೆಳ್ಳಿ ಮಹೋತ್ಸವ ಮತ್ತು ಕುಮಾರ ಕಲಶ, ಸಿದ್ದೇಶ ಶಾಲು ಹೊದಿಸುವ ಕಾರ್ಯಕ್ರಮ ನೆರವೇರಿತು.

# ಅಹಿಲ್ಯಾದೇವಿ ಹೋಳ್ಕರ್ ಅವರ ೩೦೦ನೇ ಜಯಂತ್ಯುತ್ಸವ



ಮಲ್ಲಮ್ಮ ನುಡಿ ವಾರ್ತೆ

ಔರಾದ್ :ಜೂ.7: ಕಾಶಿ ವಿಶ್ವನಾಥ ದೇವಸ್ಥಾನ ಸೇರಿದಂತೆ ದೇಶದ ಮೂಲೆ ಮೂಲೆಗಳಲ್ಲಿ ದೇಗುಲಗಳ ಜೀರ್ಣೋದ್ಧಾರ ಹಾಗೂ ಬಡ, ನಿರ್ಗತಿಕ ಮತ್ತು ದಿನದಲಿತರ ಏಳ್ಗೆಗಾಗಿ ಶ್ರಮಿಸಿದ ಅಹಿಲ್ಯಾದೇವಿ ಹೋಳ್ಕರ್ ಅವರ 300ನೇ ಜಯಂತ್ಯುತ್ಸವ ಸಮಾರಂಭವು ಇದೇ ದಿನಾಂಕ 15–6–2025,ರಂದು ನಡೆಯಲಿದೆ, ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಜಯಂತ್ಯುತ್ಸವ ಸಮಿತಿ ಅಧ್ಯಕ್ಷ ಈಶ್ವರಸಿಂಗ್ ಠಾಕೂರ್ ಹೇಳಿದರು.

ಔರಾದ್ ಪಟ್ಟಣದ ಬಂಜಾರಾ ಭವನದಲ್ಲಿ ಉತ್ಸವ ಸಮಿತಿ ಕರೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ, ಅಂದು ನಡೆಯುವ ಸಮಾರಂಭದಲ್ಲಿ ಹೋಳ್ಕರ್ ವಂಶಜರಾದ ಭೂಷನ್‌ಸಿಂಹ ಹೋಳ್ಕರ್, ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪ, ಗ್ಯಾರಂಟಿ ಯೋಜನೆಗಳ ರಾಜ್ಯಾಧ್ಯಕ್ಷ ಹೆಚ್.ಎಂ ರೇವಣ್ಣ ಸೇರಿದಂತೆ ರಾಜ್ಯ ಹಾಗೂ ಜಿಲ್ಲಾ ಮಟ್ಟದ ರಾಜಕೀಯ ಧುರೀಣರು ಆಗಮಿಸುತ್ತಿದ್ದಾರೆ ಎಂದರು.

ಸಮಿತಿ ಗೌರವಾಧ್ಯಕ್ಷ ಪಂಡಿತರಾವ ಚಿದ್ರಿ ಮಾತನಾಡಿ, ಅಂದು ಅಹಿಲ್ಯಾದೇವಿ ಹೋಳ್ಕರ್ ಅವರ ಭವ್ಯ ಮೆರವಣಿಗೆ ನಗರದ ಬೊಮ್ಮಗೊಂಡೇಶ್ವರ ವೃತ್ತದಿಂದ ಆರಂಭವಾಗಲಿದೆ. ಮಾಜಿ ಸಚಿವ ಪ್ರಭು ಚವ್ಹಾಣ ಅವರಿಗೆ ವಿಶೇಷ ಸನ್ಮಾನ ನೆರವೇರಲಿದೆ.

ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್, ಮಾಜಿ ಸಭಾಪತಿ ರಘುನಾಥ ಮಲ್ಕಾಪೂರೆ, ಪ್ರಕಾಶ ಖಂಡ್ರೆ, ಸುಮಿತರಾವ ಲೊಖಂಡೆ, ಸುಜಾತಾ ಸಾಗರ ರಾಜೆ ಪಾಂಢ–ರೆ ವಿಶೇಷ ಉಪನ್ಯಾಸ ನೀಡಲಿದ್ದಾರೆ ಎಂದರು. ಇದೆ ಸಂದರ್ಭದಲ್ಲಿ ಸಮಾರಂಭದ ಪ್ರಚಾರಾರ್ಥ ಭಿತ್ತಿಪತ್ರ ಬಿಡುಗಡೆ ಮಾಡಿದರು.

ಪತ್ರಿಕಾ ಗೋಷ್ಠಿಯಲ್ಲಿ ಮಾಳಪ್ಪ ಅಡಸಾರೆ, ವೆಂಕಟರಾವ ಡೊಂಬಾಳೆ, ಬಾಲಾಜಿ ನಾಯಕ್, ಕೊಂಡಿಬಾರಾವ ಪಾಂಡ್ರೆ, ವಿಜಯಕುಮಾರ್ ಡುಮ್ಮೆ, ಸಿದ್ದು ಜೀಲವಟೆ, ಅಂಗದರಾವ ಸಿಂಗಾಡೆ, ಬಾಪುರಾವ ಕೋಕನಾರೆ, ಕುಶಾಲರಾವ ನಾಯಕ್, ರಾಜೇಂದ್ರ ನಾಯಕ್, ಜುಂಜೇರಾವ ನಾಯಕ್, ಸುರೇಶ ಪಾಂಡ್ರೆ, ಸೇರಿದಂತೆ ಇನ್ನಿತರರಿದ್ದರು.

# ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂ.7:ವಿಶ್ವಪರಿಸರ ದಿನಾಚರಣೆ ಅಂಗವಾಗಿ ಇತ್ತೀಚಿಗೆ ಬೀದರ ವಿಭಾಗದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಕಾಂತ ಫುಲೇಕರ್ ಅವರು ಕೋಳಾರ ಇಂಡಸ್ಟ್ರೀಯಲ್ ಏರಿಯಾದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಉದ್ದೇಶಿತ ಮಿನಿ ಬಸ್ ತಂಗುದಾಣ ಹಾಗೂ ಸಿಬ್ಬಂದಿ ವಸತಿ ಗೃಹ ಪ್ಲಾಟ್ ನಂ. 16(ಬಿ) ದಲ್ಲಿ ಮತ್ತು ಈಗಾಗಲೇ ನಿಗಮದ ವಿಭಾಗೀಯ ಕಾರ್ಯಾಗಾರ ನಿರ್ಮಾಣಕ್ಕೆ ಟೆಂಡರ್ ಪ್ರಕ್ರಿಯೆಯಲ್ಲಿರುವ ಪ್ಲಾಟ್ ನಂ. 132 (ಎ) ದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

. ಈ ಸಂದರ್ಭದಲ್ಲಿ ಕಕರಸಾ ಬೀದರ ವಿಭಾಗದ ಅಧಿಕಾರಿಳು, ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಲ್ಲಾಹುವಿನ ಅನುಗ್ರಹಕ್ಕೆ ಬಡವರ ಸೇವೆ ಮಾಡಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ:ಜೂ.7:ಪಟ್ಟಣ ಸೇರಿದಂತೆ ತಾಲ್ಲೂಕಿನಾದ್ಯಂತ ಶನಿವಾರ ತ್ಯಾಗ ಬಲಿದಾನದ ಸಂಕೇತವಾದ ಬಕ್ರೀದ್ ಅಂಗವಾಗಿ ವಿಶೇಷ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಪಟ್ಟಣದ ನೂತನ ಈದ್ಗಾ, ಶಾಹಿ ಇದಗಾ, ಮಿಲ್ಲತನಗರ ಇದಗಾ, ಹಾಗೂ ವಿವಿಧ ಮಸೀದಿಗಳಲ್ಲಿ "ಅಲ್ಲಾಹು ಅಕ್ಬರ್" "ಅಲ್ಲಾಹು ಅಕ್ಬರ್" ಎಂದು ಅಲ್ಲಾಹುವಿನ ನಾಮಸ್ಮರಣೆ ಮಾಡುತ್ತಾ ಇದಗಾ, ಮಸೀದಿಗಳಿಗೆ ತೆರಳಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ನಮಾಜ್ ನಂತರ ಮನುಕುಲ ಕಲ್ಯಾಣ ಹಾಗೂ ಒಳಿತಿಗಾಗಿ ದುವಾ ಮಾಡಲಾಯಿತು. ಬಳಿಕ ಮನೆಗಳಲ್ಲಿ ಹಬ್ಬದ ನಿಮಿತ್ತ ಸಿದ್ಧಪಡಿಸಿದ ವಿಶೇಷ ಖಾದ್ಯ "ಶಿರ್ ಕುರಮಾ" (ಸಿಹಿ ಪದಾರ್ಥ) ಸವಿದರು.

ತ್ಯಾಗ ಮುಖ್ಯ: ಪಟ್ಟಣದ ಹುಣಸಗಿ ರಸ್ತೆಯಲ್ಲಿರುವ ಈದ್ಗಾದಲ್ಲಿ ಸಾಮೂಹಿಕ ನಮಾಜ ನಿರ್ವಹಿಸಿದ ನಂತರ ಧರ್ಮ ಸಂದೇಶ ನೀಡಿದ ಡಾ.ಮಿನಹಾಜುದ್ದೀನ್ ಖಾಜಿ ಅವರು ಮಾನವೀಯತೆಯ ಒಳಿತಿಗಾಗಿ ತ್ಯಾಗಕ್ಕೆ ಸಿದ್ಧನಾಗಿರುವವನೇ ನಿಜವಾದ ಮುಸ್ಲಿಂ ಎಂದರು. ಬಡವರ ಕಲ್ಯಾಣಕ್ಕಾಗಿ ಧನವನ್ನು ತ್ಯಾಗ ಮಾಡುವ ಮನೋಭಾವ ರೂಡಿಸಿಕೊಳ್ಳಬೇಕು ಸದಾ ಸತ್ಯದ ಮಾರ್ಗದಲ್ಲಿ ನಡೆಯಬೇಕು ಸುಳ್ಳು ಪಾಪದ ಪ್ರಪಾತಕ್ಕೆ ತಳ್ಳುತ್ತದೆ ಅದು ಮನುಷ್ಯನನ್ನು ಹಾಳು ಮಾಡುತ್ತದೆ ಹೀಗಾಗಿ ಸುಳ್ಳಿನ ದಾರಿ ಬಿಟ್ಟು ಸತ್ಯದ ಮಾರ್ಗದಲ್ಲಿ ನಡೆಯಬೇಕು ಎಂದರು. ಬಡವರ ಹೃದಯ ಗೆದ್ದರೆ ಅಲ್ಲಾಹ ಸಂತುಷ್ಟನಾಗುತ್ತಾನೆ ಎಂದು ಪ್ರವಾದಿ ಮೊಹಮ್ಮದರು ಸಾರಿದ್ದಾರೆ ನಾವು ಬಡವರ ಹೃದಯ ಗೆಲ್ಲುವ ಮೂಲಕ ಅಲ್ಲಾಹನ ಪ್ರೀತಿ ಅನುಗ್ರಹಕ್ಕೆ ಪಾತ್ರರಾಗಬೇಕು ಎಂದರು. ಬಕ್ರೀದ್ ಹಬ್ಬ ತ್ಯಾಗ ಬಲಿದಾನದ ಸಂಕೇತವಾಗಿದೆ ಪ್ರವಾದಿ ಇಬ್ರಾಹಿಂ ಅವರ ತ್ಯಾಗ ಔದಾರ್ಯವನ್ನು ಈ ಹಬ್ಬ ಸಾರುತ್ತದೆ. ಅಲ್ಲಾಹನ ಆದೇಶ ಬಂದಾಗ ತಮ್ಮ ಜೀವಕ್ಕಿಂತ ಅಮೂಲ್ಯವಾದ ಮಗನನ್ನು ತ್ಯಾಗ ಮಾಡಲು ಅವರು ಹಿಂದೇಟು ಹಾಕಲಿಲ್ಲ ಎಂದರು. ನಾವು ನಮ್ಮಲ್ಲಿರುವ ದುರ್ಗಣಗಳನ್ನು ತ್ಯಜಿಸಬೇಕು ಸದ್ಗುಣಗಳನ್ನು ಅಳವಡಿಸಿಕೊಂಡು ಸಂಸ್ಕಾರಯುಕ್ತ ಬದುಕು ನಮ್ಮದಾಗಿಸಿಕೊಳ್ಳಬೇಕು ಎಂದು ಹೇಳಿದರು. ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹಮದ್ ಖಾಜಿ ಸಾಮೂಹಿಕ ಪ್ರಾರ್ಥನೆಯ ನೇತೃತ್ವ ವಹಿಸಿದ್ದರು. ಪ್ರಮುಖರಾದ ಹಫೀಜ ಇಬ್ರಾಹಿಂ ಮುಲ್ಲಾ, ಖಾಜಾಹುಸೇನ ಡೋಣಿ, ಗನಿಸಾಬ ಲಾಹೋರಿ, ಮಾಸೂಮಸಾಬ ಕೆಂಭಾವಿ, ಅಬ್ದುಲ್ ರೆಹಮಾನ ಏಕೀನ, ಅಬ್ದುಲ್ ರಜಾಕ್ ಮನಗೂಳಿ, ಅಲ್ಲಾಭಕ್ಷ ನಮಾಜಕಟ್ಟಿ, ಸೈಯದ್ ಫಸಿಯುದ್ದೀನ ಖಾಜಿ, ಮುರ್ತುಜಾ ಮೇತ್ರಿ, ಖಾಜಾಹುಸೇನ ಸಗರ, ಸಿಕಂದರ ವಠಾರ, ಅಬ್ದುಲ್ ಸತ್ತಾರ ಅವಟಿ, ಮೆಹಬೂಬ ಚೋರಗಸ್ತಿ, ಎಸ್.ಎ.ನಾಲಬಂದ, ರೋಷನ ಡೋಣಿ, ನಿರಂಜನ ಶಾಮಕಾನದಾರ, ಮುಸ್ತಫಾ ಚೌಧರಿ, ಇಬ್ರಾಹಿಂ ಮನ್ಸೂರ, ತನ್ವೀರ್ ಮನಗೂಳಿ ಇದ್ದರು.

# ವಿಶೇಷಚೇತನರಿಗೆ ತ್ರಿಚಕ್ರ ವಾಹನ ಖರೀದಿಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 6 –ಂಧನೂರು ನಗರಸಭೆ ಕಾರ್ಯಲಯದಿಂದ2023–24ನೇ ಸಾಲಿನ ಎಸ್.ಎಫ್.ಸಿ (ಮುಕ್ತ ನಿಧಿ) ಅನುದಾನಗಳ ಶೇ.5ರ ಯೋಜನೆಗಳಿಗೆ ಕಾಯ್ದಿರಿಸಲಾದ ಅನುಷ್ಠಾನಕ್ಕಾಗಿ ವೈಯಕ್ತಿಕ ಚಟುವಟಿಕೆಗಳಿಗೆಸಂಬಂಧಿಸಿದಂತೆ ವಿಕಲಚೇತನರಿಗೆತ್ರಿಚಕ್ರವಾಹನ ಖರೀದಿಸಿ ನೀಡಲು ಅವಕಾಶ ಕಲ್ಪಿಸಲಾಗಿದೆ.

ಇದಕ್ಕೆಸಂಬಂಧಿಸಿದ ಪೂರ್ಣ ವಿವರದ ಪ್ರಕಟಣೆಯನ್ನು ನಗರಸಭೆ ಕಾರ್ಯಾಲಯ ನೊಟೀಸ್ ಫಲಕದಲ್ಲಿ ಲಗತ್ತಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ ಸಿಣಣಠಿ://ತಿತಿತಿ. ುಟಿಜುಚಿಟಿಚಿಡಿಟಿಣಠಿ.ಟಡಿಛಿ. ರಂತ.ಎಟಿ ನಲ್ಲಿ ಮಾಹಿತಿಯನ್ನು ಡೌನ್‌ಲೋಡ್ ಮಾಡಿ ವಿವರ ಪಡೆದುಕೊಳ್ಳಬಹುದು.

ಅರ್ಹಫಲಾನುಭವಿಗಳುವೈಯಕ್ತಿಕ ಚಟುವಟಿಕೆವಾರು ತಿಳಿಸಿರುವ ಅಗತ್ಯ ಎಲ್ಲಾ ದಾಖಲೆಗಳನ್ನು ಗೆಜೆಟೆಡ್ ಅಧಿಕಾರಿಗಳ ಧೃಢೀಕರಣದೊಂದಿಗೆ ಜೂನ್ 20ರ ಸಂಜೆ 5.30 ರೊಳಗೆ ಅರ್ಜಿ ಸಲ್ಲಿಸಬೇಕು. ಕೊನೆಯ ದಿನಾಂಕ ಮೀರಿ ಬಂದಂತಹ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಮತ್ತು ಪ್ರಕಟಣೆಯಲ್ಲಿನ ಪ್ರಚುರಪಡಿಸಲಾದ ವೈಯ್ಯಕ್ತಿಕ ಚಟುವಟಿಕೆಗಳ ಯೋಜನೆಗಳ ಬಗ್ಗೆ ಸಮರ್ಪಕವಾಗಿ ತಿಳಿದು ಅರ್ಜಿಗಳನ್ನು ಸಲ್ಲಿಸಬೇಕೆಂದು ಸಿಂಧನೂರುನಗರಸಭೆಕಾರ್ಯಲಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರಕಾರದ ಸುತ್ತೋಲೆಯನ್ವಯ ಶೇ.5 ಯೋಜನೆಗಳಿಗೆ ಫಲಾನುಭವಿಗಳಆಯ್ಕೆಸಂದರ್ಭದಲ್ಲಿ ಅತೀ ಹಿಂದುಳಿದ, ಕಡುಬಡವರಿಗೆ ಹಾಗೂ ಪೌರಕಾರ್ಮಿಕರುಗಳಿಗೆ ಆದ್ಯತೆನೀಡಲಾಗುವುದು. ಪ್ರಯುಕ್ತ ಅರ್ಜಿ ಸಲ್ಲಿಸುವ ಫಲಾನುಭವಿಗಳು ಕುಟುಂಬದ ಆದಾಯ ಕುರಿತು ಹಾಗೂ ಇತರ ಯಾವುದೇ ದಾಖಲಾತಿಗಳ ತಪ್ಪು ಮಾಹಿತಿ ನೀಡಿ ಸದರಿ ಯೋಜನೆಯಡಿ ಸೌಲಭ್ಯ / ಸಹಾಯಧನ ಪಡೆದಿದ್ದು ಕಂಡು ಬಂದಲ್ಲಿ ತಪ್ಪು ನಿರೂಪಣೆ ಮೇರೆಗೆ ಪಡೆಯಲಾದ ಸೌಲಭ್ಯ/ಸಹಾಯಧನದ ಮೊತ್ತವನ್ನು ದಂಡಸಮೇತ ವಸೂಲಿ ಮಾಡಿ ಕಾನೂನು ಕ್ರಮ ಜರುಗಿಸಲಾಗವುದು. ಆದ್ದರಿಂದ ಅರ್ಹ ಫಲಾನುಭವಿಗಳು ಮಾತ್ರ ಅರ್ಜಿ ಸಲ್ಲಿಸಿ ಸೌಲಭ್ಯಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ.

# ಆರೋಗ್ಯಯುತ ಬದುಕು ನೆಮ್ಮದಿ ಜೀವನಕ್ಕೆ ದಾರಿ : ಪಿಡಿಒ ಅಂದಿಗಲ್ಲಪ್ಪ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪ್ರಸ್ತುತ ಒತ್ತಡದಲ್ಲಿ ಬದುಕುತ್ತಿರುವ ಪ್ರತಿಯೊಬ್ಬರು ಆರೋಗ್ಯಯುತವಾಗಿ ಬದುಕಿದರೆ ನೆಮ್ಮದಿಜೀವನಕ್ಕೆದಾರಿಯಾಗುತ್ತದೆ–ಂದು ಚಿಕ್ಕಬೊಮ್ಮನಾಳ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅಂದಿಗಲ್ಲಪ್ಪ ಕರೆ ನೀಡಿದರು.

ಚಿಕ್ಕಬೊಮ್ಮನಾಳ ಗ್ರಾಮ ಪಂಚಾಯತಿಯಿಂದ ಚಿಕ್ಕಬೊಮ್ಮನಾಳ ಗ್ರಾಮದ ಕೆರೆ ಹೂಳೆತ್ತುವ ಸ್ಥಳದಲ್ಲಿ ನರೇಗಾ ಕೂಲಿಕಾರರಿಗೆಆರೋಗ್ಯತಪಾಸಣೆ ಶಿಬಿರ ಹಾಗು ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಹಣದಿಂದ ವಸ್ತುಗಳನ್ನು ನಾವು ಖರೀದಿಸಬಹುದು ಆದರೆ ಆರೋಗ್ಯವನ್ನು ನಾವು ಹಣದಿಂದ ಖರೀದಿಸಲು ಸಾಧ್ಯವಿಲ್ಲ. ಕೂಲಿಕಾರರು ಕೇವಲ ಕೂಲಿ ಕೆಲಸಕ್ಕೆ ಮಾತ್ರ ಸೀಮಿತವಾಗಿರದೇ ಆರೋಗ್ಯದ ಕಡೆಗೆ ಹೆಚ್ಚಿನ ಗಮನಹರಿಸಬೇಕೆಂದರು. ಇಂದಿನ ಆಹಾರ ಪದ್ದತಿಯಿಂದ ಬಹಳಷ್ಟು ಜನರು ಖಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ.

ಆದ್ದರಿಂದ ನಾವುಗಳು ಕಾಲ ಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಂಡುವೈದ್ಯರಸಲಹೆಯನ್ನು ಪಾಲಿಸಬೇಕೆಂದರು. ನಮ್ಮ ಮನೆಯ ಸುತ್ತ–ಮುತ್ತಲೂ ಗಿಡಗಳನ್ನು ನೆಡುವದರಿಂದ ವಾತಾವರಣ ಶುದ್ದವಾಗಿರುತ್ತದೆ. ಮನೆಯ ಮುಂದೆ ನೀರು ನಿಲ್ಲದಂತೆ ನಾವುಗಳು ಸ್ವಚ್ಚತೆಗೆ ಆದ್ಯತೆ ನೀಡಬೇಕೆಂದರು. ಮಾನವನ ಆರೋಗ್ಯ ಏರುಪೇರುಗಳು ಆಗುತ್ತಿರುವದರಿಂದ ಅನೇಕ ಅವಘಡಗಳು ಸಂಭವಿಸುತ್ತಿವೆ. ಪ್ರತಿ ದಿನ ಕ್ರಮಬದ್ದ ಆಹಾರ, ಕ್ರಮ ಬದ್ಧ ಕೆಲಸದಿಂದ ನೆಮ್ಮದಿ ಜೀವನ ನಡೆಸಲು ಸಹಕಾರಿಯಾಗುತ್ತದೆ ಎಂದರು.

ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ ಮಾತನಾಡಿ ನರೇಗಾ ಯೋಜನೆಯು ಗ್ರಾಮೀಣ ಭಾಗದ ಕೂಲಿಕಾರರಿಗೆ ಕೂಲಿ ಕೆಲಸ ಒದಗಿಸುವ ಯೋಜನೆಯಾಗಿದ್ದು ಕೆಲಸದಲ್ಲಿ ನಿರತರಾದ ಪ್ರತಿ ಕುಟುಂಬವು ಜೂನ್ ಮಾಹೆಯ ಒಳಗಾಗಿ 90 ದಿನಗಳ ಕೂಲಿ ಕೆಲಸ ನಿರ್ವಹಿಸಲು ಕೂಲಿಕಾರರಿಗೆ ತಿಳಿ ಹೇಳಿದರು. ಕಳೆದ ವರ್ಷ ರೂ.349/–ಇದ್ದುಪ್ರಸ್ತುತರೂ.370/–ಕ್ಕೆ ಕೂಲಿ ಹೆಚ್ಚಿಸಿದ್ದು ನಿಮಗೆ ನೀಡಿರುವ ಅಳತೆಗನುಗುಣವಾಗಿ ಕೆಲಸ ನಿರ್ವಹಿಸಬೇಕೆಂದು ಕರೆ ನೀಡಿದರು. ಪ್ರತಿಯೊಬ್ಬರಿಗೂ 06 ಪೂಟ್ ಉದ್ದ 06 ಅಗಲ 01 ಪೂಟ್ ಆಳ ಕೆಲಸ ನಿರ್ವಹಿಸಿದಲ್ಲಿ ಎಲ್ಲರಿಗೂ ರೂ.370/–ಕೂಲಿ ಬರುತ್ತದೆಂದರು. ವಿಕಲಚೇತನರಿಗೆ& ಹಿರಿಯ ನಾಗರೀಕರಿಗೆ ಕೆಲಸದ ಪ್ರಮಾಣದಲ್ಲಿಶೇ.50%ರಿಯಾಯಿತಿ ನೀಡಿದೆ. ಪ್ರತಿ ಸಾಮುದಾಯಿಕ ಕಾಮಗಾರಿಯಲ್ಲಿ ಶೇ.60ರಷ್ಟು ಮಹಿಳೆಯರು ಕಾಮಗಾರಿ ನಿರ್ವಹಿಸುತ್ತಿದ್ದಲ್ಲಿ ಶೇ.10ರಷ್ಟು ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ನೀಡಿದೆ. ವೈಯಕ್ತಿಕಕಾಮಗಾರಿಗಳಾದ ಜಾನುವಾರ ಶೆಡ್, ಮೆಕೆಶೆಡ್, ಕೃಷಿಹೊಂಡ, ಕೋಳಿಶೆಡ್, ಹಂದಿಶೆಡ್, ಬದು ನಿರ್ಮಾಣ ಕಾಮಗಾರಿ ಅನುಷ್ಠಾನಿಸಲು ಅವಕಾಶ ಇರುತ್ತದೆ. ಜಮೀನು ಸ್ಥಳಾವಕಾಶ ಇಲ್ಲದವರು ಸಾಮೂಹಿಕ ಕಾಮಗಾರಿಯಲ್ಲಿ ಕೂಲಿ ಕೆಲಸ ನಿರ್ವಹಿಸಿ ಯೋಜನೆಯಡಿ ಕೂಲಿ ಹಣವನ್ನು ಪಡೆಯಬಹುದಾಗಿದೆ ಎಂದರು.

ಹಿರೇಬೊಮ್ಮನಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ರವಿ ಕಟ್ಟಿಮನಿ ಮಾತನಾಡಿ ಪ್ರತಿಯೊಬ್ಬರು ನಿರಂತರವಾಗಿ ಜ್ವರ, ಕೆಮ್ಮು, ನೆಗಡಿ ಮತ್ತು ರಕ್ತದೊತ್ತಡ ಉಂಟಾದಲ್ಲಿ ನಿರ್ಲಕ್ಷ್ಯ ವಹಿಸದೇ ಕೂಡಲೇ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಆರೋಗ್ಯತಪಾಸಣೆ ಮಾಡಿಸಿಕೊಳ್ಳಬೇಕೆಂದರು.

ನಂತರವಿಶ್ವಪರಿಸರದಿನಾಚರಣೆಯ ನಿಮಿತ್ಯ ಕೆರೆಯ ಆವರಣದಲ್ಲಿ ಅರಳೆಮರ, ಬೇವು ಸಸಿಗಳನ್ನು ನೆಡಲಾಯಿತು. ಕೆಲಸಕ್ಕೆಹಾಜರಾಗಿದ್ದ ಎಲ್ಲಾ ನರೇಗಾ ಕೂಲಿಕಾರರಿಗೆ ಆರೋಗ್ಯ ಇಲಾಖೆ ಸಿಬ್ಬಂದಿಗಳಿಂದ ಆರೋಗ್ಯ ತಪಾಸಣೆ ಜರುಗಿಸಿ ಬಿಪಿ, ಶುಗರ್ ಮತ್ತು ಸಣ್ಣ ಪುಟ್ಟ ಖಾಯಿಲೆಗಳಾದ ಜ್ವರ, ಕೆಮ್ಮು, ನೆಗಡಿ, ತಲೆನೋವು ಇತ್ಯಾದಿಗಳಿಗೆ ಮಾತ್ರ ನೀಡಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಸದಸ್ಯ ಹನಮೇಶ ಒಬಳೆಪ್ಪನವರ, ಹಿರಿಯ ಆರೋಗ್ಯ ನಿರೀಕ್ಷಕ ವಿಜಯ ವಿಠ್ಠಲ್, ಸಮುದಾಯ ಆರೋಗ್ಯಾಧಿಕಾರಿ ಪ್ರಕಾಶ ಹಂದ್ರಾಳ, ತಾಂತ್ರಿಕ ಸಹಾಯಕ ರಫೀಕಸಾಬ, ಗ್ರಾಮ ಪಂಚಾಯತ ಕಾರ್ಯದರ್ಶಿ ಯಮನೂರಪ್ಪ, ಕರವಸೂಲಿಗಾರ ನಬೀಸಾಬ, ಆಶಾ ಕಾರ್ಯಕರ್ತೆಯರಾದ ಲಲಿತಾ, ಚನ್ನಮ್ಮ ಗುಳೆದ, ಮಲ್ಲಮ್ಮ ತಳವಾರ, ಬೇರ್‌ಪೂಟ್ ಟೆಕ್ನಿಷಿಯನ್ ಮಾರುತಿ, ಡಿಇಒ ಹುಲಗೇಶ ಚೌಡ್ಕಿ, ಕೂಲಿಕಾರರು ಭಾಗವಹಿಸಿದ್ದರು.

# ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಬೇಕು



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂ.7 : ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ತಿಳಿದು ತಮ್ಮ ಕಛೇರಿಯಲ್ಲಿ ಯಾರಾದರು ತಂಬಾಕು ಸೇವನೆ ಮಾಡುತ್ತಿದ್ದರೆ ಅವರ ಎನ್.ಆರ್.ಟಿ. ಚಿಕಿತ್ಸೆ ಮೂಲಕ ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಬೇಕು ಎಂದು ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಧರಣೇಶ ಎಸ್.ಪಿ ಅವರು ಹೇಳಿದರು.

ಯಾದಗಿರಿ ನಗರದಲ್ಲಿ ಇತ್ತೀಚಿನ ನಡೆದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ ವಿಶ್ವ ತಂಬಾಕು ರಹಿತ ದಿನದ ಪ್ರಯುಕ್ತ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಆರೋಗ್ಯ ತಪಾಸಣೆ ಶಿಬಿರ, ತಂಬಾಕು ಕುರಿತು ಅರಿವು ಮೂಡಿಸು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು,

ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ತಿಳಿದು ತಮ್ಮ ಕಛೇರಿಯಲ್ಲಿ ಯಾರಾದರು ತಂಬಾಕು ಸೇವನೆ ಮಾಡುತ್ತಿದ್ದರೆ ಅವರ ಎನ್.ಆರ್.ಟಿ. ಚಿಕಿತ್ಸೆ ಮೂಲಕ ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಲು ತಮ್ಮ ಕಛೇರಿಯನ್ನು ಮುಂದಿನ ದಿನಗಳಲ್ಲಿ ತಂಬಾಕು ಮುಕ್ತ ಕಛೇರಿಯೆಂದು ಘೋಷಿಸಲಾಗುವುದು ಎಂದು ತಿಳಿಸಿದರು.

ಸಂಪನ್ಮೂಲವ್ಯಕ್ತಿಗಳಾದಡಾ.ಸೌಮ್ಯ ಭಾವಿ ಅವರು ಮಾತನಾಡಿ, ತಂಬಾಕು ಸೇವನೆಯಿಂದ ಕ್ಯಾನ್ಸರ್, ಗ್ಯಾಂಗ್ರೀನ್, ಬಿಪಿ, ಸುಗರ್, ಟಿ.ಬಿ. ತಲೆ ಕೂದಲು ಉದುರುವಿಕೆ, ಅವಧಿ ಪೂರ್ವ ಮಗುವಿನ ಜನನ ಮುಂತಾದ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ಹೇಳಿದರು.

ಜಿಲ್ಲಾ ಸಲಹೆಗಾರರಾದ ಶ್ರೀಮತಿ ಮಹಾಲಕ್ಷ್ಮೀ ಸಜ್ಜನ್ ಅವರು ಮಾತನಾಡಿ, ಧ್ಯೇಯ ವಾಕ್ಯ ಆಕರ್ಷಕ ಉತ್ಪನ್ನಗಳು, ಕರಾಳ ಉದ್ದೇಶಗಳು, ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ಆಕರ್ಷಣೆಯನ್ನು ಬಹಿರಂಗ ಪಡಿಸುವುದರ ಕುರಿತು ತಿಳಿಸಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದಡಿಯಲ್ಲಿ ಇರುವ ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ಸಿಗುವ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳಬೇಕೆಂದು ಮತ್ತು ನಿಕೋಟಿನ್ ಮಾತ್ರೆಗಳನ್ನು ಉಚಿತವಾಗಿ ಸಿಗುವ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮುಖ್ಯ ಸಂಪನ್ಮೂಲವ್ಯಕ್ತಿಗಳಾಗಿ ಡಿ.ಎಸ್.ಪಿ. ಭರತ ತಲ್ವಾರ್, ಡಾ.ಸೌಮ್ಯ ಭಾವಿ, ಡಾ.ನಾಗರಾಜ ಗೌಳಿ, ಡಾ.ನಿಕಿತಗೋವಿಂದ, ಯಾದಗಿರಿ ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ, ಸಮಾಜ ಕಾರ್ಯಕರ್ತರಾದ ಶ್ರೀ ವಿಜಯ ಕುಮಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಿಬ್ಬಂದಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಕಾಡು ಬೆಳಸಿ ನಾಡು ಉಳಿಸಿ, ನಾವು ಪರಿಸರ ಉಳಿವಿಗಾಗಿ ಕನಿಷ್ಠ ಒಂದು ಗಿಡ ನೆಡೋಣ : ಮಹೇಶ್ ಬೆದವಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ಬೆಣಕಲ್ ಗ್ರಾಮ ಪಂಚಾಯತಿಯಲ್ಲಿ ಇಂದು ವಿಶ್ವ ಪರಿಸರ ದಿನಾಚರಣೆಯ ಕಾರ್ಯಕ್ರಮವನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಆಯೋಜನೆ ಮಾಡಲಾಗಿತ್ತು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಮಹೇಶ್ ಬೆದವಟ್ಟಿ ರವರು ಮಾತನಾಡಿ ನಾವೆಲ್ಲರು ಬದುಕುಳಿಯಲು ಪರಿಸರ ಅವಶ್ಯಕ, ಪರಿಸರವನ್ನು ನಾಶ ಮಾಡಿದರೆ ಅದು ನಮ್ಮ ನಾಶ, ಅದರಂತೆ ಏಕ ಬಳಕೆ ಪ್ಲಾಸ್ಟಿಕ್ ಅನ್ನು ನಿಶೇಧಿಸಿದ್ದು ಅದನ್ನು ಯಾರು ಬಳಸಬಾರದು ಎಂದರು.

ನಂತರ ಕಾರ್ಯದರ್ಶಿಗಳಾದ ಮಾರುತಿ ಗೊಂಡಬಾಳ ಮಾತನಾಡಿ ಪರಿಸರದಲ್ಲಿ ಗಾಳಿ, ಬೆಳಕು, ನೀರು, ಮಣ್ಣು ಎಷ್ಟು ಮುಖ್ಯವೋ ಮರ ಗಿಡಗಳು ಅಷ್ಟೆ ಮುಖ್ಯ ಅದಕ್ಕಾಗಿ ನಾವು ಗಿಡಗಳನ್ನು ನೆಡುವುದರ ಮೂಲಕ ಪರಿಸರ ಉಳಿಸೋಣ, ಗಿಡ, ಮರಗಳು, ನೀರು ಎಲ್ಲಿ ಇರುತ್ತವೆಯೋ ಅಲ್ಲಿ ಪರಿಸರ ವ್ಯವಸ್ತೆ ಹುಟ್ಟುತ್ತದೆ. ಅದಕ್ಕಾಗಿ ಲಭ್ಯವಿರುವ ಸ್ಥಳಗಳಲ್ಲಿ ಗಿಡ ನೆಡೋಣ, ಮರಗಳನ್ನು ಕಡಿಯುವುದಾದರೆ ಬದಲಿಗೆ 2 ಗಿಡ ನೆಟ್ಟು ಹಳೆ ಮರಗಳನ್ನು ಕಡಿಯಬೇಕು, ವಿದ್ಯಾರ್ಥಿಗಳು ಗಳು ಮುಖ್ಯವಾಗಿ ಮರಗಿಡಗಳ ಬಗ್ಗೆ ಕಾಳಜಿ ವಹಿಸಬೇಕು, ಇಂದು ನೆಟ್ಟ ಒಂದು ಗಿಡ ಮುಂದಿನ ದಿನಗಳಲ್ಲಿ ನೂರಾರು ಜನರಿಗೆ ಆಶ್ರಯದ ತಾಣವಾಗುತ್ತದೆ ಎಂದರು.

ನಂತರ ಪ್ರತಿಯೋಂದು ತರಗತಿಗೆ ಎರಡು ಮರಗಳನ್ನು ಪಾಲನೆ ಪೋಷಣೆ ಮಾಡಲು ದತ್ತು ಕೊಡಲಾಯಿತು.

ಸ್ಥಳದಲ್ಲಿ ಗ್ರಾಮ ಪಂಚಾಯತಿ ಸದಸ್ಯರಾದ ಮಲ್ಲಪ್ಪ ಬಳಗೇರ, ನಿಂಗಪ್ಪ ಹಂಚಿನಾಳ, ತಾ.ಪಂ ಐ.ಇ.ಸಿ ಸಂಯೋಜಕರಾದ ಲಕ್ಷ್ಮಣ ಕೆರಳ್ಳಿ, ಕಂಪ್ಯೂಟರ್ ಅಪರೇಟರ್ ಉಮೇಶ್ ಗೌಡ, ಗ್ರಾಮದ ಮುಖಂಡರಾದ ಜಂಬಣ್ಣ ನಿಡಗುಂದಿ, ಶಿಕ್ಷಕರು, ಶಾಲಾ ಮಕ್ಕಳು ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಗ್ರಾಮಸ್ಥರು ಹಾಜರಿದ್ದರು.

# ಶಿಕ್ಷಣದೊಂದಿಗೆ ಪರಿಸರ ಜಾಗೃತಿ ನಮ್ಮಗುರಿ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಜೂ.7:ಮಕ್ಕಳಿಗೆಅಕ್ಷರ ಕಲಿಸುವ ಜತೆಗೆ ಪರಿಸರಜಾಗೃತಿ ಮೂಡಿಸಬೇಕು ಎಂಬ ಸಂಕಲ್ಪ ನಮ್ಮ ಸಂಸ್ಥೆಯದ್ದಾಗಿದೆ ಎಂದು ಮುಖ್ಯಗುರು ಲಕ್ಷ್ಮಣಕೆ.ಗುಡೂರು ತಿಳಿಸಿದರು.

ತಾಲೂಕಿನಗುಡೂರುಗ್ರಾಮದಲ್ಲಿ ನೂತನವಾಗಿ ಪ್ರಾರಂಭವಾದ ರೇನ್ ಬೋ ಪಬ್ಲಿಕ್ ಶಾಲೆಯಲ್ಲಿ ವಿಶ್ವಪರಿಸರ ದಿನಾಚರಣೆ ನಿಮಿತ್ತ ಗುರುವಾರ ಹಮ್ಮಿಕೊಂಡಿದ್ದ ಸಸಿ ನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ನಮ್ಮ ರೇನ್ ಬೋ ಶಾಲೆಯ ಮಕ್ಕಳಿಗೆ ವಿಶೇಷವಾಗಿ ಪರಿಸರ ಕಾಳಜಿ ಬೆಳೆಸಬೇಕು ಎಂಬ ಗುರಿ ನಮ್ಮದು. ಇದಕ್ಕಾಗಿ ವಿಶಾಲ ಆವರಣವನ್ನು ಒಳಗೊಂಡ ಬಯಲು ಪ್ರದೇಶದಲ್ಲಿ ಕಟ್ಟಡ ನಿರ್ಮಾಣ ಮಾಡಲಾಗಿದೆ. ಇದರ ಸುತ್ತಲೂ ಸುಮಾರು 300ಕ್ಕೂ ಹೆಚ್ಚು ಸಸಿಗಳನ್ನು ನೆಡಲಾಗಿದೆ. ಇದರಿಂದ ಭವಿಷ್ಯದಲ್ಲಿ ಶಾಲಾವರಣ ಹಸಿರಿನಿಂದ ಕಂಗೊಳಿಸಲಿದ್ದು, ಮಕ್ಕಳ ಕಲಿಕೆಗೆ ಅತ್ಯಂತ ಸೂಕ್ತ ಶೈಕ್ಷಣಿಕ ಕೇಂದ್ರವಾಗಲಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಭೂತಾಯಿಗೆ ಪೂಜೆ ಸಲ್ಲಿಸಿದ ರೇನ್ ಬೋ ಶಾಲೆಯ ಪುಟಾಣಿ ಮಕ್ಕಳು ಸಸಿಗಳಿಗೆ ನೀರೆರೆಯುವ ಮೂಲಕ ಪರಿಸರ ದಿನಾಚರಣೆ ಮಾಡಿದರು.

ಈ ವೇಳೆ ಸಂಸ್ಥೆಯ ಅಧ್ಯಕ್ಷ ಕಾಮಣ್ಣ ಕಾಮಣ್ಣೋರ, ಶಿಕ್ಷಕರಾದ ನಾಗಪ್ಪ, ಶಿವಲಿಂಗಮ್ಮ, ಅರುಣಿಮಾ, ಶ್ವೇತಾ, ಶ್ರೀಮಾ ಸೇರಿದಂತೆ ಗ್ರಾಮದ ಮುಖಂಡರಾದ ರಾಜು ಕಾಮಣ್ಣೋರ, ಮಲ್ಲು ಪೂಜಾರಿ, ಪಿಡ್ಡಪ್ಪ ಪೂಜಾರಿ, ಶಿವರಾಜ ಗಣಪುರ, ಶಬ್ಬೀರ್, ಮಹ್ಮದ ಪಟೇಲ್, ಹಣಮಂತ ಸಂಗವಾರ, ಶಮೀರ ಪಟೇಲ್ ಹಾಗೂ ಶಾಲಾ ಮಕ್ಕಳು ಇದ್ದರು.

# ತ್ಯಾಗ ಬಲಿದಾನದ ಪ್ರತೀಕ ಈದ್ ಮಿಲಾದ ಹಬ್ಬ– ಅನ್ವರ ಹುಸೇನ ಗಡಾದ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲ್ಲೂಕಿನ ಅಳವಂಡಿ ಗ್ರಾಮದಲ್ಲಿ ಈದ್ ಮಿದ್ ಬಕ್ರೀದ್ ಹಬ್ಬದ ಪ್ರಯುಕ್ತ ಈದ್ಗಾ ಮೈದಾನ ಆವರಣದಲ್ಲಿ ಸಾಮೂಹಿಕ ಪ್ರಾರ್ಥನೆಯನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಮುಸ್ಲಿಂ ಬಂಧುಗಳು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು ಶುಭಹಾರೈಸಿದರು.

ನಾಡಿನ ಸಮಸ್ತ ಮುಸ್ಲಿಂ ಬಾಂಧವರಿಗೆ ಬಕ್ರೀದ್ ಹಬ್ಬದ ಹಾರ್ದಿಕ ಶುಭಾಶಯಗಳು.

ತ್ಯಾಗ ಮತ್ತು ಬಲಿದಾನದ ಮಹತ್ವವನ್ನು ಸಾರುವ ಬಕ್ರೀದ್ ಎಲ್ಲರ ಬಾಳಿನಲ್ಲಿ ನೆಮ್ಮದಿ ಮತ್ತು ಸಂತೋಷವನ್ನು ತರಲಿ ಎಂದು ಶುಭ ಕೋರುತ್ತಾ ಬಕ್ರೀದ್ ಹಬ್ಬವನ್ನು ಆಚರಿಸಿದರು. ಈ ಸಂದರ್ಭದಲ್ಲಿ ಸಸಿ ಹಚ್ಚುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು, ಪರಿಸರ ದಿನಾಚರಣೆಯ ನೆನಪಿಗಾಗಿ ಸಸಿನೆಡಲಾಯಿತು. ಬಕ್ರೀದ್ ಹಬ್ಬದ ಆಚರಣೆಯು ನಾಡಿನಲ್ಲಿ ಸಹೋದರತ್ವ ಸಾಮರಸ್ಯ ಸೌಹರ್ದತೆಯನ್ನು ಮತ್ತಷ್ಟು ಬಲಪಡಿಸುತ್ತದೆ.

ಕಾರ್ಯಕ್ರಮದಲ್ಲಿ ಅಳವಂಡಿ ಅಂಜುಮನ್ ಕಮಿಟಿ ಅಧ್ಯಕ್ಷರಾದ ಅನ್ವರ್ ಹುಸೇನ್ ಗಡಾದ, ಮುಸ್ತಫಾ ಗಡಾದ್, ಅಹಮದ್ ಸಾಬ್, ಇಸ್ಮಾಯಿಲ್ ನಜರುದ್ದೀನ್ ಬಿಸರಳ್ಳಿ,, ಮೆಹಬೂಬ್ ಹುಸೇನ್ ಮುಲ್ಲಾ, ರಜಾಕಸಾಬ್ ಮತದ, ಮಕ್ಸು ಗಡಾದ್, ಹುಸೇನ್ ಟೇಲರ್ ಮಾಬುಸಾಬ್ ಎಣ್ಣಿ, ಹುಸೇನ್ ಸಾಬ್ ಕವಲೂರು, ಮೈಬು ಹುಸೇನ್, ನಜರುದ್ದೀನ್ ತಟಗಾರ್, ಜಿಲಾನಸಾಬ್, ಇಮಾಮ್ ಸಾಬ್ ತೋಪಿಪ್, ಕರಿಮ್ ಸಾಬ್, ಮಮ್ಮದ್ ಸಾಬ್, ನದಿರುದ್ದೀನ್ ಹಿರೇಮಸೂತಿ, ಅಲ್ತಾಫ್, ಸಾಧಿಕ್, ಪಕೀರ ಹುಸೇನ್ ಸಾಬ್ ನದಾಫ್, ಖಾಜಾ ಸಾಬ್, ಬಾಬುಸಾಬ್ ಖಾದರ್ ಭಾಷಾ, ಅಸೀಫ್ ಬಾಸುಸಾಬ್ ಅಮಿನ್ ಸಾಬ್ ಜಾಫರ್ ಹುಸೇನ್ ಇಮಾಸಾಬ್ ಮಠದ ಇರ್ಫಾನ್ ಮತ್ತಿತರರು ಸಾಮೂಹಿಕ ಪ್ರಾರ್ಥನೆಗೈದರು.

# ಹೆಚ್ಚಿನ ಶಾಲಾ ಶುಲ್ಕ ಕಡಿವಾಣಕ್ಕೆ ಅಗ್ರಹ : ಎಂ ಎನ್ ಕುಕನೂರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಇತ್ತೀಚಿನ ದಿನಗಳಲ್ಲಿ ಶಾಲಾ ಶುಲ್ಕಗಳು ವಿಪರೀತವಾಗಿ ಏರಿಕೆಯಾಗಿದ್ದು ಮಧ್ಯಮ ವರ್ಗದ ಹಾಗೂ ಬಡ ಪಾಲಕರ ಸ್ಥಿತಿ ಹೇಳುತ್ತೀರದ್ದಾಗಿದೆ ಹಾಗೂ ಇದಕ್ಕೆ ಸರ್ಕಾರದಿಂದ ಕಡಿವಾಣ ಹಾಕುವ ಯಾವುದೇ ಪ್ರಯತ್ನ ಸಹ ಕಾಣುತ್ತಿಲ್ಲ ಎಂದು ರಾಷ್ಟ್ರೀಯ ಕ್ರಾಂತಿಕಾರಿ ಕಿಸಾನ್ ಸೇನಾ ರಾಷ್ಟ್ರೀಯ ಅಧ್ಯಕ್ಷ ಎಂ ಎನ್ ಕುಕನೂರು ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಕ್ರಾಂತಿಕಾರಿ ಕಿಸಾನ್ ಸೇನೆ ರಾಷ್ಟ್ರ ಅಧ್ಯಕ್ಷ ಎಂ ಎನ್ ಕುಕನೂರು ಮಾತನಾಡುತ್ತಾ ಶಿಕ್ಷಣವೆಂಬುದು ಇತ್ತೀಚಿನ ದಿನಗಳಲ್ಲಿ ಪಕ್ಕ ವ್ಯಾಪಾರಿಕರಣವಾಗುತ್ತಿದ್ದು ಇದಕ್ಕೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವ ಅವಶ್ಯಕತೆ ಇದೆ ಇಲ್ಲವಾದಲ್ಲಿ ದೇಶದ ಅತ್ಯಮೂಲ್ಯ ಸಂಪತ್ತಾದ ಇಂದಿನ ಮಕ್ಕಳು ಶಿಕ್ಷಣದಿಂದ ವಂಚಿತರಾಗುವ ಎಲ್ಲಾ ಸಾಧ್ಯತೆಗಳಿದ್ದು ಸರ್ಕಾರ ಮಕ್ಕಳ ಶಿಕ್ಷಣದ ವಿಷಯದ ಬಗ್ಗೆ ಗಂಭೀರ ಚಿಂತನೆ ನಡೆಸಿ ಸೂಕ್ತ ತೀರ್ಮಾನಕ್ಕೆಗೊಳ್ಳಬೇಕಾಗಿದೆಎಂದು ಸರ್ಕಾರವನ್ನು ಒತ್ತಾಯಿಸಿದರು.

ಮಕ್ಕಳಿಗೆ ಉತ್ತಮವಾದ ಶಿಕ್ಷಣ ಕೊಡಿಸುವುದು ಪ್ರತಿಯೊಬ್ಬ ಪಾಲಕರ ಕನಸಾಗಿದ್ದು ಇದಕ್ಕೆ ಶ್ರೀಮಂತ ಹಾಗೂ ಬಡವ ಎಂಬ ಗಡಿರೇಖೆ ಇರುವುದಿಲ್ಲ. ಆದರೆ ಇತ್ತೀಚಿನ ದಿನಗಳಲ್ಲಿ ಶಾಲಾ ಶುಲ್ಕಗಳನ್ನು ನೋಡಿದರೆ ಇದು ಕೇವಲ ಶ್ರೀಮಂತರ ಕೈಗೆ ಮಾತ್ರ ಎಟುಕುವ ಸೌಲಭ್ಯ ಎಂಬಂತಾಗಿದ್ದು ಮಧ್ಯಮ ವರ್ಗ ಹಾಗೂ ಬಡ ಕುಟುಂಬದವರು ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸಾಕಷ್ಟು ಕಡೆಗಳಲ್ಲಿ ಸಾಮಾನ್ಯವಾಗಿ ಕಾಣಿಸಿತ್ತವೆ.

ಸರ್ಕಾರವೇನು ತಮ್ಮ ಸರ್ಕಾರಿ ಸ್ವಾಧೀನದ ಶಾಲೆಗಳಲ್ಲಿ ಎಲ್ಲಾ ಉಚಿತವಾಗಿ ನೀಡುತ್ತಾ ಶಿಕ್ಷಣವನ್ನು ಸಹ ಉಚಿತವಾಗಿ ನೀಡುತ್ತಿದ್ದೇವೆ ಎಂದು ವಿಪರೀತ ಪ್ರಚಾರ ಗಿಟ್ಟಿಸಿಕೊಳ್ಳುತ್ತಿದ್ದು ಆ ಶಾಲೆಗಳಲ್ಲಿ ಶಿಕ್ಷಣ ಗುಣಮಟ್ಟ ಎಷ್ಟರಮಟ್ಟಿಗೆ ಉತ್ತಮವಾಗಿದೆ ಎಂಬುದರ ಬಗ್ಗೆ ಪರಿಶೀಲನೆ ಮಾಡುವ ಗೋಜಿಗೆ ಹೋಗಿರುವುದು ಗೊತ್ತೇ ಇಲ್ಲ. ಇದರ ಜೊತೆಗೆ ಕಳೆದ ಬಾರಿ ಕೊಪ್ಪಳ ಜಿಲ್ಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಜಿಲ್ಲೆಯ ಸರ್ಕಾರಿ ಪ್ರೌಢ ಶಾಲೆಯ ಸುಮಾರು 60% ಮಕ್ಕಳಿಗೆ ಸಾಮಾನ್ಯ ಅಕ್ಷರ ಜ್ಞಾನ ಸಹ ಇಲ್ಲ ಎಂದು ಹೇಳಿಕೆ ನೀಡಿರುವುದನ್ನು ಇಲ್ಲಿ ಸ್ಮರಣೆ ಮಾಡಬಹುದಾಗಿದ್ದು ಇನ್ನಾದರೂ ಉನ್ನತವಾದ ಶಿಕ್ಷಣವನ್ನು ನೀಡುತ್ತೇವೆ ಎಂದು ಹೇಳಿಕೊಳ್ಳುತ್ತಿರುವ ಸರ್ಕಾರಿ ಶಿಕ್ಷಣ ಇಲಾಖೆ ತಮ್ಮ ಶಾಲೆಗಳಲ್ಲಿರುವ ಅತ್ಯುತ್ತಮ ಪದವಿ ಹೊಂದಿರುವ ಶಿಕ್ಷಕರಿಂದ ಉತ್ತಮ ಶಿಕ್ಷಣ ಕೊಡಿಸುವುದರೊಂದಿಗೆ ಖಾಸಗಿ ಶಾಲೆಗಳ ಶಾಲಾ ಶುಲ್ಕಕ್ಕೆ ಕಡಿವಾಣ ಹಾಕಬೇಕೆಂದು ಸರ್ಕಾರವನ್ನು ಒತ್ತಾಯಿಸಿದಾಗಿ ಜೊತೆಗೆ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದಿದ್ದ ಪಕ್ಷದಲ್ಲಿ ಮುಂದೊಂದು ದಿನ ಉಗ್ರ ಹೋರಾಟಕ್ಕೂ ಹಿಂಜರಿಯುವುದಿಲ್ಲ ಎಂದು ಸರ್ಕಾರವನ್ನು ಎಚ್ಚರಿಸಿದರು.

ಈ ವೇಳೆಯಲ್ಲಿ ಯಶೋದಾ ಸಿ ರಾಜ್ಯ ಉಪಾಧ್ಯಕ್ಷರು ಮಹಿಳಾ ಘಟಕ, ಮಂಜುಳಾ ರಾಮೇಗೌಡ ಮೈಸೂರು ಜಿಲ್ಲಾ ಉಪಾಧ್ಯಕ್ಷರು, ಪಿಡ್ಡನಗೌಡ ಮಾಲಿ ಪಾಟೀಲ್ ಕೊಪ್ಪಳ ಜಿಲ್ಲಾ ಕಾರ್ಯಧ್ಯಕ್ಷರು, ಬಸವರಾಜ ಅಡವಿ, ರಾಜೇಶ್ ಸಣ್ಣಕ್ಕಿ, ಮಾಜಿದ್ ಖಾನ್ ಮುಲ್ಲಾ, ಮೆಹಬೂಬ್ ಮಾಳೆಕೊಪ್ಪ, ಹನುಮೇಶ್, ಹೊನ್ನಪ್ಪ, ಬಶೀರ್ ಅಹಮದ್ ಖಾನ್ ಮುಲ್ಲಾ, ವೆಂಕಟೇಶ್ ಇಳಿಗೆರ್, ಬರ್ಮಣ್ಣ, ಅಂಬರೀಶ್, ಮತ್ತು ಇತರರು ಪಾಲ್ಗೊಂಡಿದ್ದರು.

### ಜೈನ್ ಶ್ವೇತಂಬರ್ ಮಂದಿರದ ಶತಮಾನೋತ್ಸವಪಾರ್ಶ್ವನಾಥ

## ಪರಮಾತ್ಮನ ಶೋಭಾ ಯಾತ್ರೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ ಜೂ. 6 : ಶ್ರೀ ಪಾರ್ಶ್ವನಾಥ ಜೈನ್ ಶ್ವೇತಂಬರ್ ಮಂದಿರದ ಶತಮಾನೋತ್ಸವದ ಅಂಗವಾಗಿ ಪಾರ್ಶ್ವನಾಥ ಪರಮಾತ್ಮನ ಶೋಭಾ ಯಾತ್ರೆಯನ್ನು ದೇವಸ್ಥಾನದ ಉತ್ಸವ ಸಮಿತಿಯಿಂದ ಇಂದು ನಡೆಸಲಾಯಿತು.

ತೇರು ಬೀದಿಯ ಶ್ವೇತಾಂಬರ ಜೈನ್ ದೇವಸ್ಥಾನದಿಂದ ಡೊಳ್ಳು ತಾಸಿ,ತಾಷಾರಾಮ್ದುರ್ ಸೇರಿದಂತೆ ವಿವಿಧ ಕಲಾತಂಡಗಳೊಂದಿಗೆ ಆರಂಭಗೊಂಡ ಮೆರವಣಿಗೆ, ತೇರು ಬೀದಿ ಮೋತಿ ಸರ್ಕಲ್, ಕಾಳಮ್ಮ ಸರ್ಕಲ್ ಬೆಂಗಳೂರು ರಸ್ತೆ ಬೂಸ್ಟೇಟ್ ಸರ್ಕಲ್ ಮಾರ್ಗವಾಗಿ ಮತ್ತೆ ದೇವಸ್ಥಾನವನ್ನು ತಲುಪಿತು.

ಶ್ರೀ ವಿಮಲಸಾಗರ ಸುರೀಶ್ವರ್'ಜೀ ಮಹಾರಾಜ್ ಉದ್ಘಾಟನೆ ಮಾಡಿದ ನಂತರ ಮಧ್ಯಾಹ್ನ ದೇವಸ್ಥಾನದಲ್ಲಿ ಪ್ರವಚನ ಭಕ್ತಾದಿಗಳಿಗೆ ಆಶೀರ್ವಾದ ಮಹಾಮಂಗಳಾರತಿ ಅನ್ನ ಪ್ರಸಾದ ವಿತರಣೆ ಪಾಲಕ್ ಸೇವಾ ಧಾರ್ಮಿಕ ಪೂಜೆಗಳು ನಡೆಸಿಕೊಟ್ಟರು.

ಮೆರವಣಿಗೆಯಲ್ಲಿ ಶ್ರೀ ಪಾರ್ಶ್ವನಾಥ ಜೈನ್ ಶ್ವೇತಾಂಬರ್ ಸಂಘದ ಅಧ್ಯಕ್ಷ ಉತ್ಸವಲಾಲ್ ಬಾಗ್ರೇಚಾ, ಉಪಾಧ್ಯಕ್ಷ ಸೂರಜ್ ಮಲ್ ದಾಂತೆವಾಡಿ, ಪ್ರಧಾನ ಕಾರ್ಯದರ್ಶಿ ರೋಷನ್ ಜೈನ್ , ಸಹ ಕಾರ್ಯದರ್ಶಿ ಅನಿಲ್ ಬಾಗ್ರೇಚಾ,ಜಾಯಿಂಟ್ ಕಾರ್ಯದರ್ಶಿ ಭರತ್ ಲುಮ್ಮುಕಾಡು, ಟ್ರೇಸರ್ರಿ ಗೌತಮ್ ಬುಜ್ವಾನ್, ವಿನೋದ್ ಬಾಗ್ರೇಚಾ, ಮಹಾವೀರ್, ಹರ್ಷ್ ಜೈನ್ , ಅಜಯ್ ಸೋನಿ ದೇವಸ್ಥಾನದ ಪದಾಧಿಕಾರಿಗಳು ಸೇರಿದಂತೆ ಜೈನ ಸಮುದಾಯದ ಜನತೆ ಭಾಗವಹಿಸಿದ್ದರು.

## ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಜೂನ್7-ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಹಾಗೂ ಈ ಯೋಜನೆಗಳಡಿ ಸಹಾಯಧನ, ಸಾಲ-ಸೌಲಭ್ಯ ಪಡೆಯಲು ಇಚ್ಛಿಸುವವರು ಕಡ್ಡಾಯ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 02.07.2025 ಇದೆ. ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆ ದಿನಾಂಕ ಇರುವುದಿಲ್ಲ.

ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಅರಿವು-ಶೈಕ್ಷಣಿಕ ನೇರಸಾಲ ಯೋಜನೆ(ಹೊಸದು), ಗಂಗಾ ಕಲ್ಯಾಣ ಯೋಜನೆ (ಈ ಯೋಜನೆಯಲ್ಲಿ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು ಇತರೇ ಜಿಲ್ಲೆಗಳಲ್ಲಿ ಕನಿಷ್ಠ 2 ಎಕರೆ ಹೊಂದಿರಬೇಕು), ಸ್ವ-ಯಂ ಉದ್ಯೋಗ ನೇರಸಾಲ (ಬ್ಯಾಂಕ್‌ಗಳ ಸಹಯೋಗದೊಂದಿಗೆ), ಸ್ವಾವಲಂಬಿ ಸಾರಥಿ ಯೋಜನೆ, ವಿದೇಶಿ ವ್ಯಾಸಂಗ ಯೋಜನೆ-ಈ ಯೋಜನೆಯಡಿ ವಾರ್ಷಿಕ ವರಮಾನವು ರೂ.15.00 ಲಕ್ಷಗಳ ಮಿತಿಯಲ್ಲಿರಬೇಕು.

ಅರ್ಜಿ ಸಲ್ಲಿಸಲು ಇರಬೇಕಾದ ಸಾಮಾನ್ಯ ಅರ್ಹತೆಗಳು: ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು., ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಸರ್ಕಾರದ ಆದೇಶ ಸಂಖ್ಯೆ:ಹಿಂವಕ/155/ಬಿಸಿಎ/2020, ದಿನಾಂಕ:28/09/2020ರನ್ವಯ ಕಾಡುಗೊಲ್ಲ ಜಾತಿಗೆ ಸೇರಿರಬೇಕು., ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ., ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು., ನಿಗಮದ/ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು., ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು., ಅರಿವು ಯೋಜನೆಯಡಿ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು. ವಾರ್ಷಿಕ ವರಮಾನ ರೂ.3.50 ಲಕ್ಷಗಳು., ಸ್ವಾವಲಂಬಿ ಸಾರಥಿ ಯೋಜನೆಯಡಿ ಅರ್ಜಿದಾರರು 21 ವರ್ಷ ಮೇಲ್ಪಟ್ಟು 45 ವರ್ಷದ ಮಿತಿಯಲ್ಲಿರಬೇಕು., ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು., ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ. 98,000 ಮತ್ತು ನಗರ ಪ್ರದೇಶದವರಿಗೆ ರೂ.1,20,000ಗಳ ಮಿತಿಯೊಳಗಿರಬೇಕು., ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1 ಮೀಸಲಾತಿ ಇರಿಸಿದೆ.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಕಡ್ಡಾಯವಾಗಿ ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು/ವಿಳಾಸ/ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಪಾಸ್ ಪುಸ್ತಕಗಳಲ್ಲಿ ತಾಳೆಯಾಗಬೇಕು (ಶ್ರೀ /ಶ್ರೀಮತಿ /ಕುಮಾರಿ ಮುಂತಾದ ಮಾಹಿತಿಗಳು) ಬೆಂಗಳೂರು-ಒನ್/ಕರ್ನಾಟಕ-ಒನ್/ಅಟಲ್-ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿ ಸಲ್ಲಿಸಲು ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ನಿಗಮದ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ 080-22374848/7899899039ಯಿಂದ ಪಡೆಯಬಹುದಾಗಿದೆ. ಹಾಗೂ ಜಿಲ್ಲೆಗಳಲ್ಲಿ ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಂ: 1-1-158, ಉದಯನಗರ, ಕರ್ನಾಟಕ ಗ್ರಾಮೀಣ ಬ್ಯಾಂಕ ಹಿಂಭಾಗ, ಉಮಾ ಹೋಟೆಲ್ ಹತ್ತಿರ, ಸ್ಟೇಶನ ರೋಡ್, ರಾಯಚೂರು (ದೂರವಾಣಿ ಸಂ: 08532-250440) ಪೂರ್ವಾಹ್ನ 10.00ರಿಂದ ಸಂಜೆ 5.30 ರವರೆಗೆ ಸಂಪರ್ಕಿಸಬಹುದಾಗಿದೆ.

ವಿಶೇಷ ಸೂಚನೆ: 2023-24 ಹಾಗೂ 2024-25ನೇ ಸಾಲಿನಲ್ಲಿ ಯೋಜನೆಗೆ ಅರ್ಜಿ ಸಲ್ಲಿಸಿರುವ ಅರ್ಜಿದಾರರು ಮತ್ತೊಮ್ಮೆ ಬೇರೆ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಸೇವಾಸಿಂಧು ತಂತ್ರಾಂಶದ ಮೂಲಕ ಅರ್ಜಿಗಳನ್ನು ಸಲ್ಲಿಸಬೇಕು. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ ಎಂದು ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮ ನಿಯಮಿತದ ಪ್ರಕಟಣೆ ತಿಳಿಸಿದೆ.

## ಐಟಿಐ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 6- ನಗರದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಿಂದ ಸರ್ಕಾರಿ ಐಟಿಐ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಆಫ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಅರ್ಜಿಯನ್ನು ಹತ್ತಿರದ ಯಾವುದೇ ಸರ್ಕಾರಿ/ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಮೂಲಕ ಸ್ವೀಕೃತಿ ಪಡೆದು, ಅರ್ಜಿಗಳನ್ನು ಮೆರಿಟ್ ಆಧಾರದಲ್ಲಿ ಭರ್ತಿ ಪ್ರವೇಶಾತಿ ಪಡೆಯಬಹುದು.

10ನೇ ಮತ್ತು 8ನೇ ತರಗತಿಯಲ್ಲಿ ಉತ್ತೀರ್ಣರಾದ ಆಸಕ್ತಿಯುಳ್ಳ ಅಭ್ಯರ್ಥಿಗಳು ಅರ್ಜಿಯನ್ನು ನೇರವಾಗಿ ಆಫ್ಲೈನ್ ಮೂಲಕ ಆಗಸ್ಟ್31ರೊಳಗೆ ಸಲ್ಲಿಸಬಹುದು.

### ಪೂರ್ವಭಾವಿ ಸಭೆಯಲ್ಲಿ ಎಡಿಸಿ ಮಹಮ್ಮದ್ ಝುಬೇರ್ ನಿರ್ದೇಶನ

## ಜೂ.12 ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ; ಅಗತ್ಯ ಸಿದ್ಧತೆ ಕೈಗೊಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.06-ಜಿಲ್ಲೆಯಲ್ಲಿ ಜೂನ್ 12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಲು ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿಯ ವಿರೋಧಿ ದಿನಾಚರಣೆ ಕಾರ್ಯಕ್ರಮ ಆಯೋಜನೆ ಕುರಿತಂತೆ ಶುಕ್ರವಾರ ಏರ್ಪಡಿಸಿದ್ದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ಅವರು ಮಾತನಾಡಿದರು.

ಜೂ.12ರಂದು ಜಿಲ್ಲಾ ಕೇಂದ್ರ ಸೇರಿದಂತೆ ಎಲ್ಲಾ ತಾಲೂಕುಗಳಲ್ಲಿ ಸಹ ವಿಶ್ವ ಬಾಲ ಕಾರ್ಮಿಕ ಪದ್ಧತಿಯ ವಿರೋಧಿ ದಿನವನ್ನು ಆಚರಣೆ ಮಾಡಬೇಕು. ಈ ಬಗ್ಗೆ ಆಯಾ ತಹಸೀಲ್ದಾರರು ಆಯಾ ತಾಲೂಕುಗಳಲ್ಲಿ ಸಿದ್ಧತೆ ಕೈಗೊಳ್ಳುವಂತೆ ಸೂಚಿಸಬೇಕು ಎಂದರು.

ಜಿಲ್ಲೆಯ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಸೇರಿದಂತೆ ಎಲ್ಲಾ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿನ ಕಸ ವಿಲೇವಾರಿ ವಾಹನಗಳಲ್ಲಿ ಉಚಿತವಾಗಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ವಿರೋಧಿ ಪದ್ಧತಿ ಕುರಿತು ಜಿಂಗಲ್ಸ್ ಪ್ರಸಾರಕ್ಕೆ ಕ್ರಮ ವಹಿಸಬೇಕು ಎಂದು ಸೂಚಿಸಿದರು.

ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯಂದು ಪ್ರತಿಜ್ಞಾ ವಿಧಿ ಸ್ವೀಕರಿಸಲು ಎಲ್ಲ ಇಲಾಖೆಗಳಿಗೆ ಸುತ್ತೋಲೆ ಹೊರಡಿಸಿ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾಧಿಕಾರಿ ಎ.ಮೌನೇಶ್ ಅವರು ಮಾತನಾಡಿ, ಜಿಲ್ಲಾ ಕೇಂದ್ರದಲ್ಲಿ ಜೂ.12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಕಾರ್ಯಕ್ರಮವನ್ನು ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಅಂದು ಜಾಗೃತಿ ಜಾಥಾವೂ ನಡೆಯಲಿದೆ. ಈ ವೇಳೆ ಆಟೋ ಮೈಕಿಂಗ್ ಮೂಲಕ ಘೋಷಣೆಗಳೊಂದಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬಾಲಕಾರ್ಮಿಕ ಅನಿಷ್ಟಪದ್ಧತಿಯನ್ನು ಹೋಗಲಾಡಿಸಲು ಜಾಗೃತಿ ಮೂಡಿಸಲಾಗುವುದು.

ಕಾರ್ಯಕ್ರಮಕ್ಕೆ ಆಗಮಿಸಿದ ಮಕ್ಕಳಿಗೆ ಲಘು-ಉಪಹಾರ ಮತ್ತು ಹಾಲು ವಿತರಿಸುವ ಸಂಬಂಧ ಕೆಎಂಎಫ್‌ಗೆ ಪತ್ರ ಬರೆಯಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕತೆಯಿಂದ ಬಿಡುಗಡೆಗೊಂಡು ಶಾಲಾ ಮುಖ್ಯವಾಹಿನಿಗೆ ಸೇರಿಸಿರುವ ಮಕ್ಕಳು ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲು ಸಭೆಯಲ್ಲಿ ನಿರ್ಣಯಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ಧಪ್ಪ ಖೈನೂರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

### ಬಳ್ಳಾರಿ ಜಿಲ್ಲೆಯಲ್ಲಿ ಹೆಲ್ಮೆಟ್ ಬಳಕೆ ಕಡ್ಡಾಯ; ವಿನಾಯಿತಿ ಇಲ್ಲ

## ಜೀವ ಮತ್ತು ಜೀವನಕ್ಕಾಗಿ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ: ಎಸ್ಪಿ ಡಾ.ಶೋಭಾರಾಣಿ ವಿ.ಜೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.06-ಜೀವ ಮತ್ತು ಜೀವನ ಅಮೂಲ್ಯವಾದುದು. ಹಾಗಾಗಿ ಪ್ರತಿಯೊಬ್ಬ ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಹೇಳಿದರು.

ನಗರದ ಕನಕದುರ್ಗಮ್ಮ ದೇವಸ್ಥಾನ ವೃತ್ತದಲ್ಲಿ ಎಸ್ಪಿ ಶುಕ್ರವಾರ ಆಯೋಜಿಸಲಾಗಿದ್ದ ಸಾರ್ವಜನಿಕರ ಸುರಕ್ಷತೆಗಾಗಿ ಹೆಲ್ಮೆಟ್ ಜಾಗೃತಿ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಹೆಲ್ಮೆಟ್ ಮತ್ತು ಗುಲಾಬಿ ಹೂ ವಿತರಿಸಿ ಅವರು ಮಾತನಾಡಿದರು.

ಅಪಘಾತಗಳ ಪೈಕಿ ದ್ವಿಚಕ್ರ ವಾಹನಗಳ ಅಪಘಾತವೇ ಹೆಚ್ಚು. ಅದರಲ್ಲಿ ಹೆಲ್ಮೆಟ್ ಧರಿಸದೆ ಸಾವನಪ್ಪಿರುವರ ಸಂಖ್ಯೆ ಹೇರಳವಾಗಿದೆ. ಆ ವೇಳೆ ತಲೆಗೆ ಪೆಟ್ಟಾಗಿ ಸಾವನ್ನಪ್ಪಿರುವವರು ಹೆಚ್ಚಾಗಿದ್ದಾರೆ. ಇದಕ್ಕೆ ಹೆಲ್ಮೆಟ್ ಧರಿಸದಿರುವುದೇ ಮುಖ್ಯ ಕಾರಣ. ಹಾಗಾಗಿ ನಿಮ್ಮ ಮನೆಯವರು ಹಾಗೂ ನಿಮ್ಮನ್ನು ನಂಬಿದವರಿಗಾಗಿ ಹೆಲ್ಮೆಟ್ ಅನ್ನು ಕಡ್ಡಾಯವಾಗಿ ಧರಿಸಲೇಬೇಕು ಎಂದು ಹೇಳಿದರು.

ವಾಹನ ಚಲಾಯಿಸುವಾಗ ಹೆಲ್ಮೆಟ್ ಧರಿಸುವುದರಿಂದ ಸಂಭವನೀಯ ಅಪಘಾತಗಳಿಂದ ತಲೆಗೆ ಪೆಟ್ಟಾಗುವುವುದು ತಪ್ಪುತ್ತದೆ. ಪೊಲೀಸರು ನೀಡುವ ಸೂಚನೆಗಳನ್ನು ಅಗತ್ಯವಾಗಿ ಪಾಲಿಸಬೇಕು. ಹೆಲ್ಮೆಟ್ ಧರಿಸದೆ ವಾಹನ ಚಲಾಯಿಸಿದರೆ ಸ್ಥಳದಲ್ಲಿಯೇ ರೂ.500 ದಂಡ ತೆರಬೇಕಾಗುತ್ತದೆ. 18 ವರ್ಷದ ಒಳಗಿನವರು ವಾಹನ ಚಲಾಯಿಸುವುದು ಕೂಡ ಅಪರಾಧ. ಹಾಗಾಗಿ ಕಡ್ಡಾಯವಾಗಿ ಸಂಚಾರ ನಿಯಮ ಪಾಲನೆ ಮಾಡಬೇಕು ಎಂದರು.

**ಸುರಕ್ಷತೆಗಾಗಿ ಹೆಲ್ಮೆಟ್ ಧರಿಸೋಣ:**

ದ್ವಿಚಕ್ರ ವಾಹನ ಚಲಾಯಿಸುವ ಪ್ರತಿಯೊಬ್ಬರೂ ಹೆಲ್ಮೆಟ್ ಬಳಸುವ ರೂಢಿಯಾಗಬೇಕೆಂದರೆ ಅಧಿಕಾರಿಗಳು ಸೇರಿದಂತೆ ನಾವೆಲ್ಲರೂ ನಮ್ಮ ಸುರಕ್ಷತೆಗಾಗಿ ಹೆಲ್ಮೆಟ್ ಧರಿಸೋಣ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಮಾಧ್ಯಮ ಪ್ರತಿ ನಿಧಿಗಳ ಸಂವಾದದಲ್ಲಿ ಹೇಳಿದರು.

ಜಿಲ್ಲೆಯಲ್ಲಿ ಅತಿಯಾಗ ವೇಗದಿಂದ ವಾಹನ ಚಾಲನೆ, ಮದ್ಯ ಸೇವಿಸಿ-ವಾಹನ ಚಾಲನೆ ಮತ್ತು ಸಂಚಾರ ನಿಯಮ ಉಲ್ಲಂಘನೆಯಿಂದ ಅಪಘಾತ ಮತ್ತು ಸಾವು ಸಂಭವಿಸುತ್ತಿವೆ. ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಇಂದಿನಿಂದಲೇ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ವಾಹನ ಚಲಾಯಿಸಬೇಕು ಹಾಗೂ ಹಿಂಬದಿಯ ಸವಾರರು ಸಹ ತಪ್ಪದೇ ಹೆಲ್ಮೆಟ್ ಧರಿಸಬೇಕು ಎಂದು ತಿಳಿಸಿದರು.

ಹೆಲ್ಮೆಟ್ ಧರಿಸುವ ಕುರಿತು ನಮ್ಮಿಂದಲೇ ಪ್ರಾರಂಭಿಸಿದರೆ ಸಾರ್ವಜನಿಕರು ಸಹ ದ್ವಿ-ಚಕ್ರ ಸಂಚಾರದಲ್ಲಿ ಸುರಕ್ಷತೆ-ಗಾಗಿ ಹೆಲ್ಮೆಟ್ ಬಳಕೆ ಕುರಿತು ಸಂದೇಶ ರವಾನಿಸಿದಂತಾಗುತ್ತದೆ. ಹಾಗಾಗಿ ಎಲ್ಲರೂ ತಪ್ಪದೇ ಹೆಲ್ಮೆಟ್ ಬಳಸೋಣ ಎಂದರು.

ಜಿಲ್ಲೆಯಲ್ಲಿ ವಾಹನ ಸವಾರರು ಕಡ್ಡಾಯ ಹೆಲ್ಮೆಟ್ ಧರಿಸುವಿಕೆಯ ಕುರಿತು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದು. ಹೆಲ್ಮೆಟ್ ಧರಿಸದೇ ಇದ್ದಲ್ಲಿ ದಂಡಕ್ಕೆ ಆಹ್ವಾನಿಸದಂತೆ, ಇದಕ್ಕೆ ಯಾವುದೇ ವಿನಾಯಿತಿ ಇಲ್ಲ. ಪೊಲೀಸರ ಭಯದ ಕಾರಣಕ್ಕೆ ಯಾರೂ ಹೆಲ್ಮೆಟ್ ಧರಿಸಬೇಕಿಲ್ಲ. ಬದಲಾಗಿ ತಮ್ಮ ಸುರಕ್ಷತೆ-ಗಾಗಿ ಸಾರ್ವಜನಿಕರು ಹೆಲ್ಮೆಟ್ ಧರಿಸಬೇಕು ಎಂದು ತಿಳಿಸಿದರು.

ಹೆಲ್ಮೆಟ್ ಬಳಕೆಯ ಕುರಿತು ಕಾಲೇಜು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ನವೀನ್ ಕುಮಾರ್, ರವಿಕುಮಾರ್, ಬಳ್ಳಾರಿ ನಗರ ಉಪವಿಭಾಗ ಡಿವೈಎಸ್ಪಿ ಚಂದ್ರಕಾಂತ ನಂದಾರೆಡ್ಡಿ, ಸಂಚಾರ ಪೊಲೀಸ್ ಠಾಣೆಯ ಸಬ್ ಇನ್‌ಸ್ಪೆಕ್ಟರ್ ಅಯ್ಯನಗೌಡ ಪಾಟೀಲ್ ಸೇರಿದಂತೆ ಇತರರು ಇದ್ದರು.

## ಹಠಾತ್ ದಾಳಿ: ಇಟ್ಟಿಗೆ ಭಟ್ಟಿ ಮಾಲೀಕರ ವಿರುದ್ಧ ಪ್ರಕರಣ ದಾಖಲು



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 6 – ದೇವದುರ್ಗ ತಾಲೂಕಿನಲ್ಲಿ ಇತ್ತೀಚೆಗೆ ನಿರಂತರ ಕಾರ್ಯಾಚರಣೆ ನಡೆಸಿ, ದುಡಿಯಲು ಹೋಗುತ್ತಿದ್ದ ಮಕ್ಕಳನ್ನು ರಕ್ಷಿಸಿ ಶಾಲೆಗೆ ಸೇರಿಸಿ ಯಶಸ್ವಿ ಕಾರ್ಯಚರಣೆ ಮಾಡಿ ಜನರಿಂದ ಮೆಚ್ಚುಗೆಗಳಿಸಿದ್ದ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರ ತಂಡವು ಇದೀಗ ಮತ್ತೊಂದು ಕಾರ್ಯಾಚರಣೆ ನಡೆಸಿ ಬಾಲ ಕಾರ್ಮಿಕರನ್ನು ರಕ್ಷಣೆ ಮಾಡಿದೆ.

ಮಕ್ಕಳ ಸಹಾಯವಾಣಿಗೆ ಬಂದ ದೂರಿನನ್ವಯ ಟಾಸ್ಕ್ ಪೋರ್ಸ್ ಸಮಿತಿ ತಂಡವು ರಾಯಚೂರು ತಾಲೂಕಿನ ಲಿಂಗನಖಾನದೊಡ್ಡಿಯ ಎಸ್.ಆರ್.ಬಿ ಇಟ್ಟಿಗೆ ಭಟ್ಟಿ ಮೇಲೆ ಹಠಾತ್ ದಾಳಿ ನಡೆಸಿ ಇಟ್ಟಿಗೆ ಭಟ್ಟಿಯಲ್ಲಿ ಕೆಲಸ ಮಾಡುತ್ತಿದ್ದ ಬಾಲಕಾರ್ಮಿಕ ಮತ್ತು ಒಬ್ಬ ಕಿಶೋರ ಕಾರ್ಮಿಕರನ್ನು ರಕ್ಷಣೆ ಮಾಡಿದೆ. ಈ ಬಾಲ ಕಾರ್ಮಿಕರನ್ನು ಸರ್ಕಾರಿ ಬಾಲಕಿಯರ ಬಾಲಮಂದಿರ ರಾಯಚೂರ ಅವರಿಗೆ ಒಪ್ಪಿಸಲಾಗಿದೆ. ಮಕ್ಕಳನ್ನು ಕೆಲಸಕ್ಕೆ ನೇಮಕ ಮಾಡಿಕೊಂಡಿದ್ದ ಮೆ.ಎಸ್.ಆರ್.ಬಿ ಇಟ್ಟಿಗೆ ಭಟ್ಟಿಯ ಮಾಲೀಕರ ವಿರುದ್ಧ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆಯಡಿ ಇಡಪನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ, 1ನೇ ವೃತ್ತ ರಾಯಚೂರನ ಕಾರ್ಮಿಕ ನಿರೀಕ್ಷಕರಾದ ಮಹ್ಮದ್ ಉಮರ್ ಅಬ್ದುಲ್ ಘನಿ, ಇಡಪನೂರ ಪೊಲೀಸ್ ಇಲಾಖೆಯ ಶಂಕರಗೌಡ, ರಾಯಚೂರ ಮಕ್ಕಳ ಸಹಾಯವಾಣಿ ಘಟಕದ ತಾಯರಾಜ್ ಹಾಗೂ ಲಿಂಗನಖಾನದೊಡ್ಡಿ ಗ್ರಾಮ ಪಂಚಾಯಿತಿಯ ಬಿಲ್ ಕಲೆಕ್ಟರ್ ತಾಯಪ್ಪ ಅವರು ದಾಳಿಯಲ್ಲಿ ಭಾಗಿಯಾಗಿ ಉತ್ತಮ ಕಾರ್ಯ ಮಾಡಿದ್ದಾರೆ.

ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ: ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ 2016 ರಂತೆ 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಹಾಗೂ 15 ರಿಂದ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಒಂದು ವೇಳೆ ದುಡಿಸಿಕೊಂಡಲ್ಲಿ 50,000 ರೂ. ದಂಡ ಹಾಗೂ 2 ವರ್ಷ ಜೈಲು ಶಿಕ್ಷೆ ಇರುತ್ತದೆ. ವಾಹನಗಳಲ್ಲಿ ಮಕ್ಕಳನ್ನು ಕೃಷಿ ಚಟುವಟಿಕೆಗಳಿಗಾಗಿ ಅಕ್ರಮ ಮತ್ತು ಕಾನೂನು ಬಾಹಿರವಾಗಿ ಸಾಗಣೆ ಮಾಡುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ದುಡಿಯುವ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ-1098 ಗೆ ಮಾಹಿತಿ ನೀಡಬಹುದಾಗಿದೆ ಎಂದು ಇದೆ ವೇಳೆ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ ಅವರು ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

## ಕೃಷಿಕ ಸಮಾಜದ ಅಧ್ಯಕ್ಷರಾದ ಮರ್ಕಲ್ ವಜಾಗೊಳಿಸಿ-ಕೆ ನೀಲಾ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಕೃಷಿಕ ಸಮಾಜದ ಅಧ್ಯಕ್ಷರಾಗಿ ರಾಜಾಶ್ರೆಯದಿಂದ ರಸಗೊಬ್ಬರಗಳ ಅಂಗಡಿ ಮಾಲಿಕರ ಸಂಘದ ಅಧ್ಯಕ್ಷಗಿರಿ ಪಡೆದುಕೊಂಡ ಬಸನಗೌಡ ಮರ್ಕಲ್ ರವರನ್ನು ಕೂಡಲೆ ಕೃಷಿಕ ಸಮಾಜದಿಂದ ವಜಾಗೊಳಸಿ. ಕಾನೂನು ಬಾಹೀರ ಅಕ್ರಮ ' ದುಬಾರಿ ಮಾರಾಟ ಮಾಡುವ ಅಂಗಡಿಗಳನ್ನು ತನಿಖೆ ಮಾಡಬೇಕು ಎಂದು ಜನವಾದಿ ಮಹಿಳಾ ಸಂಘದ ಉಪಾಧ್ಯಕ್ಷರಾದ ಕೆ,ನೀಲಾ ರವರು ಆಗ್ರಹ ಮಾಡಿದರು, ಅವರು ನಗರದಲ್ಲಿ ನಡೆದ ರೈತಪರ ಸಂಘಟನೆಗಳ ಒಕ್ಕೂಟದಿಂದ ನಡೆದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದರು, ರೈತ ಮುಖಂಡರಾದ ಚೆನ್ನಪ್ಪ ಆನೆಗುಂದಿಯವರ ಮೇಲೆ ಸುಳ್ಳು ಕೇಸ್ ದಾಖಲಿಸಿಕೊಂಡ ಪೋಲಿಸ್ ಅಧಿಕಾರಿಗಳು, ಅಕ್ರಮ ಮತ್ತು ದುಬಾರಿ ಬೆಲೆಗಳಿಗೆ ರಸಗೊಬ್ಬರ ಬೀಜಗಳನ್ನು ಮಾರಿಕೊಂಡು ಕೊಟ್ಯಾಧಿಪತಿಗಳಾದ ಬಸನಗೌಡ ಮರ್ಕಲರ ವಿರುದ್ಧ ದೂರು ನಿರಾಕರಿಸಿದರು, ಕಾಂಗ್ರೆಸ್ ಸರ್ಕಾರದ ಗುಲಾಮಗಿರಿಯಲ್ಲಿ ಪೋಲಿಸ್ ಗಿರಿ ಪದ್ಧತಿ ಮುಂದುವರೆದಿದೆ ಎಂದು ಕೆ ನೀಲಾರವರು ಆಕ್ರೋಶ ವ್ಯಕ್ತಪಡಿಸಿದರು, ಸಚಿವ ದರ್ಶನಾಪುರವರ ಗರಡಿಯಲ್ಲಿ ಪೋಲಿಸ್ ಇಲಾಖೆ ಪಳಗಿದ್ದು, ಖಂಡನೀಯವಾಗಿದೆ ಎಂದು ತಿಳಿಸಿದ ಅವರು, ರಸಗೊಬ್ಬರ ಪರಕರಗಳ ಮಾರಾಟ ಅಂಗಡಿಗಳಲ್ಲಿ ಕಡ್ಡಾಯವಾಗಿ ನೀಯಮಗಳನ್ನು ಪಾಲಿಸದೆ ಸರ್ಕಾರ ಕಾನೂನು ಗಾಳಿಗೆ ತೂರಿಕೊಂಡು ರಾಜಕೀಯ ಮಾಡುವ ಇಲ್ಲಿನ ಅವ್ಯವಸ್ಥೆ ವಿರುದ್ಧ ಕೃಷಿ ಜಾಗ್ರತ ದಳದ ಅಧಿಕಾರಿಗಳು ತನಿಖೆಗೆ ಮುಂದಾಗಬೇಕು, ಎಂದು ಅವರು ತಿಳಿಸಿದರು, ಪ್ರಾಂತ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ, ಯಶವಂತ, ರೈತ ಮುಖಂಡರಾದ ಮಲ್ಲಣಗೌಡ ಪರಿವಾಣ, ಮಹೇಶಗೌಡ ಸುಬೇದಾರ, ಶರಣು ಮಂದರವಾಡ, ಶ್ರೀಮತಿ ನಾಗರತ್ನ ಪಾಟೀಲ್, ಪ್ರಭಾಕರಡ್ಡಿ, ಧರ್ಮಣ್ಣ ದೊರೆ ಸುರುಪುರ, ದಲಿತ ಮುಖಂಡರಾದ ನಾಗಣ್ಣ ಬಡಿಗೇರ್, ಹೊನ್ನಪ್ಪ ಗಂಗನಾಳ, ದೇವಿಂದ್ರಪ್ಪಗೌಡ ಪಾಟೀಲ್, ದವಲಸಾಬ್ ನಧಾಫ್. ದೇವಿಂದ್ರಪ್ಪ ಕೊಲ್ಕರ್, ಚೆನ್ನಾರಡ್ಡಿ ಪಾಟೀಲ್, ಜೈಲಾಲ ತೋಟದ ಮನಿ, ಧರ್ಮಣ್ಣ ತಹಿಸಿಲ್ದಾರ, ಮಲ್ಕಣ್ಣ ಚಿಂತಿ, ಪ್ರದೀಪ ಅಣಿಬಿ, ವೆಂಕೋಭಾ ಕಟ್ಟಿಮನಿ, ಮಲ್ಲಣ್ಣ ಕೊಡೆಕಲ್. ದೇವಿಂದ್ರಪ್ಪ ಪತ್ತಾರ, ಪ್ರಕಾಶ ಆಲ್ದಾಳ, ಮಾಹಾದೇವಮ್ಮ ಹೀರೆಮಠ ಬಸ್ಸಮ್ಮ ಸುರುಪುರ ಸೇರಿದಂತೆ ರೈತಪರ ಸಂಘಟನೆಗಳ ಮುಖಂಡರು ದಲಿತಪರ ಸಂಘಟನೆಗಳ ಮುಖಂಡರು ಕಾರ್ಯಕರ್ತರು ಮಹಿಳೆಯವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು,

## 2024ನೇ ವರ್ಷದ ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 6 – ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪ್ರತಿ ವರ್ಷದಂತೆ 2024ನೇ ವರ್ಷದ ಪುಸ್ತಕ ಬಹುಮಾನ ಯೋಜನೆಗಾಗಿ ನಾನಾ ಪ್ರಕಾರಗಳ ಪುಸ್ತಕಗಳನ್ನು ಸಲ್ಲಿಸಲು ಅರ್ಜಿ ಆಹ್ವಾನಿಸಿದೆ. ಪ್ರತಿ ಪ್ರಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸಲು ಕೃತಿಗಳು 2024ರ ಜನವರಿ 01 ರಿಂದ 2024ರ ಡಿಸೆಂಬರ್ 31 ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಕೃತಿಗಳಾಗಿರಬೇಕು. ಕೃತಿಯಲ್ಲಿ ಪ್ರಥಮ ಮುದ್ರಣ 2024 ಎಂದು ಮುದ್ರಿತವಾಗಿರಬೇಕು.

ಯಾವ ಯಾವ ಪ್ರಕಾರಗಳು: ಕಾವ್ಯ, ನವಕವಿಗಳ ಪ್ರಥಮ ಕವನಸಂಕಲನ, ಕಾವ್ಯ ಹಸ್ತಪ್ರತಿ, ಕಾದಂಬರಿ, ಸಣ್ಣಕತೆ, ನಾಟಕ, ಲಲಿತ ಪ್ರಬಂಧ, ಪ್ರವಾಸ ಸಾಹಿತ್ಯ, ಜೀವನಚರಿತ್ರೆ/ಆತ್ಮಕಥೆ, ಸಾಹಿತ್ಯ ವಿಮರ್ಶೆ, ಮಕ್ಕಳ ಸಾಹಿತ್ಯ, ವಿಜ್ಞಾನ ಸಾಹಿತ್ಯ, ಮಾನವಿಕ, ಗ್ರಂಥ ಸಂಪಾದನೆ, ವೈಚಾರಿಕ / ಅಂಕಣ ಬರಹ, ಅನುವಾದ, ಲೇಖಕರ ಮೊದಲ ಸ್ವತಂತ್ರಕೃತಿ, ಕನ್ನಡದಿಂದ ಇಂಗ್ಲಿಷ್‌ಗೆ ಅನುವಾದ, ದಾಸ ಸಾಹಿತ್ಯ, ಸಂಕೀರ್ಣ ಮತ್ತು ಗಜಲ್ ಕಾವ್ಯ ಪ್ರಕಾರಗಳಲ್ಲಿ ಬಹುಮಾನ ನೀಡಲಾಗುತ್ತದೆ.2024ನೇ ವರ್ಷದ ಅವಧಿಯಲ್ಲಿ ಪ್ರಕಟವಾದ ಪುಸ್ತಕಗಳ ತಲಾ ನಾಲ್ಕು ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು-560002 ಇವರಿಗೆ ರಿಜಿಸ್ಟ್ರಾರ್ ಅಂಚೆ / ಕೋರಿಯರ್ ಮೂಲಕ ಅಥವಾ ಖುದ್ದಾಗಿ 2025ರ ಜುಲೈ 15ರೊಳಗೆ ತಲುಪಿಸಬೇಕು. ಬಹುಮಾನಕ್ಕಾಗಿ ಕಳುಹಿಸುವ ಕೃತಿಯ ಮೇಲೆ ತಿಳಿಸಿದ ಪ್ರಕಾರಗಳಲ್ಲಿ ಯಾವ ಸಾಹಿತ್ಯಪ್ರಕಾರಕ್ಕೆ ಸೇರುತ್ತದೆ ಎನ್ನುವುದನ್ನು ಸ್ಪಷ್ಟವಾಗಿ ಪುಸ್ತಕದ ಶೀರ್ಷಿಕೆ ಪುಟದಲ್ಲಿ ಬರೆದಿರಬೇಕು. ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್ https://sahithyaacademy.karnataka.gov.in ಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಕರಿಯಪ್ಪ ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಹುಮಾನಕ್ಕಾಗಿ ಪರಿಗಣಿಸಲ್ಪಡದ ಕೃತಿಗಳು: ಮರುಮುದ್ರಣವಾದ ಪುಸ್ತಕಗಳು, ಪಿಎಚ್.ಡಿ ಪದವಿಗಾಗಿ ಸಿದ್ಧಪಡಿಸಿದ ಸಂಶೋಧನಾ ಗ್ರಂಥಗಳು, ಪಠ್ಯಪುಸ್ತಕಗಳು, ಅಕಾಡೆಮಿಯ ಗೌರವ ಪ್ರಶಸ್ತಿ ಪುರಸ್ಕೃತ ಸಾಹಿತಿಗಳ ಕೃತಿಗಳು, ಈಗಾಗಲೇ ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಒಟ್ಟಾರೆ ಮೂರು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳು, ಒಂದು ಪ್ರಕಾರದಲ್ಲಿ ಒಂದು ಪುಸ್ತಕ ಬಹುಮಾನ ಪಡೆದವರ ಕೃತಿಗಳು ಹಾಗೂ ಒಬ್ಬ ಲೇಖಕರಿಗೆ ಮೂರು ಬಾರಿ ಬೇರೆ ಬೇರೆ ಪ್ರಕಾರಗಳಲ್ಲಿ ಬಹುಮಾನ ಪಡೆಯುವ ಅವಕಾಶವಿದೆ ಎಂಬುದನ್ನು ಲೇಖಕರು ಗಮನಿಸಬೇಕು ಎಂಬುದಾಗಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

## ಬಕ್ರೀದ್ ಹಬ್ಬವನ್ನ ಮುಸ್ಲಿಂ ಸಮುದಾಯದವರು ಸಡಗರ ಸಂಭ್ರಮದಿಂದ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಪಟ್ಟಣದ ಈದ್ಗಾ ಮೈದಾನಗಳಲ್ಲಿ ಬೆಳಗ್ಗೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ ಮುಸ್ಲಿಮರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಪುಟಾಣಿಗಳು ಕೂಡ ಪರಸ್ಪರ ಅಪ್ಪಿಕೊಂಡು ಈದ್ ಶುಭಾಶಯ ವಿನಿಯಮ ಮಾಡಿಕೊಂಡರು.

ಬಳಿಕ ದೇವರ ಹೆಸರಿನಲ್ಲಿ ಮನೆ-ಮನೆಗಳಲ್ಲಿ ಪ್ರಾಣಿ ಬಲಿ ನೆರವೇರಿಸಲಾಯಿತು.

ಮಾಂಸದ ಒಂದು ಭಾಗವನ್ನು ಮನೆಗೆ, ಇನ್ನೊಂದು ಭಾಗವನ್ನು ಸಂಬಂಧಿಕರಿಗೆ ಹಾಗೂ ಮತ್ತೊಂದು ಭಾಗವನ್ನು ಬಡ-ಬಗ್ಗರಿಗೆ ದಾನ ಮಾಡುವುದು ಬಕ್ರೀದ್ ಹಬ್ಬದ ಪದ್ಧತಿಗಳಲ್ಲೊಂದು. ಅದರಂತೆ, ಕೆಲವರು ಮಾಂಸವನ್ನು ದಾನ ಮಾಡಿದರೆ, ಇನ್ನೂ ಕೆಲವರು ಅಡುಗೆ ಮಾಡಿ ಬಡವರಿಗೆ

ದಾನ ಮಾಡುವ ಮೂಲಕ ತಮ್ಮ ಸೇವೆಯನ್ನು ಸಮರ್ಪಿಸಿದರು.

ತ್ಯಾಗ ಬಲಿದಾನ ಸಂಕೇತವಾದ ಬಕ್ರೀದ್ ಹಬ್ಬವನ್ನ ಮುಸ್ಲಿಂ ಸಮುದಾಯದವರು ಸಡಗರ ಸಂಭ್ರಮದಿಂದ ಆಚರಿಸಲಾಯಿತು

ಈ ಸಂದರ್ಭದಲ್ಲಿ ಸಮುದಾಯದ ಮುಖಂಡರಾದ ಖಾದರಭಾಷಾ, ಬಾಬಾ ಖಾಜಿ, ಮಹ್ಮದ್ ರಫೀ, ಹನೀಸ್ ಪಾಷಾ, ರೌಫ್ ಗ್ಯಾರಂಟಿ, ಜಾಫರ್‌ಹುಸೇನ್ ಪೂಲ್‌ವಾಲೆ, ಅಲ್ಲಾವುದ್ದೀನ್ ಪಟೇಲ್,ಜಿಲಾನಿಪಾಷಾ,ಮಹ್ಮದ್ ಖಾಜಾಹುಸೇನ್,ಅಕ್ತರ್ ಪಟೇಲ್ ಸೇರಿದಂತೆ ಉಪಸ್ಥಿತರಿದ್ದರು

## ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 7- ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಅರ್ಜಿ ಆಹ್ವಾನಿಸಲಾಗಿದೆ.

ಡಿ.ದೇವರಾಜ ಅರಸು ಸ್ವ-ಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ ಮತ್ತು ಹೊಲಿಗೆ ಯಂತ್ರ ವಿತರಣೆ ಯೋಜನೆಗಳು ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಮರಾಠ, ಮತ್ತು ಇದರ ಉಪ ಸಮುದಾಯಗಳನ್ನು ಹೊರತುಪಡಿಸಿ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ನಲ್ಲಿ ಉಳಿದ ಸಮುದಾಯಗಳಿಗೆ ಅನ್ವಯವಾಗುತ್ತವೆ.

ಈ ಎಲ್ಲಾ ಯೋಜನೆಗಳಡಿಯಲ್ಲಿ ಸೌಲಭ್ಯ ಒದಗಿಸಲು ಸೇವಾ ಸಿಂಧು ತಂತ್ರಾಂಶದಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023-24 ಮತ್ತು 2024-25ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್‌ಃಣಣಪಿ:// ಜತಭುಟಿಜಜುಣ.ಇಚಿಡಿಟಿಚಿಣಚಿ- ಇಚಿ.ರಠತ.ಏಟಿ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ. ನಿಗಮದ ವೆಬ್ಸೈಟ್ www.dbcdc.karnataka.gov.in ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿರುತ್ತದೆ ಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080-22374832 ಮತ್ತು 8050770004 ಅಥವಾ 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 08532-250440 ಸಂಪರ್ಕಿಸಬಹುದು. ಸೇವಾಸಿಂಧು ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಲು ದಿನಾಂಕ 30.06.2025ರಂದು ಕೊನೆಯ ದಿನಾಂಕ ನಿಗದಿಪಡಿಸಿದೆ ಎಂದು ಡಿ ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತದ ಪ್ರಕಟಣೆ ತಿಳಿಸಿದೆ.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ ರಾಮಣ್ಣಗೌಡ ಶ್ರೀ ಸಿಮೆಂಟ್



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಜೂ,07: ಪ್ರತಿಯೊಬ್ಬ ವಿದ್ಯಾರ್ಥಿಯು ಶಿಕ್ಷಣ ಕಲಿಯುವಾಗ ತಾವು ಕಲಿಯುತ್ತಿರುವಂತಹ ಶಿಕ್ಷಣ ಸಂಸ್ಥೆಗಳಲ್ಲಿ, ಮನೆಗಳ ಸುತ್ತಮುತ್ತ ಮರಗಳನ್ನು ಹಚ್ಚಿ ಬೆಳೆಸುವುದರ ಜೊತೆಗೆ ನಿತ್ಯ ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ ಎಂದು ಶ್ರೀ ಸಿಮೆಂಟ್ ಕಂಪನಿಯ ಸಿಎಸ್ ಆರ್ ಡಿಪಾರ್ಟ್ಮೆಂಟ್ನ ಅಧಿಕಾರಿಗಳಾದ ರಾಮಣ್ಣಗೌಡ ಹೇಳಿದರು.

ತಾಲೂಕಿನ ಕೋಡ್ಲಾ ಗ್ರಾಮದಲ್ಲಿರುವ ಪ್ರೌಢಶಾಲೆಯ ಆವರಣದಲ್ಲಿ ಶ್ರೀ ಸಿಮೆಂಟ್ ಫೌಂಡೇಶನ್ ಟ್ರಸ್ಟ್ ಹಾಗೂ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಫೌಂಡೇಶನ್, ಮತ್ತು ಕಲ್ಪನಾ ಚಾವ್ಲಾ ಇಕೋ ಕ್ಲಬ್ ಸಹಯೋಗ ದೊಂದಿಗೆ ಪರಿಸರ ಜಾಗೃತಿ ಮತ್ತು ಪರಿಸರ ಸ್ವಚ್ಛತೆ ಕುರಿತು ಪ್ರಬಂಧ ಸ್ಪರ್ಧೆ, ಕ್ವಿಜ್, ವಿವಿಧ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತ ವಿದ್ಯಾರ್ಥಿಗಳಿಗೆ ಡಿಕ್ಷನರಿ, ಪರೀಕ್ಷೆ ಪ್ಯಾಡ್, ನೋಟ್ ಬುಕ್ ಕಲರ್ ಸ್ಕೆಚ್, ಜೊತೆಗೆ 500 ಸಸಿಗಳು, ಉಂಡೆ ಸಸಿ ವಿತರಿಸಿ ಅವರು ಮಾತನಾಡಿದರು.ಈ ವೇಳೆಯಲ್ಲಿ ಶ್ರೀ ಸಿಮೆಂಟ್ ಸ್ಟಾಫ್ ಯೂನಿಯನ್ ಗೌರವ ಅಧ್ಯಕ್ಷರಾದ ಸಿದ್ದಣ್ಣ ಹೊಸಮನಿ ಸರಕಾರಿ ಪ್ರೌಢಶಾಲೆ ಸಹ ಶಿಕ್ಷಕ ಶ್ರೀ ಮತಿ ನವಿತಾ , ಶ್ರೀ ಸಿಮೆಂಟ್ ಸ್ಟಾಫ್ ಯೂನಿಯನ್ ಅಧ್ಯಕ್ಷರಾದ ಶ್ರೀ ಬಸವರಾಜ ರೆಡ್ಡಿ,ಕೋಡ್ಲಾ ಆರೋಗ್ಯ ಇಲಾಖೆ ಶ್ರೀ ಮತಿ ಜ್ಯೋತಿ ಲಿಂಗಪಲ್ಲಿ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಸಿದ್ದಿ ಪೇಟ್ ಮುಖ್ಯಗುರುಗಳು ಶ್ರೀ ಮತಿ ಅನ್ನಪೂರ್ಣ ಬಾನರ್, ನಳಂದ ಆಂಗ್ಲ ಮಾಧ್ಯಮ ಶಾಲೆಯ ಮುಖ್ಯ ಗುರುಗಳು ಶ್ರೀ ಮತಿ ಶರಣ ಕಲಾ, ಸರಕಾರಿ ಪ್ರೌಢಶಾಲೆ ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಅವಂಟಿ, ಗ್ರಾಮ ಪಂಚಾಯಿತಿ ಸದಸ್ಯರು ಸಾಬಣ್ಣ ಹೊಸಮನಿ, ಶಾಲೆಯ ಹಿರಿಯ ವಿದ್ಯಾರ್ಥಿ ವೀರೇಶ್ ತಂಬಾಕೆ, ಬೆನಕನಹಳ್ಳಿ ಕ ರ ವೆ ಅಧ್ಯಕ್ಷರಾದ ಮಲ್ಲಿಕಾರ್ಜುನ ಕಾಕಲವಾರ, ಉಚಿತ ಬೇಸಿಗೆ ಶಿಬಿರದ ರೂವಾರಿಗಳು ಮತ್ತು ಡಾ.ಎಂ.ಪಿ.ಜೆ. ಅಬ್ದುಲ್ ಕಲಾಂ ಫೌಂಡೇಶನ್ ಟ್ರಸ್ಟ್ ಅಧ್ಯಕ್ಷರಾದ ರಾಜು ಮಾಳಪ್ಪನೊರ್, ವಿಜ್ಞಾನ ಶಿಕ್ಷಕ ಜಗಪ್ಪ ಸರ್,ಶಿವಪುತ್ರಪ್ಪ ಸಹ ಶಿಕ್ಷಕರು ಕಾರ್ಯಕ್ರಮ ನಿರೂಪಿಸಿದರು,ಶ್ರೀ ಮತಿ ಕಾವ್ಯ ಶ್ರೀಮತಿ ವಿಜಯಲಕ್ಷ್ಮಿ ಪತ್ತಾರ ಮೇಡಂ, ಅತಿಥಿ ಶಿಕ್ಷಕರಾದ ರಾಮಲಿಂಗ ಇದ್ದರು.

## ಬಾಲಕಾರ್ಮಿಕರ ರಕ್ಷಣೆಗೆ ನಿರಂತರ ತಪಾಸಣೆ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ, ಜೂ.7: ಜಿಲ್ಲೆಯ ಪ್ರತಿ ತಾಲೂಕುಗಳಲ್ಲಿ ಹೋಟೆಲ್, ಅಂಗಡಿಗಳಲ್ಲಿ ನಿರಂತರ ಪರಿಶೀಲನೆ ನಡೆಸಿ ಬಾಲಕಾರ್ಮಿಕರನ್ನು ರಕ್ಷಿಸಲು ಅಧಿಕಾರಿಗಳು ಮುಂದಾಗಬೇಕು. ಅಥಣಿ, ರಾಯಬಾಗ, ಚಿಕ್ಕೋಡಿ, ಮೂಡಲಗಿ, ಗೋಕಾಕ್, ಕಾಗವಾಡ ತಾಲೂಕಿನ ಭಾಗದಲ್ಲಿ ಬಾಲ್ಯವಿವಾಹ ಪದ್ಧತಿಗಳು ಕಂಡುಬರುತ್ತಿದ್ದು, ನಿರಂತರ ತಪಾಸಣಾ ಕಾರ್ಯ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಜಿಲ್ಲಾ ಬಾಲ ಕಾರ್ಮಿಕರ ಯೋಜನಾ ಸಂಸ್ಥೆಯ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ಮೂರು ವರ್ಷಗಳಿಂದ ಮಕ್ಕಳ ರಕ್ಷಣಾ ಸಹಾಯವಾಣಿಗೆ ಕಡಿಮೆ ಕರೆಗಳು ಬರುತ್ತಿದ್ದು, ಲೋಪದೋಷಗಳನ್ನು ಪರಿಶೀಲಿಸಿ ಕರೆ ಬಾರದಿರುವುದಕ್ಕೆ ಸೂಕ್ತ ಕಾರಣಗಳನ್ನು ಗುರುತಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ಹೇಳಿದರು.

ಬಾಲಕಾರ್ಮಿಕರ ಮುಕ್ತ ಜಿಲ್ಲೆ ಘೋಷಣೆಗೆ ಎಲ್ಲ ಸಂಬಂಧಿಸಿದ ಅಧಿಕಾರಿಗಳು ಜಂಟಿ ಸಮೀಕ್ಷೆಯಲ್ಲಿ ಭಾಗಿಯಾಗಿ ರಕ್ಷಣೆ ಮುಂದಾಗಬೇಕು. ಬಾಲಕಾರ್ಮಿಕರ ರಕ್ಷಣೆಗೆ ಸಾರ್ವಜನಿಕರು ಸ್ವಯಂಪ್ರೇರಿತವಾಗಿ ಸಹಾಯವಾಣಿಗೆ ಕರೆ ಮಾಡಿ ದೂರು ದಾಖಲಿಸುವಂತೆ ಜಾಗೃತಿ ಅಭಿಯಾನ ಹಮ್ಮಿಕೊಳ್ಳಬೇಕು.

ಪ್ರತಿ ಶಾಲಾ-ಕಾಲೇಜುಗಳಲ್ಲಿ, ರಸ್ತೆ ಬದಿಯಲ್ಲಿ ಗೋಡೆ ಬರಹ, ಹಾಗೂ ಜಾಗೃತಿ ಕಾರ್ಯಕ್ರಮಗಳ ಆಯೋಜನೆ ಮೂಲಕ ಹೆಚ್ಚಿನ ಮಟ್ಟದಲ್ಲಿ ಪ್ರಚಾರ ಕೈಗೊಂಡು ಮಕ್ಕಳ ರಕ್ಷಣೆಗೆ ಮುಂದಾಗಬೇಕು.

ಭಿಕ್ಷಾಟನೆಯಲ್ಲಿ ತೊಡಗಿಕೊಳ್ಳುವ ಮಕ್ಕಳನ್ನು ರಕ್ಷಿಸಿ, ಮಕ್ಕಳನ್ನು ಭಿಕ್ಷಾಟನೆಯಲ್ಲಿ ಬಳಸಿಕೊಳ್ಳುವವರನ್ನು ಗುರುತಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಕೆಲವು ತಾಲೂಕು ಭಾಗದಲ್ಲಿ ಬಾಲ್ಯವಿವಾಹಗಳು ನಡೆಯುವ ಸಾಧ್ಯತೆ ಇರುವುದರಿಂದ ಅಂತಹ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು ಎಂದು ತಿಳಿಸಿದರು.

ಮಕ್ಕಳ ರಕ್ಷಣೆಗೆ ನಿರಂತರ ತಪಾಸಣೆಗಳು ಹೆಚ್ಚಾಗಬೇಕು. ರಕ್ಷಣೆಗೊಂಡ ಪೋಷಕರಿಲ್ಲದ ಬಾಲಕಾರ್ಮಿಕರನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲ ಮಂದಿರದಲ್ಲಿ ಇರಿಸಲು ಅವಕಾಶ ಕಲ್ಪಿಸಲಾಗುವುದು. ಅದೇ ರೀತಿಯಲ್ಲಿ ದತ್ತು ಸ್ವೀಕಾರ ಕೇಂದ್ರಗಳಲ್ಲಿ ಇರಿಸಿಲು ಅವಕಾಶವಿದ್ದು, ಅಂತಹ ಮಕ್ಕಳ ರಕ್ಷಣೆಗೆ ಅಧಿಕಾರಿಗಳು ನಿರ್ಲಕ್ಷ್ಯ ತೋರಬಾರದು ಎಂದರು.

ಎಸ್.ಸಿ-ಎಸ್.ಟಿ ಸಮುದಾಯದ ರಕ್ಷಣೆಗೊಂಡ ಬಾಲಕಾರ್ಮಿಕರನ್ನು ಮೀಸಲಾತಿ ಅನ್ವಯ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಸತಿ ನಿಲಯಗಳಿಗೆ ಪ್ರವೇಶ ನೀಡುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಹೇಳಿದರು.

ಸಹಾಯಕ ಕಾರ್ಮಿಕ ಆಯುಕ್ತ ದೇವರಾಜ ಮಾತನಾಡಿ, ಜಿಲ್ಲೆಯಲ್ಲಿ ಬಾಲಕಾರ್ಮಿಕರನ್ನು ರಕ್ಷಿಸಿ, ಪ್ರಕರಣಗಳನ್ನು ದಾಖಲಾಗಿದ್ದು, ರಕ್ಷಿಸಿದ ಮಕ್ಕಳನ್ನು ಪಾಲಕರಿಗೆ ಹಸ್ತಾಂತರಿಸಲಾಗುತ್ತಿದೆ.

ಈಗಾಗಲೇ ಕಿಶೋರ ಕಾರ್ಮಿಕರನ್ನು ರಕ್ಷಿಸಿ ಅಧಿಕ ಪ್ರಕರಣಗಳು ದಾಖಲಿಸಲಾಗುತ್ತಿದೆ. ಕಡ್ಡಾಯ ಶಿಕ್ಷಣ ನೀತಿ ಜಾರಿಯಲ್ಲಿರುವುದರಿಂದ ಬಾಲಕಾರ್ಮಿಕರ ಪ್ರಕರಣಗಳು ಅಷ್ಟು ಹೆಚ್ಚಾಗಿ ಕಂಡು ಬಂದಿರುವುದಿಲ್ಲ ಎಂದು ಹೇಳಿದರು.

ಜಿಲ್ಲಾ ಬಾಲಕಾರ್ಮಿಕರ ಯೋಜನೆಯ ಯೋಜನಾಧಿಕಾರಿ ಜ್ಯೋತಿ ಕಾಂತೆ ಮಾತನಾಡಿ, ರಾಮದುರ್ಗ ತಾಲೂಕಿನ ವ್ಯಾಪ್ತಿಯಲ್ಲಿ ಇಬ್ಬರು ಕಿಶೋರ ಕಾರ್ಮಿಕರನ್ನು ರಕ್ಷಣೆ ಮಾಡಲಾಗಿದ್ದು, ಪ್ರಕರಣಗಳು ನ್ಯಾಯಾಲಯ ಹಂತದಲ್ಲಿವೆ ಎಂದು ವಿವರಿಸಿದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಈಶ್ವರ ಗಡಾದಿ, ಜಿಲ್ಲಾ ಕಾರ್ಖಾನೆಗಳ ಉಪ ನಿರ್ದೇಶಕ ವೆಂಕಟೇಶ ರಾಠೋಡ, ಕಾರ್ಮಿಕ ನಿರೀಕ್ಷಕರಾದ ಮಲ್ಲಿಕಾರ್ಜುನ್ ಜೋಗುರ, ರಮೇಶ ಕೇಸರೂರ, ಸಂಜು ಭೋಸಲೆ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



ಬಸವಕಲ್ಯಾಣ :- ಇಲ್ಲಿನ ಮುಸ್ಲಿಂ ಬಾಂಧವರು ಪವಿತ್ರ ಹಬ್ಬವಾದ ಬಕ್ರೀದ್ ಹಬ್ಬದ ನಿಮಿತ್ತವಾಗಿ ಇಲ್ಲಿನ ಈದ್ಗಾ ಮೈದಾನದಲ್ಲಿ ಸಾಮೂಹಿಕವಾಗಿ ವಿಶೇಷ ಪ್ರಾರ್ಥನೆ ಮಾಡುವ ದೃಶ್ಯ ಕಾಣಬಹುದು. ನಂತರ ಪರಸ್ಪರ ಆಲಿಂಗಿಸಿ ಕೊಂಡು ಬಂದು ಮಿತ್ರರಿಗೆ ಹಬ್ಬದ ಶುಭಾಶಯಗಳು ತಿಳಿಸಿದರು.

## ಪರಿಸರ ಸಂರಕ್ಷಿಸಿ, ಕೋಟಿ ಜೀವರಾಶಿಗಳಿಗೆ ಜೀವದಾನ ಮಾಡಿ : ಪಿಡಿಒ ಪರಮೇಶ್ವರಯ್ಯ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ತನ್ನ ಅನೂಕೂಲಗಳಿಗಾಗಿ ಮನುಷ್ಯ ಪರಿಸರ ನಾಶಪಡಿಸುತಿದ್ದು ಪರಿಸರ ಉಳಿಸದಿದ್ದರೇ ಮಾನವನ ಅಳಿವು ಖಂಡಿತ ಎಂದು ಎಂದು ಕಿನ್ನಾಳ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪರಮೇಶ್ವರಯ್ಯ ಹೇಳಿದರು.ಅವರು ಕಿನ್ನಾಳ ಗ್ರಾಮದ ಕುವೆಂಪು ಶತಮಾನೋತ್ಸವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಸಸಿ ನೆಡುವ ಮೂಲಕ ಸಸಿಗೆ ನೀರು ಹಾಕಿ ಕಾರ್ಯಕ್ರಮ ಉಧ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರಿಗೂ ಎಲ್ಲಿಯವರೆಗೆ ತಾಳ್ಮೆ ಇರುತ್ತದೋ ಹಾಗೆ ಪ್ರಕೃತಿಯಲ್ಲಿಯೂ ಸಹ ತಾಳ್ಮೆ ಸಾಕಷ್ಟಿದೇ, ಆದರೆ ಮನುಷ್ಯ ಪ್ರಕೃತಿಯಲ್ಲಿನ ಗಿಡ, ಮರ, ಬಳ್ಳಿ, ಖನಿಜ ಸಂಪತ್ತನ್ನು ಕಾಪಾಡದಿದ್ದರೇ ಒಂದು ದಿನ ಪ್ರಕೃತಿ ವಿಕೋಪಕ್ಕೆ ತೆರಳಿ ಬದುಕು ಸಾಗಿಸುವುದು ಕಷ್ಟಸಾಧ್ಯವಾಗುತ್ತದೆ ಎಂದರು.ಪರಿಸರವೆಂದರೇ ಕೇವಲ ಗಿಡ, ಮರವಲ್ಲಾ ಪರಿಸರವೆಂದರೇ ನಮ್ಮ ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಚವಾಗಿ ಶುದ್ದವಾಗಿ ಇಟ್ಟುಕೊಳ್ಳುವ ಮೂಲಕ, ನಮ್ಮ ದಿನ ನಿತ್ಯದ



ಬಳಕೆಯಲ್ಲಿನ ಪ್ಲಾಸ್ಟಿಕನ್ನು ನಿಷೇದಿಸಬೇಕು ಅದರ ಬದಲು ಬಟ್ಟೆಯ ಕವರ್ ಬಳಸಬೇಕು ಅಂದಾಗ ಮಾತ್ರ ನಮಗೆ ಉತ್ತಮ ಪರಿಸರ ದೊರಕಲು ಸಹಕಾರಿಯಾಗುತ್ತದೆ ಎಂದು ಕರೆ ನೀಡಿದರು. ನಂತರ ಜಿಲ್ಲಾ ಭಾರತ ಸ್ಕೌಟ್ ಮತ್ತು ಗೈಡ್ಸ್ ಕಾರ್ಯದರ್ಶಿ ಹಾಗೂ ಸರಕಾರಿ ಶಾಲೆಯ ಮುಖ್ಯ ಶಿಕ್ಷಕ ಮಾರುತಿ ಆರೇರ್ ಮಾತನಾಡಿ ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು,ಗಿಡ,ಮರಗಳನ್ನು ಬೆಳಸಿ ಪೋಸಿಸುವ ಕಾರ್ಯಕ್ಕೆ ಪ್ರತಿಯೊಬ್ಬರು ಮುಂದಾಗಬೇಕಿದೆ ಎಂದರು.

ಮನುಷ್ಯ ಆರೋಗ್ಯಯುತ ಜೀವನ ನಡೆಸಲು ನಮ್ಮ ಸುತ್ತ, ಮುತ್ತ ಗಿಡ, ಮರಗಳನ್ನು ಬೆಳೆಸಿದಾಗ ಪರಿಸರದಲ್ಲಿ ಹೆಚ್ಚಿನ ಆಮ್ಲಜನಕ ಬಿಡುಗಡೆಯಾಗುವ ಮೂಲಕ ಸಕಲ ಜೀವರಾಶಿಗಳಿಗೂ ಬದುಕಲು ಅವಕಾಶ ಕಲ್ಪಿಸಿದಂತಾಗುತಿದ್ದು, ಕೇವಲ ಒಂದು ದಿನದ ಪರಿಸರ ದಿನಾಚರಣೆ, ಆಚರಣೆಯಾಗಿ ಉಳಿಯದೇ ಪ್ರತಿಯೊಬ್ಬರೂ ಕಂಕಣ ಬದ್ದರಾಗಿ ಪರಿಸರ ಉಳಿಸಲು ಮುಂದಾಗಬೇಕು ಎಂದರು.ನಂತರ ಪರಿಸರ

ಪ್ರಾಸ್ತಾವಿಕವಾಗಿ ದ್ರಾಕ್ಷಾಯಿಣಿ ಮಾಲಿಪಾಟೀಲ್ ಅವರು ಮಾತನಾಡಿದರು. ಈ ವೇಳೆ ರಾಜ್ಯ ಪುರಸ್ಕಾರ ಪರೀಕ್ಷೆಯಲ್ಲಿ ಉತ್ತೀರ್ಣಗೊಂಡ ಶಾಲೆಯ ಗೈಡ್ಸ್ ವಿದ್ಯಾರ್ಥಿಗಳಿಗೆ ಅಧಿಕಾರಿಗಳು ಪ್ರಶಸ್ತಿ ಪತ್ರಗಳನ್ನು ವಿತರಿಸಿದರು.

ನಂತರ ಆವರಣದಲ್ಲಿ ಸರ್ವ ಪದಾಧಿಕಾರಿಗಳು ಸ್ಕೌಟ್ಸ್ ಗೈಡ್ಸ್ ವಿದ್ಯಾರ್ಥಿಗಳು ಜೊತೆಯಲ್ಲಿ 50ಕ್ಕೂ ಹೆಚ್ಚು ಸಸಿಗಳನ್ನು ನೆಡಲಾಯಿತು.

ಈ ಸಂದರ್ಭದಲ್ಲಿ ಅತಿಥಿಗಳಾಗಿ ಶಾಲೆಯ ಎಸ್ ಡಿಎಮ್ ಸಿ ಸದಸ್ಯರುಗಳು ಹಾಗೂ ಜಿಲ್ಲಾ ಸಹ ಕಾರ್ಯದರ್ಶಿ ಪ್ರಭಾಕರ ದಾಸರ, ಗೈಡ್ಸ್ ಕ್ಯಾಪ್ಟನ ಬಸಮ್ಮ ಗುಜ್ಜಲ್, ಎ ಎಸ್ ಓ ಸಿ ಶರೀಫ್ ಹತ್ತಿಮತ್ತೂರ್ ಹಾಗೂ ಶಿಕ್ಷಕ ವೃಂದದವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.ಮಾರುತಿ ಅರೇರ್ ಸರ್ವರನ್ನು ಸ್ವಾಗತಿಸಿದರು.ಶರೀಫ್ ಹತ್ತಿಮತ್ತೂರ ವಂದಿಸಿದರು.

## ಕಾಡುಗೊಲ್ಲ ಅಭಿವೃದ್ಧಿ ನಿಗಮ: ವಿವಿಧ ಸಾಲ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.07-ಕರ್ನಾಟಕ ಕಾಡುಗೊಲ್ಲ ಅಭಿವೃದ್ಧಿ ನಿಗಮ ವತಿಯಿಂದ 2025-26ನೇ ಸಾಲಿಗೆ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ-ಸೌಲಭ್ಯಕ್ಕಾಗಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

**ಅರ್ಹತೆ:** ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಕಾಡುಗೊಲ್ಲ ಜಾತಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು.

ಅರಿವು ಯೋಜನೆಯಡಿ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು ಮತ್ತು ವಾರ್ಷಿಕ ವರಮಾನ ರೂ.3.50 ಲಕ್ಷ. ಸ್ವಾವಲಂಬಿ ಸಾರಥಿ ಯೋಜನೆ ಯಡಿ ಅರ್ಜಿದಾರರು 21 ವರ್ಷ ಮೇಲ್ಪಟ್ಟು 45 ವರ್ಷದ ಮಿತಿಯಲ್ಲಿರಬೇಕು. ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ.98 ಸಾವಿರ ಮತ್ತು ನಗರ ಪ್ರದೇಶದವರಿಗೆ ರೂ.1 ಲಕ್ಷ, 20 ಸಾವಿರ ಮಿತಿಯೊಳಗಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1 ಮೀಸಲಾತಿ ಇರಿಸಿದೆ.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಕಡ್ಡಾಯವಾಗಿ ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು/ವಿಳಾಸ/ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಪಾಸ್ ಪುಸ್ತಕಗಳಲ್ಲಿ ತಾಳೆಯಾಗಬೇಕು (ಶ್ರೀ/ಶ್ರೀಮತಿ/ಕುಮಾರಿ ಮುಂತಾದ ಮಾಹಿತಿಗಳು). 2023-24 ಹಾಗೂ 2024-25ನೇ ಸಾಲಿನಲ್ಲಿ ಯೋಜನೆಗೆ ಅರ್ಜಿ ಸಲ್ಲಿಸಿರುವ ಅರ್ಜಿದಾರರು ಮತ್ತೊಮ್ಮೆ ಬೇರೆ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

**ಯೋಜನೆಗಳ ವಿವರ:**

ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ನೇರಸಾಲ ಯೋಜನೆ(ಹೊಸದು), ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ನೇರಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ).

ಅರ್ಜಿಗಳನ್ನು ಬೆಂಗಳೂರು-ಒನ್/ಕರ್ನಾಟಕ-ಒನ್/ಅಟಲ್-ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜು.02 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನ ಕಚೇರಿಯ ಎರಡನೇ ಮಹಡಿಯ ಬಿ ಬ್ಲಾಕ್ ನ ಕಾಡುಗೊಲ್ಲ ಅಭಿವೃದ್ಧಿ ನಿಗಮ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ 08022 374848 / 7899899039 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ.ಹೊನ್ನುರಪ್ಪ ಅವರು

## ಸರಿಯಾದ ರೀತಿಯಲ್ಲಿ ಕೆಲಸ ಮಾಡದಿರುವ ಬಗ್ಗೆ ಪುರಸಭೆ ಕಾರ್ಯಾಲಯದ ಅಧಿಕಾರಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್ ಪುರಸಭೆ ಕಾರ್ಯಲದಯಲ್ಲಿ (ಯೂ. ಆರ್.ಡಬ್ಲೂ) ನಗರ ಪುನರ್ ವಸತಿ ಕಾರ್ಯಕರ್ತ ಇವರು ಹಲವು ವರ್ಷಗಳ ಹಿಂದೆ ನೇಮಕಗೊಂಡಿದ್ದು ಕಛೇರಿಯ ಭೇಟಿ ನೀಡದೆ ಹಾಗೂ ಸರಿಯಾದ ರೀತಿಯಲ್ಲಿ ಕೆಲಸ ಮಾಡದೆ ವಿಕಲಚೇತನರು ಕಚೇರಿಗೆ ಭೇಟಿ ನೀಡಿದಾಗ ಕಚೇರಿಯಲ್ಲಿ ಇರುವುದಿಲ್ಲಾ, ಈಗಾಗಲೇ ಹಲವು ಬಾರಿ ಮುಖ್ಯಾಧಿಕಾರಿಗಳ ಗಮನಕ್ಕೆ ತಂದರೂ ಸಹ ಅವರು ಲಿಖಿತ ರೂಪದಲ್ಲಿ ಮನವಿ ನೀಡಲು ಸೂಚಿಸಿದ ಹಿನ್ನಲೆಯಲ್ಲಿ ನಿನ್ನೆ ವಿಕಲಚೇತನರು ಪುರಸಭೆ ಕಾರ್ಯಾಲಯಕ್ಕೆ ಭೇಟಿ ಮಾಡಿದಾಗ ಮುಖ್ಯಾಧಿಕಾರಿ, ವ್ಯವಸ್ಥಾಪಕರು, ಕಂದಾಯ ನಿರೀಕ್ಷಕರು, ಕಂದಾಯ ಅಧಿಕಾರಿಗಳು ಸೇರಿದಂತೆ ಕಚೇರಿಯಲ್ಲಿ ಯಾರೂ ಇಲ್ಲದ ಕಾರಣ ಮುಖ್ಯಾಧಿಕಾರಿಗಳ ಪರವಾಗಿ ಕರ ವಸೂಲಿಗಾರರಾದ ಮಲ್ಲಯ್ಯ ಅವರಿಗೆ ನೀಡಿದರು.

ಅಧಿಕಾರಿಗಳು ಕಚೇರಿಗೆ ಬಾರದೆ ಸರಕಾರದಿಂದ ಸಿಗುವ ಸೌಲಭ್ಯಗಳಿಂದ ವಿಕಲಚೇತನರು ವಂಚಿತರಾಗುತ್ತಿದ್ದಾರೆ. ಆದ್ದರಿಂದ ಇವರ ವಿರುದ್ಧ ಶಿಸ್ತು ಕ್ರಮ ಕೈಗೊಂಡು ಸರಿಯಾದ ರೀತಿಯಲ್ಲಿ ಕೆಲಸ ಮಾಡುವ ವ್ಯಕ್ತಿಯನ್ನು ಆ ಸ್ಥಾನದಲ್ಲಿ ನೇಮಕ ಮಾಡಿಕೊಳ್ಳಬೇಕು, ವಿಕಲಚೇತನರನ್ನು ಸೌಲಭ್ಯದಿಂದ ವಂಚಿತರಾನ್ನಾಗಿಸದೆ ಅವರಿಗೆ ಅನುಕೂಲವಾಗುವಂತೆ ಮಾಡಿಕೊಡಬೇಕು, ಈಗಾಗಲೇ ಈ ಹಾಜರಾತಿ ಚಾಲ್ತಿಯಲ್ಲಿ ಇರುವುದರಿಂದ ಅವರು ಈ ಹಾಜರಾತಿ ಮಾಡಿರುವುದಿಲ್ಲ. ಇದಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಿದ್ದಣ್ಣ ಗೌಡ ಆರ್.ಪಿ.ಡಿ.ಟಾಸ್ಕ್ ಫೋರ್ಸ್ ಅಧ್ಯಕ್ಷರು ಗುರುಮಠಕಲ್ ಮತ್ತು ಟಾಸ್ಕ್ ಫೋರ್ಸ ಸದಸ್ಯರು ವಿನಂತಿಸಿದ್ದಾರೆ.

## ಕಾಳಗಿ:ಜಗನ್ಮಾತೆ ಬನಶಂಕರಿದೇವಿ ದೇವಸ್ಥಾನಕ್ಕೆ ಕನ್ನ ಹಾಕಿದ ಕಳ್ಳರು'ಮಾಯವಾದ ಮಾಂಗಲ್ಯ'

ಮಲ್ಲಮ್ಮ ನುಡಿ ವಾರ್ತೆ

ಕಾಳಗಿ:ಜೂ.7:ಪಟ್ಟಣದ ಆರಾಧ್ಯ ದೇವಿ ಜಗನ್ಮಾತೆ ತಾಯಿ ಬನಶಂಕರಿ ದೇವಿ ದೇವಸ್ಥಾನಕ್ಕೆ ಕನ್ನ ಹಾಕಿದ ಕಳ್ಳರು, ದೇವಿ ಮೂರ್ತಿಯ ಕೊರಳಿಗೆ ಹಾಕಿದ 15ಗ್ರಾಂ. ಚಿನ್ನದ ಮಾಂಗಲ್ಯವನ್ನು ದೋಚಿಕೊಂಡು ಪರಾ-ರಿಯಾದ ಘಟನೆ ಶುಕ್ರವಾರ ಸಂಜೆ ಬೆಳಕಿಗೆ ಬಂದಿದೆ.

ಸಂಜೆ ದೇವಿ ಮೂರ್ತಿಗೆ ಪೂಜೆ ಗೈದು, ದೀಪ



ಹಚ್ಚಲೆಂದು ದೇವಸ್ಥಾನಕ್ಕೆ ಬಂದ ಅರ್ಚಕ ಸುರೇಶ ಗುಂಡದ ದೇವಸ್ಥಾನ ಬಾಗಿಲದ ಬೀಗವನ್ನು ಮುರಿದ ಸ್ಥಿತಿಯಲ್ಲಿ ಕಂಡು ಗಾಬರಿಯಾಗಿ, ಒಳಗೆ ಹೋಗಿ ದೇವಿ ಮೂರ್ತಿಯನ್ನು ಗಮನಿಸಿದಾಗ ಮಾಂಗಲ್ಯ ಮಾಯವಾಗಿರುವುದು ತಿಳಿದಿರುವುದಾಗಿ ಹೇಳಲಾಗಿದೆ.

ಮಾಂಗಲ್ಯ ಮಾಯವಾದ ವಿಷಯ ದೇವಸ್ಥಾನದ ಅಧ್ಯಕ್ಷ ವಿರೇಶ ಕಣ್ಣಿ ಅವರಿಗೆ ತಿಳಿಸಿರುವ ಅರ್ಚಕ, ಸುದ್ದಿ ಎದ್ದ ಬೆನ್ನಲ್ಲೆ ಸಾರ್ವಜನಿಕರು ದೇವಸ್ಥಾನದ ಸುತ್ತುವರಿದು ಜಮಾಗೊಂಡಿದ್ದರು. ವಿಷಯ ತಿಳಿದ ಪೊಲಿಸರು ಸ್ಥಳಕ್ಕೆ ಭೇಟಿ ನೀಡಿ ಪರಿಸಿಲಿಸಿದ್ದಾರೆ.

## ಬಿ.ಐ.ಇ.ಆರ್.ಟಿ. ಪ್ರೌಢ ಹುದ್ದೆಗಳನ್ನು ನೇರ ಗುತ್ತಿಗೆಯಡಿ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂನ್.07--ಪ್ರಸಕ್ತ 2025-26ನೇ ಸಾಲಿಗೆ ಸಮನ್ವಯ ಶಿಕ್ಷಣ ಮಧ್ಯವರ್ತನೆಯಡಿ ಜಿಲ್ಲೆಯಲ್ಲಿ ಖಾಲಿಯಿರುವ ಪ್ರತಿ ತಾಲೂಕಿಗೆ 2 ರಂತೆ ಒಟ್ಟು 16 ಬಿ.ಐ.ಇ.ಆರ್.ಟಿ. ಪ್ರೌಢ ಹುದ್ದೆಗಳಿಗೆ ನೇರ ಗುತ್ತಿಗೆಯಡಿ ನೇಮಕಾತಿ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸಮಗ್ರ ಶಿಕ್ಷಣ ಕರ್ನಾಟಕ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು ಹಾಗೂ ಉಪನಿರ್ದೇಶಕರು ತಿಳಿಸಿದ್ದಾರೆ. ಆಸಕ್ತರು ಭರ್ತಿ ಮಾಡಿದ ಅರ್ಜಿಯೊಂದಿಗೆ ಎಲ್ಲಾ ಅಂಕಪಟ್ಟಿ,ಆರ್.ಸಿ.ಐ. ಪ್ರಮಾಣಪತ್ರದ ಝೆರಾಕ್ಸ್ ಪ್ರತಿ, ಈ ಹಿಂದೆ ಸೇವೆ ಸಲ್ಲಿಸಿದಲ್ಲಿ ಸೇವಾ ವಿವರಗಳ ದಾಖಲೆಗಳನ್ನು ಲಗತ್ತಿಸಿ 2025ರ ಜೂನ್ 13 ರ ಸಂಜೆ 5 ಗಂಟೆಯೊಳಗಾಗಿ ಕಲಬುರಗಿ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ವಿದ್ಯಾರ್ಹತೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಸದರಿ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಅನೈತಿಕ ಚಟುವಟಿಕೆಗಳ ತಾಣ ಕೇಸರ ಜವಳಗಾ ಬಸ್ ತಂಗುದಾಣ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 07 : ಹುಲಸೂರ್ 'ಸಮೀಪದ ಸಾಯಗಾಂವ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೇಸರ ಜವಳಗಾ ಗ್ರಾಮದಿಂದ ಹಾದು ಹೋಗುವ ಬೀದರ್ – ಲಾತೂರ್ ಹೆದ್ದಾರಿ ಪಕ್ಕದಲ್ಲಿರುವ ಬಸ್ ತಂಗುದಾಣ ನಿರ್ವಹಣೆ ಇಲ್ಲದೆ ಅನೈತಿಕ ಚಟುವಟಿಕೆಗಳ ತಾಣವಾಗಿದ್ದು, ಇದರಿಂದ ತೀವ್ರ ಸಮಸ್ಯೆಯಾಗುತ್ತಿದೆ' ಎಂದು ನಾಗರಿಕರು ದೂರಿದ್ದಾರೆ.

ಲಾತೂರ–ಬೀದರ್ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಕೇಸರಜವಳಗಾ ನಿಲ್ದಾಣವು ಸಾಯಿಗಾಂವ, ಮೇಹಕರ, ಅಳವಾಯಿ, ಅಟ್ಟರ್ಗಾ, ಗುಂಜರಗಾ, ಶ್ರೀಮಳ್ಳಿ ಹಾಗೂ ಮಹಾರಾಷ್ಟ್ರದ ವಲಂಡಿ, ದೇವಣಿ, ಉದಗೀರಗಳಿಗೆ ತೆರಳುವ ಪ್ರಯಾಣಿಕರಿಗೆ ಕೇಂದ್ರ ಸ್ಥಾನವೆನಿಸಿದೆ.

ಸುತ್ತಮುತ್ತಲಿನ ಗ್ರಾಮಗಳಿಂದ ನಿತ್ಯ ನೂರಾರು ಪ್ರಯಾಣಿಕರು ನಗರ ಪ್ರದೇಶಗಳಿಗೆ ಹೋಗಲು ಕೇಸರ ಜವಳಗಾ ಗ್ರಾಮಕ್ಕೆ ಬಂದು ಹೋಗುತ್ತಾರೆ. ಈ ಬಸ್ ನಿಲ್ದಾಣವು 2001 – 2002ನೇ ಸಾಲಿನಲ್ಲಿ ನಿರ್ಮಿಸಿದ್ದು, ಈಗ ಇದು ಮದ್ಯ ಮತ್ತು ಧೂಮಪಾನ ಮಾಡುವವರ ಅಡ್ಡೆಯಾಗಿದೆ. ಸರಿಯಾಗಿ ನಿರ್ವಹಣೆ ಮಾಡದ ಕಾರಣ ನಿಲ್ದಾಣದಲ್ಲಿ ತ್ಯಾಜ್ಯ ತುಂಬಿದೆ.

ಮದ್ಯಪಾನ ಮಾಡಿದವರು ಬಾಟಲಿ ಮತ್ತು ಆಹಾರ ತ್ಯಾಜ್ಯವನ್ನು ಇಲ್ಲಿ ಬೀಸಾಡಿ ಹೋಗುತ್ತಾರೆ. ಧೂಮಪಾನ ಹಾಗೂ ಮದ್ಯಪಾನ ಮಾಡುವುದರಿಂದ ತಂಗುದಾಣ ಸಂಪೂರ್ಣವಾಗಿ ದುರ್ವಾಸನೆ ಬಿರುತ್ತಿದೆ. ಇದರಿಂದ ಜನ ನಿಲ್ದಾಣದಲ್ಲಿ ಕುಳಿತುಕೊಳ್ಳಲು ಅಹಸ್ಯ ಪಡುವಂತಾಗಿದೆ.




ಹೀಗಾಗಿ ಜನ ತಂಗುದಾಣದ ಹೊರಗೆ ಬಸ್‌ಗಾಗಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಆಸನ ವ್ಯವಸ್ಥೆ ಸರಿಯಿಲ್ಲದ ಕಾರಣ, ಬಸ್‌ಗಾಗಿ ಕಾಯುವ ವಯಸ್ಸಾದವರು, ಅಂಗವಿಕಲರು ಪರದಾಡುತ್ತಾರೆ. ವಿದ್ಯುತ್ ದೀಪದ ವ್ಯವಸ್ಥೆ ಇಲ್ಲದ್ದರಿಂದ ಸಂಜೆ ವೇಳೆ ಬರುವ ಪ್ರಯಾಣಿಕರು, ವಿಶೇಷವಾಗಿ ಹೆಣ್ಣು ಮಕ್ಕಳು ಭಯದಲ್ಲಿಯೇ ಬಸ್ ಬರುವಿಕೆಗಾಗಿ ಕಾಯುವಂತಾಗಿದೆ' ಎಂದು ನಾಗರಿಕರು ದೂರುತ್ತಾರೆ.

ಶೌಚಕ್ಕೆ ಬಯಲೇ ಆಧಾರ : ಕಳೆದ 20 ವರ್ಷಗಳ ಹಿಂದೆ ನಿರ್ಮಿಸಿದ ಬಸ್ ತಂಗುದಾಣದಲ್ಲಿ ಶೌಚಾಲಯ ನಿರ್ಮಾಣ ಕಾರ್ಯ ನಡೆದಿಲ್ಲ. ಹೀಗಾಗಿ ಶೌಚಕ್ಕೆ ಪ್ರಯಾಣಿಕರು ಪರದಾಡುವಂತಾಗಿದೆ. ಈನಿಟ್ಟಿನಲ್ಲಿ ಪ್ರಯಾಣಿಕರು ಬಯಲನ್ನೇ ಆಸರಿಸಿದ್ದು, ಸಂಜೆ ವೇಳೆ ಕುಡುಕರ ಹಾವಳಿಯಿಂದ ಬಸ್ ನಿಲ್ದಾಣದ ವಾತಾವರಣ ಹದಗೆಡುವಂತಾಗಿದೆ.

ನಾಯಿ ಹಾವಳಿ: ಪ್ರಯಾಣಿಕರು ಬಸ್ ನಿಲ್ದಾಣದಲ್ಲಿ ಬಸ್‌ಗಾಗಿ ಕಾಯಬೇಕಾದರೆ ದುರ್ವಾಸನೆ ಸೇವನೆ ಅನಿವಾರ್ಯ. ಬಸ್ ತಂಗುದಾಣದಲ್ಲಿ ತ್ಯಾಜ್ಯವಸ್ತುಗಳನ್ನು ಬೀಸಾಡುವುದರಿಂದ ಬೀದಿ ನಾಯಿಗಳ ಹಾವಳಿ ಹೆಚ್ಚಿದೆ. ಪ್ರಯಾಣಿಕರು ನಿರಾಳವಾಗಿ ನಿಲ್ದಾಣದಲ್ಲಿ ನಿಲ್ಲುವಂತಿಲ್ಲ, ಬೀದಿ ನಾಯಿಗಳು ಜಗಳವಾಡಿಕೊಂಡು ಬಂದು ಪ್ರಯಾಣಿಕರ ಮೇಲೆ ಎರಗುತ್ತವೆ ಎಂದು ಹೆಸರು ಹೇಳ ಬಯಸದ ಪ್ರಯಾಣಿಕರೊಬ್ಬರು ದೂರುತ್ತಾರೆ.

ಸೌಲಭ್ಯ ಇಲ್ಲ: ಒಂದೆಡೆ ಬಸ್ ತಂಗುದಾಣದಲ್ಲಿ ಅವ್ಯವಸ್ಥೆಯ ನಡುವೆ ಸೌಲಭ್ಯ ಕೊರತೆ ಉಂಟಾಗಿದೆ. ಒಂದು ಬಸ್ ಬಂದರೆ ಸಾಕು ದಟ್ಟವಾದ ದೂಳು ಆವರಿಸಿಕೊಂಡು ಪ್ರಯಾಣಿಕರು ಮೂಗು ಮುಚ್ಚಿಕೊಂಡು ಕೂಡಬೇಕು. ಸುತ್ತಮುತ್ತಲಿನ ಅಂಗಡಿ, ಹೋಟೆಲ್‌ಗಳಲ್ಲಿ ಧೂಳು ಬರುತ್ತಿದ್ದರಿಂದ ಅಂಗಡಿಕಾರರು ತೊಂದರೆ ಅನುಭವಿಸುವಂತಾಗಿದೆ. ಬಸ್‌ಗಾಗಿ ಕಾಯುವ ಪ್ರಯಾಣಿಕರಿಗೆ ಕುಡಿಯುವ ನೀರಿನ ಸೌಲಭ್ಯ ಕೂಡ ಮರೀಚಿಕೆಯಾಗಿದೆ. ಕೂಡಲೇ ಇಲಾಖೆ ಅಧಿಕಾರಿಗಳು ಕೇಸರ ಜವಳಗಾ ಬಸ್ ನಿಲ್ದಾಣಕ್ಕೆ ಕಾಯಕಲ್ಪ ನೀಡಲು ಪ್ರಯಾಣಿಕರು ಒತ್ತಾಯಿಸಿದ್ದಾರೆ.



ಕಲಬುರಗಿ: ತ್ಯಾಗ, ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬದ ಅಂಗವಾಗಿ ಮುಸ್ಲಿಂ ಬಾಂಧವರು ನಗರದ ಈದ್ಗಾ ಮೈದಾನದಲ್ಲಿ ಶನಿವಾರ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

## ಶ್ರದ್ಧೆ, ಭಕ್ತಿಯಿಂದ ಬಕ್ರೀದ್ ಆಚರಣೆ



ಮಲ್ಲಮ್ಮನುಡಿವಾರ್ತೆಭಾಲ್ಕಿ:ಜೂ.7:ಪಟ್ಟಣ ಸೇರಿದಂತೆ ತಾಲ್ಲೂಕಿನ ವಿವಿಧೆಡೆ ತ್ಯಾಗ, ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರು ಶ್ರದ್ಧೆ, ಭಕ್ತಿಯಿಂದ ಆಚರಿಸಿದರು. ಮುಂಜಾನೆಯೇ ನಗರದ ಈದ್ಗಾ ಮೈದಾನದಲ್ಲಿ ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಧರ್ಮ ಗುರುಗಳು ಹಬ್ಬದ ಸಂದೇಶ ಸಾರಿ, ಬಕ್ರೀದ್ ಹಬ್ಬದ ಆಚರಣೆ ಹಾಗೂ ದುರ್ಗುಣ, ದುಶ್ಚಟ, ಅಹಂಕಾರ, ಭಯಗಳ ತ್ಯಾಗದಿಂದ ಪರಿಪೂರ್ಣ, ನೆಮ್ಮದಿಯ ಬದುಕು ಸಾಗಿಸಲು ಸಾಧ್ಯ ಎಂದು ಹೇಳಿದರು. ಪ್ರಾರ್ಥನೆಯ ಬಳಿಕ ಮುಸ್ಲಿಂ ಬಾಂಧವರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಧರ್ಮಗುರು ಜಲಾಲುದ್ದೀನ್ ಸಾಬ್‌ಕಾಸ್ಮಿ, ಮುಫ್ತಿ ಮುಸಾ ಸಾಹಿಬ್, ಈದ್ಗಾ ಅಧ್ಯಕ್ಷ ಶೇಖ್ ನಾಸೀರ್, ರಿಯಾಜ್ ಮೀಯಾ ರಮಜಾನಿ, ಶೇಖ್ ಮೊಯಿಜೋದ್ದಿನ್, ಶೇಖ್ ಸಾಬೇರ್ ಮೀಯಾ ಪಟೇಲ್, ರಫಿಕ್ ಸಾಬ್, ಸೈಯದ್ ಆಸಿಫ್, ಅಯೂಬ್ ಪಟೇಲ್ ಸೇರಿದಂತೆ ಇತರರು ಇದ್ದರು.

## ದೇವಲ್ ಗಾಣಗಾಪುರದಲ್ಲಿ ಸಡಗರ ಸಂಭ್ರಮದಿಂದ ಬಕ್ರಿದ್ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಅಫಜಲಪೂರ್:ಜೂ.7:ತಾಲೂಕಿನ ದೇ ಗಾಣಗಾಪೂರ್ ಗ್ರಾಮದಲ್ಲಿ ತ್ಯಾಗಬಲಿದಾನದ ಸಂಕೇತವಾಗಿರುವ ಬಕ್ರಿದ್ ಹಬ್ಬದಂಗವಾಗಿ ಗ್ರಾಮದ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ಪ್ರಾರ್ಥನೆ ಸಲ್ಲಿಸಿ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು.

ಪ್ರಾರ್ಥನೆ ಸಲ್ಲಿಸುವ ವೇಳೆಯಲ್ಲಿ ನಾಡಿನ ಒಳಿತಿಗಾಗಿ ಮಳೆ ಬೆಳೆ ಚೆನ್ನಾಗಿ ಆಗಲಿ ಹಾಗೂ ರಾಜ್ಯದಲ್ಲಿ ಸೌಹಾರ್ದತೆ ಬೆಳೆಯಲಿ ಎಂದು ವಿಶೇಷವಾಗಿ ಪ್ರಾರ್ಥನೆ ಮಾಡಲಾಯಿತು

ಈ ವೇಳೆ ಸಮಾಜದ ಹಿರಿಯ ಮುಖಂಡರಾದ ಇಬ್ರಾಹಿಂಸಾಬ್ ಮನಿಯಾರ್ .ಅನ್ವರ್ ಸಾಬ್ ತಾಂಬೋಳಿ ಖಾಜಾಸಾಬ್ ಚೌಗಡ.ಮಹಿಬೂಬ್ ಸಾಬ ಇಟಗಿ. ಜಾಮೀಯ ಮಸೀದಿ ಅಧ್ಯಕ್ಷರು ಆದಾ ಫಿರೋಜ್ ಮನಿಯಾರ್ ಉಪಾಧ್ಯಕ್ಷರು ಶೇಖ್ ಅಲಿ ತಾಂಬೋಳಿ. ಕಾರ್ಯದರ್ಶಿ ಸಲೀಂ ಚೌಗೌಡ ಸಹ ಕಾರ್ಯದರ್ಶಿ ಅನಿಶ್ ತಾಂಬೋಳಿ. ಹಾಗೂ ಸದಸ್ಯರಾದ. ಜಾವಿದ್ ಚೌದ್ರಿ .ನಜೀರ್ ಜವಳ. ಟಿಪ್ಪು ಸುಲ್ತಾನ್ ಚೌಗಡ. ಪೀರ ಅಹ್ಮದ್ ಇಟಗಿ. ರಹೀಂ ಟೈಗರ್ ಖಲೀಮ ನಾಯ್ಕೋಡಿ

ಹಾಗೂ ಸಮಾಜದ ಎಲ್ಲ ಮುಖಂಡರು ಉಪಸ್ಥಿತರಿದ್ದರು

## ಕಾಲ್ತುಳಿತ: ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಮಾತಾಡಲಿ: ಬೆಲ್ಲದ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.7: ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಹೈಕಮಾಂಡ್ ನಾಯಕರು ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಮಾತನಾಡಬೇಕು ಎಂದು ವಿಧಾನಸಭೆ ವಿಪಕ್ಷ ಉಪ ನಾಯಕ ಅರವಿಂದ್ ಬೆಲ್ಲದ್ ಕಾಂಗ್ರೆಸ್ ಹೈಕಮಾಂಡ್‌ಗೆ ಆಗ್ರಹಿಸಿದ್ದಾರೆ. ಬಿಜೆಪಿ ಕಚೇರಿಯಲ್ಲಿ ಮಾತನಾಡಿದ ಅವರು, ಚಿನ್ನಸ್ವಾಮಿ ಕಾಲ್ತುಳಿತ ಘಟನೆಗೆ ಸಿಎಂ, ಡಿಸಿಎಂ, ಗೃಹ ಸಚಿವರೇ ಕಾರಣ. ತಕ್ಷಣ ಹೊಣೆ ಹೊತ್ತು 3ಜನ ರಾಜೀನಾಮೆ ಕೊಡಬೇಕು. ವಿಧಾನಸೌಧ ಎದುರಿನ ವೇದಿಕೆ 25–30 ಜನರಿಗೆ ಮಾತ್ರ ಸೀಮಿತವಾಗಿತ್ತು. ಆದರೆ 350 ಜನ ಬಂದಿದ್ದರು. ಸಚಿವರ ಕುಟುಂಬದವರೇ ತುಂಬಿದ್ದರು. ಘಟನೆ ಬಳಿಕ ಕಣ್ಣೀರಿನ



ರಾಜಕಾರಣ ಮಾಡಿದರು. ಘಟನೆ ತಿಳಿದಿದ್ದರೂ ಡಿಸಿಎಂ ಸ್ಟೇಡಿಯಂಗೆ ಹೋಗಿ ಕಪ್‌ಗೆ ಮುತ್ತುಕೊಟ್ಟಿದ್ದಾರೆ. ಸಾವಿನ ಮೇಲೆ ರಾಜಕೀಯ ಮಾಡುತ್ತಿರುವುದು ಯಾರು? ನಾಚಿಕೆ ಆಗಲ್ವಾ ಇವರಿಗೆ? ನಿಮಗೆ ಮಕ್ಕಳಿಲ್ವಾ, ಮನುಷ್ಯತ್ವ ಇಲ್ವಾ? ಎಂದು ವಾಗ್ದಾಳಿ ನಡೆಸಿದರು. ಈಗ ವಿಷಯಾಂತರ ಮಾಡಲು ಮುಂದಿನ ಸಂಪುಟಕ್ಕೆ ಜಾತಿಗಣತಿ ವಿಷಯ ತರುತ್ತಿದ್ದಾರೆ. ರಾಜ್ಯದ ಜನ ಇವರನ್ನು ಕ್ಷಮಿಸಲ್ಲ. ಜನರ ಮುಂದೆ ನಾವು ಹೋಗಬೇಕಾದ ಅವಶ್ಯಕತೆ ಇದೆ. ಈ ಬಗ್ಗೆ ಪಕ್ಷದಲ್ಲಿ ಚರ್ಚೆ ಮಾಡುತ್ತಿದ್ದೇವೆ. ನಿಜವಾದ ತಲೆದಂಡ ಆಗಬೇಕಾಗಿದ್ದು ಪೊಲೀಸರದ್ದಲ್ಲ. ಸಿಎಂ, ಡಿಸಿಎಂ, ಗೃಹ ಸಚಿವರ ತಲೆದಂಡ ಆಗಬೇಕು. ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಏನೂ ಮಾತಾಡಿಲ್ಲ. ಮಲಗಿಕೊಂಡಿದ್ದಾರಾ ಅವರು? ಕಾಂಗ್ರೆಸ್ ಹೈಕಮಾಂಡ್ ಘಟನೆ ಬಗ್ಗೆ ಮಾತನಾಡಬೇಕು ಎಂದು ಒತ್ತಾಯಿಸಿದರು.

## ಇಂದಿನಿಂದ ರಾಜ್ಯದಲ್ಲಿ ಮತ್ತೆ ಮಳೆ: 11 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.7: ರಾಜಧಾನಿ ಬೆಂಗಳೂರು ಸೇರಿದಂತೆ ಬಹುತೇಕ ಜಿಲ್ಲೆಗಳಲ್ಲಿ ಕೊಂಚ ವಿರಾಮವಾಗಿದ್ದ ಮುಂಗಾರು ಮಳೆ ಜೂನ್ 8ರಿಂದ ಮತ್ತೆ ಚುರುಕಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.



ಉತ್ತರ ಕರ್ನಾಟಕದ 11 ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ. ಕೃಷ್ಣಾ ನದಿ ತೀರದ ಜನರಿಗೆ ಪ್ರವಾಹದ ಎಚ್ಚರಿಕೆ ನೀಡಲಾಗಿದೆ, ಜಲಾಶಯದಿಂದ ನೀರು ಬಿಡುಗಡೆಯಾಗುವ ಸಾಧ್ಯತೆ ಇದೆ. ದಾವಣಗೆರೆಯಲ್ಲಿ ಮಳೆ ಬಿಡುವು ನೀಡಿದ್ದು, ಬಿತ್ತನೆ ಕಾರ್ಯ ಚುರುಕುಗೊಂಡಿದೆ.

ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಕೊಪ್ಪಳ, ಬಾಗಲಕೋಟೆ, ವಿಜಯಪುರ, ರಾಯಚೂರು, ಯಾದಗಿರಿ, ಕಲಬುರ್ಗಿ, ಬೀದರ್ ಜಿಲ್ಲೆಗಳಿಗೆ ಭಾರಿ ಮಳೆಯಾಗಲಿದ್ದು, ಇಂದು ಯೆಲ್ಲೋ ಅಲರ್ಟ್ ಕೊಡಲಾಗಿದೆ. ಜೂನ್ 9 ರವರೆಗೆ ರಾಜ್ಯಾದ್ಯಂತ ಅತಿ ಸಾಧಾರಣ ಮಳೆಯಾಗಲಿದೆ. ಜೂ. 10 ರಿಂದ 12ರವರೆಗೆ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ಕಾಲ್ತುಳಿತದಲ್ಲಿ 11 ಜನರ ಸಾವು ಕಂಬನಿ ಮಿಡಿದ ಜಯಮೃತ್ಯುಂಜಯ ಸ್ವಾಮಿಜೀ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.7: ಬೆಂಗಳೂರಿನಲ್ಲಿ ಆರ್‌ಸಿಬಿ ಸಂಭ್ರಮಾಚರಣೆ ವೇಳೆ ಕಾಲ್ತುಳಿತದಲ್ಲಿ 11 ಜನ ಮೃತಪಟ್ಟ ಘಟನೆ ಬಗ್ಗೆ ಕಲಬುರಗಿಯಲ್ಲಿ ಕೂಡಲಸಂಗಮದ ಶ್ರೀಜಯಮೃತ್ಯುಂಜಯ ಸ್ವಾಮೀಜಿ ಕಂಬನಿ ಮಿಡಿದಿದ್ದಾರೆ.



ಕಲಬುರಗಿಯಲ್ಲಿ ಮಾತನಾಡಿದ ಅವರು, ಕ್ರೀಡಾಪಟುಗಳ ಬಗ್ಗೆ, ನಟರ ಬಗ್ಗೆ, ರಾಜಕಾರಣಿಗಳ ಬಗ್ಗೆ ಅಭಿಮಾನವಿರಲಿ. ಆದರೆ ಅಂಧಾಭಿಮಾನ ಬೇಡ ಅಂತಾ ಶ್ರೀಗಳು ಹೇಳಿದರು.

ಈ ಹಿಂದೆ ಮಹಾರಾಷ್ಟ್ರದಲ್ಲಿ ಮುಂಬಯಿ ಇಂಡಿಯನ್ಸ್ ತಂಡ ಗೆದ್ದಿದ್ದಾಗ ಮುಂಬಯಿ ಪೊಲೀಸರು ಅಭೂತಪೂರ್ವ ಬಂದೋಬಸ್ತ್ ಕೈಗೊಂಡಿದ್ದರು.

ಆದರೆ ನಮ್ಮ ಸರ್ಕಾರ ಭದ್ರತೆ ನೀಡುವಲ್ಲಿ ಎಡವಿದೆ ಎಂದರು.

## ರಾಜಸ್ಥಾನದ ಆಸ್ಪತ್ರೆ ಐಸಿಯುನಲ್ಲೇ ಮಹಿಳಾ ರೋಗಿ ಮೇಲೆ ರೇಪ್

ಮಲ್ಲಮ್ಮ ನುಡಿ ವಾರ್ತೆ

ಜೈಪುರ:ಜೂ.7: ರಾಜಸ್ಥಾನದ ಅಲ್ವಾರ್‌ನಲ್ಲಿರುವ ಇಎಸ್‌ಐಸಿ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಐಸಿಯುಗೆ (ತೀವ್ರ ನಿಗಾ ಘಟಕ) ದಾಖಲಾಗಿದ್ದ ಮಹಿಳಾ ರೋಗಿ ಮೇಲೆ ನರ್ಸಿಂಗ್ ಸಿಬ್ಬಂದಿ ಅತ್ಯಾಚಾರ ಎಸಗಿರುವ ಘಟನೆ ನಡೆದಿದೆ. ಸಂತ್ರಸ್ತೆ ಕುಟುಂಬಸ್ಥರು ಐಸಿಯು ವಾರ್ಡ್‌ನ ಹೊರಗಿದ್ದಾಗಲೇ ಘಟನೆ ಸಂಭವಿಸಿದೆ. ವರದಿಗಳ ಪ್ರಕಾರ, ಇದೇ ತಿಂಗಳ ಜೂನ್ 4ರಂದು (ಬುಧವಾರ) ರಾತ್ರಿ 1:30ರ ಸುಮಾರಿಗೆ ಘಟನೆ ನಡೆದಿದೆ. 32 ವರ್ಷದ ಮಹಿಳೆಯನ್ನ ಇದೇ ಜೂನ್ 2ರಂದು ಟ್ಯೂಬೆಕ್ಟಮಿ ಶಸ್ತ್ರಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಜೂನ್ 4ರಂದು ಶಸ್ತ್ರಚಿಕಿತ್ಸೆ ನಂತರ ಆಕೆಯನ್ನ ಐಸಿಯುಗೆ ಸ್ಥಳಾಂತರಿಸಲಾಗಿತ್ತು. ಈ ವೇಳೆ ನರ್ಸಿಂಗ್ ಸಿಬ್ಬಂದಿ ಮಹಿಳೆಗೆ ಮತ್ತು ಬರುವ ಇಂಜೆಕ್ಷನ್ ನೀಡಿದ್ದಾನೆ. ಜೊತೆಗೆ ಆಕೆ ಮಲಗಿದ ನಂತರ ಆಕೆಯ ಪತಿಯನ್ನ ಹೊರ ಹೋಗುವಂತೆ ಸೂಚಿಸಿದ್ದಾನೆ.

ಇಂಜೆಕ್ಷನ್ ನೀಡಿದ್ದರ ಪರಿಣಾಮವಾಗಿ ಸಂತ್ರಸ್ತೆ ಅರೆಪ್ರಜ್ಞಾವಸ್ಥೆ ತಲುಪಿದ್ದಾರೆ. ಮರುದಿನ ಜೂನ್ 5 ರಂದು, ರಾತ್ರಿ ತನ್ನ ಮೇಲೆ ಲೈಂಗಿಕ ದೌರ್ಜನ್ಯ ನಡೆದಿದೆ ಎಂದು ತನ್ನ ಪತಿಗೆ ತಿಳಿಸಿದ್ದಾರೆ. ನರ್ಸಿಂಗ್ ಸಿಬ್ಬಂದಿ ತನ್ನ ಸ್ಥಿತಿಯನ್ನ ದುರುಪಯೋಗ ಮಾಡಿಕೊಂಡಿದ್ದಾನೆಂದು ಹೇಳಿದ್ದಾರೆ. ಅರೆಪ್ರಜ್ಞಾವಸ್ಥೆಯಲ್ಲಿದ್ದರಿಂದ ನಾನು ವಿರೋಧಿಸಲು ಆಗಲಿಲ್ಲ, ಸಹಾಯಕ್ಕಾಗಿ ಕರೆಯಲೂ ಆಗಲಿಲ್ಲ ಎಂದು ಹೇಳಿಕೊಂಡಿದ್ದಾಳೆ. ಈ ವಿಷಯವನ್ನು ಪತಿಗೆ ತಿಳಿಸಿದ ಬಳಿಕ ಪೊಲೀಸರಿಗೆ ಸಂತ್ರಸ್ತೆ ಪತಿ ದೂರು ನೀಡಿದ್ದಾರೆ. ಜೂನ್ 6ರಂದು ಸಂತ್ರಸ್ತೆ ವೈದ್ಯೆ ಡಾ. ದೀಪಿಕಾ ಅವರಿಗೆ ಘಟನೆ ಬಗ್ಗೆ ತಿಳಿಸಿದ್ದಾರೆ. ಆರೋಪಿಯಾದ ನರ್ಸಿಂಗ್ ಸಿಬ್ಬಂದಿಯನ್ನ ವಿಚಾರಣೆಗೆ ಒಳಪಡಿಸಿದಾಗ ತಪ್ಪೊಪ್ಪಿಕೊಂಡಿದ್ದಾನೆ ಎಂದು ಎಸ್‌ಎಚ್‌ಒ ಅಜಿತ್ ಬದ್ಸಾರ ದೃಢಪಡಿಸಿದರು. ಘಟನೆ ನಂತರ ಇಎ???ಸಿ ವೈದ್ಯಕೀಯ ಕಾಲೇಜಿನ ಡೀನ್ ಡಾ. ಅಸಿಮ್ ದಾಸ್ ಅವರು ಆಂತರಿಕ ಆಡಳಿತಾತ್ಮಕ ಸಮಿತಿಯನ್ನ ರಚಿಸಿದ್ದಾರೆ. ಅಲ್ಲದೇ ಪೊಲೀಸ್ ತನಿಖೆಗೆ ಸಂಪೂರ್ಣ ಸಹಕಾರ ನೀಡುವುದಾಗಿಯೂ ಹೇಳಿದ್ದಾರೆ.

ಎಂಐಎ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಟ್ರ್ಯಾಕ್ಟರ್, ಗೂಡ್ಸ್ ಮಧ್ಯೆ ಭೀಕರ ಅಪಘಾತ; ಇಬ್ಬರ ಸ್ಥಿತಿ ಗಂಭೀರ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 07 : ಬೀದರ ಜಿಲ್ಲೆಯ ಹುಮನಾಬಾದ್ ರಸ್ತೆಯಲ್ಲಿನ ಕಾರಂಜಾ ಜಲಾಶಯದ ಬಳಿ ಟ್ರ್ಯಾಕ್ಟರ್ ಹಾಗೂ ಗೂಡ್ಸ್ ವಾಹನದ ಮಧ್ಯೆ ಭೀಕರ ಅಪಘಾತ ನಡೆದಿರುವ ಘಟನೆ ನಡೆದಿದೆ. ಘಟನೆಯಲ್ಲಿ ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಬೀದರ್ ಮೂಲದ ಮಾರುತಿ, ಅರ್ಜುನ್ ಗಾಯಗೊಂಡಿದ್ದಾರೆ. ಗೂಡ್ಸ್ ವಾಹನ ಚಾಲಕ ಅರ್ಜುನ್ ಕಾಲು ಮುರಿದಿದೆ. ಗಾಯಾಳುಗಳು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಭಾಲ್ಕಿ ತಾಲೂಕಿನ ಧನ್ನೂರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಟ್ರ್ಯಾಕ್ಟರ್ ಚಾಲಕ ಪರಾರಿಯಾಗಿದ್ದಾನೆ.

## ಆತುರದ ನಿರ್ಧಾರದಿಂದ ತಪ್ಪು ಮಾಡಿದ್ದೇವೆ

ರಾಮನಗರ:ಜೂ.7: ಎಲ್ಲರೂ ಇಷ್ಟಪಡುವ ಆರ್‌ಸಿಬಿ ತಂಡ ಕಪ್ ಗೆದ್ದಿತ್ತು, ಆದರೆ ಅದರ ಸಂಭ್ರಮ ಮಾಡಲು ಹೋಗಿ ಸಾವು–ನೋವು ಸಂಭವಿಸಿದೆ. ತಡವಾಗಿ ಆಲೋಚನೆ ಮಾಡಿ ವಿಜಯೋತ್ಸವ ಆಚರಣೆ ಮಾಡಬಹುದಿತ್ತು ಎಂದು ಶಾಸಕ ಇಕ್ಬಾಲ್ ಹುಸೇನ್ ಹೇಳಿದ್ದಾರೆ.



ಆರ್‌ಸಿಬಿ ಸಂಭ್ರಮಾಚರಣೆ ವೇಳೆ ಕಾಲ್ತುಳಿತ ಪ್ರಕರಣ ಸಂಬಂಧ ರಾಮನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇಂದು ತ್ಯಾಗ ಬಲಿದಾನದ ಪ್ರತೀಕವಾಗಿ ಬಕ್ರೀದ್ ಆಚರಣೆ ಮಾಡುತ್ತಿದ್ದೇವೆ. ಕಾಲ್ತುಳಿತದಲ್ಲಿ ಮೃತಪಟ್ಟ 11 ಜನರ ಆತ್ಮಕ್ಕೆ ಶಾಂತಿ ಕೋರಿ ಇಂದು ಪ್ರಾರ್ಥನೆ ಮಾಡಿದ್ದೇವೆ. ಎಲ್ಲಾ ಮಸೀದಿಗಳಲ್ಲೂ ಪ್ರಾರ್ಥನೆ ಸಲ್ಲಿಸಿದ್ದೇವೆ. ಈ ದುರ್ಘಟನೆ ನಡೆಯಬಾರದಿತ್ತು, ನಡೆದು ಹೋಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಸಿದ್ಧತೆ, ಭದ್ರತೆ ಮಾಡಿಕೊಂಡು ಕಾರ್ಯಕ್ರಮ ಮಾಡಬೇಕಿತ್ತು. ಆದರೆ ಆತುರದಿಂದ ಕಾರ್ಯಕ್ರಮ ಮಾಡಿ ತಪ್ಪು ಮಾಡಿದ್ದೇವೆ. ನಾವೂ ತಪ್ಪು ಮಾಡಿದ್ದೇವೆ, ಅಧಿಕಾರಿ ವರ್ಗದವರು ತಪ್ಪು ಮಾಡಿದ್ದಾರೆ. ಈ ಕಾರ್ಯಕ್ರಮಕ್ಕೆ ಅನುಮತಿ ಕೊಡಲೇ ಬಾರದಿತ್ತು. ಘಟನೆ ನಮಗೆ ಹೆಚ್ಚು ದುಃಖವನ್ನ ತಂದಿದೆ. ಘಟನೆಯನ್ನ ನಾವು ಖಂಡಿಸುತ್ತೇವೆ ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.